ಸಂಪುಟ: ೦೭/ ಸಂಚಿಕೆ: ೧೬೪/ಶನಿವಾರ ದಿನಾಂಕ : ೧೬-೦೮-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 164/ SATURDAY Date : 16-08-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಚಂದ್ರಶೇಖರನಾಥ ಸ್ವಾಮೀಜಿ ವಿಧಿವಶ



ಬೆಂಗಳೂರು, : ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದ ಬೆಂಗಳೂರಿನ ಕೆಂಗೇರಿಯಲ್ಲಿರುವ ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಚಂದ್ರಶೇಖರನಾಥ ಶ್ರೀ(81) ತಡರಾತ್ರಿ 12.01ರ ಸುಮಾರಿಗೆ ವಿಧಿವಶರಾಗಿದ್ದಾರೆ.

ಚಂದ್ರಶೇಖರನಾಥ ಸ್ವಾಮೀಜಿ ಶ್ರೀ ಮಠದ ಸ್ಥಾಪನೆ ಮಾಡಿದರು. ಶಿಕ್ಷಣ ಮತ್ತು ಆಧ್ಯಾತ್ಮಿಕ ಕ್ಷೇತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ. ಸದ್ಯ ಸ್ವಾಮೀಜಿಗಳ ನಿಧನಕ್ಕೆ ರಾಜಕೀಯ ನಾಯಕರು ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ. ಈ ಕುರಿತಾಗಿ ಟ್ವೀಟ್ ಮಾಡಿರುವ ಡಿಸಿಎಂ ಡಿಕೆ ಶಿವಕುಮಾರ್ 'ವಿಶ್ವ ಒಕ್ಕಲಿಗರ ಮಠದ ಮಠಾಧೀಶರಾಗಿದ್ದ ಶ್ರೀ ಕುಮಾರ ಚಂದ್ರಶೇಖರ ಸ್ವಾಮೀಜಿ ಅವರು ಭೈರವೈಕ್ಯರಾದ ಸುದ್ದಿ ತಿಳಿದು ಮನಸ್ಸಿಗೆ ನೋವಾಗಿದೆ. ಪೂಜನೀಯರು ಸಮಾಜಕ್ಕೆ ನೀಡಿದ ಕೊಡುಗೆ ಅಪಾರ. ಅವರ ದಿವ್ಯ ಆತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ಕರುಣಿಸಲಿ. ಈ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ದೇವರು ಅವರ ಸಮಸ್ತ ಭಕ್ತವೃಂದಕ್ಕೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ' ಎಂದು ಹೇಳಿದ್ದಾರೆ.

# ಆರೋಗ್ಯ ಕಾರ್ಯಕರ್ತೆಯರ ವೇತನ ಪಾವತಿ ಗೊಂದಲ ಬಗೆಹರಿಸಲು ಕ್ರಮ

ಬೆಂಗಳೂರು: "ಬಿಬಿಎಂಪಿ ಆರೋಗ್ಯ ಕಾರ್ಯಕರ್ತೆಯರ ವೇತನ ಗೊಂದಲವನ್ನು ಅಧಿಕಾರಿಗಳ ಜತೆ ಚರ್ಚಿಸಿ, ಬಗೆಹರಿಸಲಾಗುವುದು" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಭರವಸೆ ನೀಡಿದರು.

ಸದಾಶಿವನಗರದ ನಿವಾಸದ ಬಳಿ ಶನಿವಾರ ಆಗಮಿಸಿದ್ದ ಬಿಬಿಎಂಪಿ ಆರೋಗ್ಯ ಸಂಪರ್ಕ ಕಾರ್ಯಕರ್ತೆಯರ ಅಹವಾಲು ಸ್ವೀಕರಿಸಿ ಮಾತನಾಡಿ, ರೋಗ್ಯ ಕಾರ್ಯಕರ್ತೆಯರ ವೇತನ ಪಾವತಿ ಜವಾಬ್ದಾರಿ ಕುರಿತು ಚರ್ಚಿಸಲು ನಿಮ್ಮಲ್ಲಿ ಐದು ಜನರ ನಿಯೋಗದೊಂದಿಗೆ ಇನ್ನೊಮ್ಮೆ ನನ್ನನ್ನು ಭೇಟಿ ಮಾಡಿ. ನಿಮ್ಮ ಸಮಸ್ಯೆಗಳ ಬಗ್ಗೆ ಅಧಿಕಾರಿಗಳ ಜತೆ ಚರ್ಚಿಸಿ ಬಗೆಹರಿಸಲಾಗುವುದು" ಎಂದು ಹೇಳಿದರು.



"ಬಿಬಿಎಂಪಿ ಗುತ್ತಿಗೆದಾರರಿಂದ ನಿಮಗೆ ವೇತನ ಪಾವತಿ ಆಗುವುದಿಲ್ಲ. ಬೆಂಗಳೂರು ಘನತ್ಯಾಜ್ಯ ನಿರ್ವಹಣಾ ಸಂಸ್ಥೆಯನ್ನು (ಬಿಎಸ್ಡಬ್ಲ್ಯೂಎಂಎನ್) ಬೆಂಗಳೂರು ನಗರದ ಕಸ ನಿರ್ವಹಣೆಗೆಂದು ಸ್ಥಾಪಿಸಲಾಗಿದೆ. ಇದನ್ನು ಗುತ್ತಿಗೆದಾರರು ನಿರ್ವಹಣೆ ಮಾಡುವುದಿಲ್ಲ. ಇದರ ಮುಖ್ಯಸ್ಥರಾಗಿ ಐಎಎಸ್ ಅಧಿಕಾರಿಯೇ ಇರುತ್ತಾರೆ" ಎಂದು ಹೇಳಿದರು.

ಡಿಸಿಎಂ ಅವರಿಗೆ ಸಲ್ಲಿಸಿದ್ದ ಮನವಿಯಲ್ಲಿ, "2017 ರಲ್ಲಿ ಎನ್ ಎಚ್ ಯುಎಂ ವತಿಯಿಂದ ಆಶಾ ಕಾರ್ಯಕರ್ತೆಯರನ್ನು ನೇಮಕ ಮಾಡಿಕೊಂಡ ಕಾರಣಕ್ಕೆ ಆರೋಗ್ಯ ಸಂಪರ್ಕ ಕಾರ್ಯಕರ್ತೆಯರನ್ನು ಘನತ್ಯಾಜ್ಯ ನಿರ್ವಹಣಾ ವಿಭಾಗಕ್ಕೆ ವರ್ಗವಣೆ ಮಾಡಲಾಯಿತು. ಈಗ ಬಿ.ಎಸ್.ಡಬ್ಲ್ಯೂ.ಎಂ.ಎನ್ ಕಡೆಯಿಂದ ವೇತನ ಪಾವತಿ ಎಂದು ತಿಳಿಸಿರುತ್ತಾರೆ. ಕಳೆದ 30 ವರ್ಷಗಳಿಂದ ಪಾಲಿಕೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳೆಯರಿಗೆ ಬಿಬಿಎಂಪಿಯಿಂದಲೇ ವೇತನ ಪಾವತಿ ವ್ಯವಸ್ಥೆ ಮಾಡಬೇಕು ಎಂದು ಕೋರಲಾಗಿದೆ.

## ಜಿಲ್ಲೆಯ ಬಹುನಿರೀಕ್ಷಿತ ಯೋಜನೆಗಳಿಗೆ ಶೀಘ್ರವೇ ಚಾಲನೆ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಬೆಳಗಾವಿ ಜನತೆಯ ಬಹು ನಿರೀಕ್ಷಿತ ಮೇಲ್ಸೇತುವೆ ಕಾಮಗಾರಿ, ನೂತನ ಜಿಲ್ಲಾಧಿಕಾರಿ ಕಚೇರಿ, ಪತ್ರಿಕಾ ಭವನದ ನೂತನ ಕಟ್ಟಡಕ್ಕೆ ಮುಂಬರುವ ತಿಂಗಳವೇ ಸಿಎಂ ಸಿದ್ದರಾಮಯ್ಯನವರು ಚಾಲನೆ ನೀಡುವವರು ಎಂದು ಲೋಕೋಪಯೋಗಿ ಇಲಾಖೆ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ 97ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ, ನಂತರ ಸುದ್ದಿಸಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿ ಜಿಲ್ಲೆಯಲ್ಲಿ ನೀರಾವರಿ ಇಲಾಖೆಯಿಂದ 1 ಲಕ್ಷ ಹಕ್ಟೇರ್ ಪ್ರದೇಶಕ್ಕೆ ನೀರು ಕಲ್ಪಿಸುವ ಗುರಿ ಹೊಂದಿದ್ದು, ಕೆರೆ ತುಂಬಿಸುವ ಯೋಜನೆಗೆ ಪ್ರಾಮುಖ್ಯತೆ ನೀಡುತ್ತಿದ್ದೇವೆ ಎಂದು ತಿಳಿಸಿದರು.

215 ಕೋಟಿ ರೂ. ವೆಚ್ಚದಲ್ಲಿ ಸವದತ್ತಿ ಯಲ್ಲಮ್ಮ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಮುಂದಾಗಿರುವ ಸರ್ಕಾರ ಸರಕಾರ ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಟೆಂಡರ್ ಪ್ರಕ್ರಿಯೆ ಆರಂಭಗೊಂಡಿದೆ. ಸವದತ್ತಿ ಯಲ್ಲಮ್ಮ ಕ್ಷೇತ್ರದ ಅಭಿವೃದ್ಧಿಗಾಗಿ ಸಚಿವ ಎಚ್.ಕೆ. ಪಾಟೀಲ್ ಅವರು ವಿಶೇಶ ಕಾಳಜಿ ವಹಿಸಿದ್ದಾರೆ. ಇನ್ನು ನೂತನ ಜಿಲ್ಲಾಧಿಕಾರಿ ಕಟ್ಟಡ ನಿರ್ಮಾಣಕ್ಕಾಗಿ ರೂ.55 ಕೋಟಿ ರೂ. ಅನುದಾನ ಮೀಸಲಿಟ್ಟಿದ್ದು, ಪತ್ರಿಕಾ ಭವನದ ನೂತನ ಕಟ್ಟಡಕ್ಕೂ ನಮ್ಮ ಇಲಾಖೆಯಿಂದ 10 ಕೋಟಿ ರೂ. ಒದಗಿಸಲು ಅನುಮೋದನೆ ನೀಡಲಾಗಿದೆ ಎಂದು ಮಾಹಿತಿ ನೀಡಿದರು.

ಬೆಳಗಾವಿ ಜನತೆಯ ಬಹು ನಿರೀಕ್ಷಿತ ಒಂದನೇ ಹಂತದ ಫ್ಲೈ ಓವರ್ ಕಾಮಗಾರಿ ಸಂಕಮ್ ಹೋಟೆಲ್ ನಿಂದ ಆರಂಭಗೊಂಡು ಅಶೋಕ ವೃತ್ತ, ಆರ್ ಟಿ ಒ ಸರ್ಕಲ್, ಚನ್ನಮ್ಮ ವೃತ್ತ, ಬೊಗಾರೇಸ್ ಸರ್ಕಲ್‌ಗೆ ಮುಕ್ತಾಯವಾಗುತ್ತದೆ. 4.5 ಕಿ.ಮೀ ವ್ಯಾಪ್ತಿಯ ಮೇಲ್ಸೇತುವೆ ಕಾಮಗಾರಿ ಇದಾಗಿದ್ದು 200 ಕೋಟಿ ರೂಪಾಯಿ ನಮ್ಮ ಇಲಾಖೆಯಿಂದ ವ್ಯಯಿಸಲಾಗುವುದು, ಈ ಕಾಮಗಾರಿಯನ್ನು ಸೆಪ್ಟಂಬರ್ ತಿಂಗಳಲ್ಲಿ ಪ್ರಾರಂಭಿಸಲಾಗುವುದು ಎಂದು ತಿಳಿಸಿದರು.

ಇನ್ನು 2013ರಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಅವಧಿಯಲ್ಲಿ ಚಾಲನೆ ನೀಡಿದ ವಿವಿಧ ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿದ್ದು, ಸೆಪ್ಟಂಬರ್ ತಿಂಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳನ್ನು ಸಿಎಂ ಸಿದ್ದರಾಮಯ್ಯನವರೇ ಉದ್ಘಾಟಿಸುವವರು ಎಂದ ಸಚಿವರು, ಜಿಲ್ಲಾ ಕ್ರೀಡಾಂಗಣಕ್ಕೂ ವರ್ಷಕ್ಕೆ 10 ಕೋಟಿ ರೂ. ವ್ಯಯಿಸುವ ಮೂಲಕ ಸುಸಜ್ಜಿತ ಕ್ರೀಡಾಂಗಣ ನಿರ್ಮಿಸಲಾಗವುದು ಎಂದರು.

ಈ ಸಂದರ್ಭದಲ್ಲಿ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಪೋಲಿಸ್ ಆಯುಕ್ತ ಭೂಷಣ ಗುಲಾಬರಾವ್ ಭೋರಸೆ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಇದ್ದರು.

### ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಪ್ರಗತಿ ಪರಿಶೀಲಾ ಸಭೆ

# ನಿಗದಿತ ಅವಧಿಯಲ್ಲಿ ರಸ್ತೆ ಕಾಮಗಾರಿ ಪೂರ್ಣಗೊಳಿಸಿ



ಬಾಗಲಕೋಟೆ: ರಾಷ್ಟ್ರೀಯ ಹೆದ್ದಾರಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಕೈಗೊಂಡ ರಸ್ತೆ ಕಾಮಗಾರಿಗಳನ್ನು ನಿಗದಿತ ಸಮಯದಲ್ಲಿ ಪೂರ್ಣಗೊಳಿಸುವಂತೆ ಸಂಸದ ಪಿ.ಸಿ.ಗದ್ದಿಗೌಡರ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಶನಿವಾರದಂದು ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಖಾನಾಪೂರದಿಂದ ಗದ್ದನಕೇರಿ ಕ್ರಾಸ್‌ವರೆಗೆ ನ್ಯಾಷನಲ್ ಹೈವೆ 367ಗೆ ಸಂಬಂಧಿಸಿದಂತೆ ಬಾಗಲಕೋಟೆ ವ್ಯಾಪ್ತಿಗೆ ಬರುವ 71 ರಿಂದ 156 ಕಿ.ಮೀದಲ್ಲಿ 71 ರಿಂದ 104 ಕಿ.ಮೀ ವರೆಗಿನ ಸರ್ಜಾಪೂರದಿಂದ ಪಟ್ಟದಕಲ್ಲವರೆಗಿನ 25 ಕಿ.ಮೀ ರಸ್ತೆ ಕಾಮಗಾರಿಗಳ ಬಗ್ಗೆ ಚರ್ಚೆ ಮಾಡಿದರು. ಸರ್ಜಾಪೂರದಿಂದ ಪಟ್ಟದಕಲ್ಲವರೆಗೆ ಇರುವ 25 ಕಿ.ಮೀ ರಸ್ತೆ ಕಾಮಗಾರಿಯಲ್ಲಿ ಶೇ.50 ರಷ್ಟು ಅಂದರೆ 12 ಕಿ.ಮೀ ರಸ್ತೆ ಪೂರ್ಣಗೊಳಿಸಲಾಗಿದೆ. ಅರಣ್ಯ ಜಾಗವಾಗಿರುವದರಿಂದ ಅವರಿಂದ ಎನ್.ಓ.ಸಿ ಬಂದಿರುವದಿಲ್ಲ. ಇದರಿಂದ ಬಾಕಿ ಕಾಮಗಾರಿಯಲ್ಲಿ ವಿಳಂಬವಾಗಿದೆ. ಅಲ್ಲದೆ ರಸ್ತೆ ಮದ್ಯ ಸೇತುವೆ ನಿರ್ಮಾಣ ಕಾಮಗಾರಿ ಬಂದಿದ್ದರಿಂದ ಇದು ಸಹ ವಿಳಂಬಕ್ಕೆ ಕಾರಣವಾಗಿರುವುದಾಗಿ ಹುಬ್ಬಳ್ಳಿ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ವಿ.ಎನ್.ಪಾಟೀಲ ಸಭೆಗೆ ತಿಳಿಸಿದರು. ಅರಣ್ಯ ಇಲಾಖೆಗೆ ಸಂಬಂಧಿಸಿದ ಎನ್.ಓ.ಸಿಗಳು ಬೇಗನೇ ಸಿಗುವಂತೆ ಕ್ರಮವಹಿಸಲು ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್‌ಗೆ ಸಂಸದರು ಸೂಚನೆ ನೀಡಿದರು.

ಪಟ್ಟದಕಲ್ಲದಿಂದ ಶಿರೂರ ವರೆಗಿನ 104 ರಿಂದ 133 ವರೆಗಿನ 25 ಕಿ.ಮೀ ರಸ್ತೆ ಕಾಮಗಾರಿಯಲ್ಲಿ ವಿಳಂಬಕ್ಕೆ ಅರಣ್ಯ ಇಲಾಖೆಯ ಬೇಗನೇ ಅನುಮತಿ ಸಿಗದ ಕಾರಣ ಕಾಮಗಾರಿ ಪೂರ್ಣಗೊಳಿಸಲು ಸಾಧ್ಯವಾಗುತ್ತಿಲ್ಲ. ಅಲ್ಲದೇ 133 ರಿಂದ 156 ಕಿ.ಮೀ ಕಾಮಗಾರಿಯಲ್ಲಿ ಶೇ.80 ರಷ್ಟು ಪ್ರಗತಿ ಸಾಧಿಸಿದ್ದು, ಬಾಕಿ ಕಾಮಗಾರಿಗೆ ಭೂ ಸ್ವಾಧೀನ, ರೈಲ್ವೆ ಮೇಲ್ಸೆತುವೆ ನಿರ್ಮಾಣ ಹಾಗೂ ಚರಂಡಿ ಇರುವ ಹಿನ್ನಲೆಯಲ್ಲಿ ವಿಳಂಬವಾಗಿದೆ ಎಂದು ಸಂಬಂಧಿಸಿದ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದರು. ಸಮಸ್ಯೆ ಇರದ ಜಾಗದಲ್ಲಾದರೂ ಕಾಮಗಾರಿ ಪ್ರಾರಂಭಿಸುವಂತೆ ಸಂಸದ ಗದ್ದಿಗೌಡರ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಉಪ ಅರಣ್ಯ ಸಂರಕ್ಷಣಾಧಿಕಾರಿ ರುಥ್ರೇನ್, ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಸೇರಿದಂತೆ ರಾಷ್ಟ್ರೀಯ ಹೆದ್ದಾರಿ ವಿಜಯಪುರ ವಿಭಾಗದ ವಿಜಯ ಪಾಟೀಲ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಗಿರೀಶ ಯಲಮಾರ್ಗ, ವಿವೇಕ ಮಠ ಹಾಗೂ ಇತರರು ಉಪಸ್ಥಿತರಿದ್ದರು.

# ಆ. ೨೦ರ ವರೆಗೂ ಭಾರಿ ಮಳೆ ಮುನ್ಸೂಚನೆ

ಬೆಂಗಳೂರು: ಆಗಸ್ಟ್ 20 ರ ವರೆಗೂ ಕರ್ನಾಟಕದ ಹಲವೆಡೆ ಭಾರಿ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಬೆಂಗಳೂರು ಕೇಂದ್ರ ಮುನ್ಸೂಚನೆ ನೀಡಿದೆ. ಮುಂದಿನ ನಾಲ್ಕು ದಿನಗಳ ಕರ್ನಾಟಕ ಹವಾಮಾನ ಮುನ್ಸೂಚನೆ ಲಭ್ಯವಾಗಿದ್ದು, ರಾಜ್ಯದ ಉತ್ತರ ಹಾಗೂ ದಕ್ಷಿಣ ಒಳನಾಡು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಿಗೆ ರೆಡ್ ಮತ್ತು ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ.

ಆಗಸ್ಟ್ 17 ರಂದು ಉತ್ತರ ಕನ್ನಡ, ಉಡುಪಿ, ಚಿಕ್ಕಮಗಳೂರು ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಈ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಆಗಸ್ಟ್ 18ರಂದು ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದ್ದು ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ. ದಕ್ಷಿಣ ಕನ್ನಡ, ಹಾಸನ, ಮೈಸೂರು, ಕೊಡಗು, ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ರಾಜಧಾನಿ ಬೆಂಗಳೂರಿಗೆ ಆಗಸ್ಟ್ 19 ರ ವರೆಗೂ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ನಗರದಲ್ಲಿ ಬಲವಾದ ಗಾಳಿ ಬೀಸುವಿಕೆ ಇರಲಿದ್ದು, ತುಂತುರು ಮಳೆಯಾಗುವ ಸಾಧ್ಯತೆಯೂ ಇದೆ. ಮುಂದಿನ 7 ದಿನಗಳ ಕಾಲ ರಾಜ್ಯದಾದ್ಯಂತ ಜೋರಾದ ಗಾಳಿಯೊಂದಿಗೆ ಕೆಲವೆಡೆ ವ್ಯಾಪಕವಾಗಿ ಮತ್ತು ಇನ್ನು ಕೆಲವೆಡೆ ಸಾಧಾರಣ ಮಳೆಯಾಗಲಿದೆ. ಆಗಸ್ಟ್ 18 ಮತ್ತು 19 ರಂದು ಕರಾವಳಿ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಕೇಂದ್ರ ಮುನ್ಸೂಚನೆ ನೀಡಿದೆ.

## ಉನ್ನತ ಹುದ್ದೆ ಪಡೆಯಲು ನೀಟ್-ಜೆಇಇ- ಸಿಇಟಿ ಪರೀಕ್ಷೆಯ ತರಬೇತಿ ಪಡೆಯಿರಿ :ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ: ಪದವಿ ಪೂರ್ವ ಶಿಕ್ಷಣ ಹಂತ ವಿದ್ಯಾರ್ಥಿಗಳ ಶೈಕ್ಷಣಿಕ ಜೀವನದ ಬಹಳ ಪ್ರಮುಖ ಘಟ್ಟವಾಗಿದೆ. ಭವಿಷ್ಯದ ವೃತ್ತಿ ಆಯ್ಕೆಗೆ ಪೂರಕವಾದ ಶಿಕ್ಷಣ ಆಯ್ಕೆ ಮಾಡಲು ನೀಟ್/ ಜೆಇಇ/ಸಿಇಟಿ ಪರೀಕ್ಷೆಗಳಲ್ಲಿ ಉತ್ತಮ ಶ್ರೇಣಿ ಪಡೆಯುವುದು ಮುಖ್ಯ ಎಂದು ಸಚಿವ ಸತೀಶ ಜಾರಕಿಹೊಳಿ ಅವರು ಹೇಳಿದರು.

ನಗರದ ಸಮಾಜ ಕಲ್ಯಾಣ ಇಲಾಖೆಯಲ್ಲಿ ಜಿಪಂ ವತಿಯಿಂದ ಶುಕ್ರವಾರ ಆಯೋಜಿಸಲಾದ ಬೈಲಹೊಂಗಲ ಮತ್ತು ಮಜಲಟ್ಟಿಯಲ್ಲಿ ಪ್ರಾರಂಭಿಸಿದ ?ಸೂಪರ್-50 ಬೆಳಗಾವಿ ಸರ್ಕಾರಿ ಪದವಿ ಪೂರ್ವ ಕಾಲೇಜು ವಿದ್ಯಾರ್ಥಿಗಳಿಗೆ ಐಐಟಿ, ನೀಟ್ ಮತ್ತು ಸಿಇಟಿ ಪರೀಕ್ಷೆಗಳಿಗೆ ತರಬೇತಿಯ ಕಾರ್ಯಕ್ರಮನ್ನು ಉದ್ಘಾಟಿಸಿ ಅವರು ಮಾತನಾಡಿದರು.

"ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ವಿಜ್ಞಾನ ಅಭ್ಯಾಸ ಮಾಡುವ ವಿದ್ಯಾರ್ಥಿಗಳಿಗೂ ನೀಟ್?/ಜೆಇಇ/ಸಿಇಟಿ ಪ್ರವೇಶ ಪರೀಕ್ಷೆಗಳಿಗೆ ತರಬೇತಿ ಸಿಗಬೇಕು ಎಂಬುದು ನಮ್ಮ ಸರ್ಕಾರದ ಆಶಯವಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರಿ ಪಿಯು ಕಾಲೇಜುಗಳ ವಿಜ್ಞಾನ ವಿಭಾಗದಲ್ಲಿ ಅಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಉನ್ನತ ಶಿಕ್ಷಣ ಕೋರ್ಸ್‌ಗಳ ಪ್ರವೇಶ ಪರೀಕ್ಷೆಗಳಿಗೆ ಗುಣಮಟ್ಟದ ತರಬೇತಿಯನ್ನು ಉಚಿತವಾಗಿ ನೀಡಲು ಬಜೆಟ್‌ನಲ್ಲಿ ಘೋಷಣೆ ಮಾಡಲಾಗಿತ್ತು" ಎಂದು ಹೇಳಿದರು.

"ಸರ್ಕಾರಿ ಪದವಿ ಪೂರ್ವ ಕಾಲೇಜುಗಳು ಸಹ ಇತ್ತೀಚಿನ ದಿನಗಳಲ್ಲಿ ಉತ್ತಮ ಮೂಲಭೂತ ಸೌಕರ್ಯಗಳನ್ನು ಹೊಂದಿದ್ದು, ಶೈಕ್ಷಣಿಕ ಚಟುವಟಿಕೆಗಳು ಸಹ ಉನ್ನತ ಮಟ್ಟದಾಗಿದ್ದು ಹಾಗೂ ಹೆಚ್ಚಿನ ಸೌಕರ್ಯ ನೀಡಲಾಗಿದೆ. ಉತ್ತಮ ದಾಖಲಾತಿಯೊಂದಿಗೆ ಉತ್ತಮ ಫಲಿತಾಂಶವನ್ನು ಸಹ ನಿರೀಕ್ಷಿಸಬಹುದು" ಎಂದು ತಿಳಿಸಿದರು.

ಬೆಳಗಾವಿಯಲ್ಲಿ ಸದ್ಯ ಜಾರಿಯಲ್ಲಿರುವ 'ಸಿಇಟಿ-ಸಕ್ಷಮ್' ಕಾರ್ಯಕ್ರಮವು ಇಡೀ ರಾಜ್ಯಕ್ಕೆ ಮಾದರಿಯಾಗಿ ಹೊರಹೊಮ್ಮಿದೆ. ಇದಕ್ಕೆ ಜಿಲ್ಲಾ ಪಂಚಾಯತಿ ಸಿಇಒ ರಾಹುಲ್ ಶಿಂಧೆ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಕಾರ್ಯಕ್ರಮದ ಹೆಮ್ಮೆಯ ವಿಷಯವಾಗಿದೆ. ಅವರು ಈಗಾಗಲೇ ಐಐಟಿ, ನೀಟ್ ಮತ್ತು ಸಿಇಟಿ ಪರೀಕ್ಷೆಗಳನ್ನು ಎದುರಿಸಿದ ಬಳಿಕ, ಉನ್ನತ್ ಹುದ್ದೆ ಪಡೆದುಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ನೀವು ಕೂಡ ತರಬೇತಿ ಪಡೆದು ಜೀವನದಲ್ಲಿ ತಮ್ಮ ಗುರಿಯನ್ನು ಮುಟ್ಟಬೇಕು ಎಂದು ಹೇಳಿದರು.

ಎಸ್ಸೆಎಸ್ಸೆಲ್ಸಿ ಪಾಸಾದ ಎಸ್ ಸಿ/ಎಸ್ ಟಿ ಹಿಂದುಳಿದ ವರ್ಗಗಳ ಹಾಗೂ ಅಲ್ಪಸಂಖ್ಯಾತರ ಪ್ರತಿಭಾನ್ವಿತ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಐಐಟಿ, ನೀಟ್ ಮತ್ತು ಸಿಇಟಿ ಪರೀಕ್ಷೆಗಳಲ್ಲಿ ಯಶಸ್ಸು ಗಳಿಸಲು ಸೂಕ್ತ ಪೂರ್ವತಯಾರಿ ಹಾಗೂ ಮಾರ್ಗದರ್ಶನದ ಅಗತ್ಯವಾಗಿದೆ ಎಂದು ತಿಳಿಸಿದರು.

ಈಗಾಗಲೇ ಚಿಕ್ಕೋಡಿ ತಾಲ್ಲೂಕಿನ ಸರ್ಕಾರಿ ಪದವಿಪೂರ್ವ ಕಾಲೇಜು ಮಜಲಟ್ಟಿ ಮತ್ತು ಬೈಲಹೊಂಗಲದ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ದ್ವಿತೀಯ ಪಿಯುಸಿ ಓದುತ್ತಿರುವ ಮಕ್ಕಳಿಗೆ ಈ ವರ್ಷ ಐಐಟಿ, ನೀಟ್ ಮತ್ತು ಸಿಇಟಿ ಪರೀಕ್ಷೆಗಳನ್ನು ಬರೆದು ಉತ್ತಮ ಫಲಿತಾಂಶ ಪಡೆಯಲು ಅನುಕೂಲವಾಗಲಿದೆ ಎಂದು ಹೇಳಿದರು.

ಈ ಬಗ್ಗೆ ಎರಡೂ ಕಾಲೇಜುಗಳಿಂದ ಸುಮಾರು ಸಾವಿರ ವಿದ್ಯಾರ್ಥಿಗಳಿಗೆ ಕಠಿಣವಾದ ಅರ್ಹತಾ ಪರೀಕ್ಷೆ ನಡೆಸಿ ಸೂಪರ್-50 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಗಿದೆ. ಈ ವಿದ್ಯಾರ್ಥಿಗಳಿಗೆ ಇಂದಿನಿಂದ ತರಬೇತಿ ಪ್ರಾರಂಭಿಸಲಾಗುತ್ತಿದೆ. ಪರೀಕ್ಷಾ ತಯಾರಿಗಾಗಿ ಬೇಕಾದ ಪುಸ್ತಕಗಳನ್ನು ಒದಗಿಸಲಾಗಿದೆ ಹಾಗೂ ಸ್ಮಾರ್ಟ್ ಕ್ಲಾಸಗಳನ್ನು ಸಿದ್ಧಪಡಿಸಲಾಗಿದೆ. ಈ ಸೂಪರ್-50 ವಿದ್ಯಾರ್ಥಿಗಳಿಗೆ ಬೇಕಾದ ಸಹಾಯ ಸೌಲಭ್ಯಗಳನ್ನು ಪಡೆದುಕೊಳ್ಳಬಹುದು ಎಂದು ಹೇಳಿದರು.

ಈ ವೇಳೆ ಶಾಸಕ ಆಸೀಫ್ ಸೇಠ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿ.ಪಂ. ಸಿಇಓ ರಾಹುಲ್ ಶಿಂಧೆ, ನಗರ ಪೋಲೀಸ್ ಕಮಿಷನರ್ ಭೂಷಣ್ ಗುಲಾಬರಾವ್ ಹಾಗೂ ಇತರರು ಇದ್ದರು.

# ದೇಶದ ನದಿಗಳ ಉಳಿವು-ಸಂರಕ್ಷಣೆ ಮುಖ್ಯವಾಗಿದೆ: ನಿರಾಣಿ

ಜಮಖಂಡಿ: ದೇಶದಲ್ಲಿ ನದಿಗಳ ಉಳಿವು ಜೊತೆಗೆ ಸಂರಕ್ಷಣೆ ಬಹಳಷ್ಟು ಮುಖ್ಯವಾಗಿದೆ. ನಮ್ಮ ಭಾಗದ ಜೀವನಾಡಿ ಕೃಷ್ಣಾನದಿ ಮಹಿಮೆ ಅರಿತುಕೊಳ್ಳಬೇಕಾಗಿದೆ ಎಂದು ಎಂ.ಆರ್.ಎನ್.ಸಮೂಹ ಸಂಸ್ಥೆ ನಿರ್ದೇಶಕ ಸಂಗಮೇಶ ನಿರಾಣಿ ಹೇಳಿದರು.

ತಾಲೂಕಿನ ಹಿಪ್ಪರಗಿ ಗ್ರಾಮದ ಸಂಗಮೇಶ್ವರ ದೇವಸ್ಥಾನ ಆವರಣದಲ್ಲಿರುವ ಕೃಷ್ಣಾನದಿ ತೀರದಲ್ಲಿ ಕೃಷ್ಣಾರತಿ, ಕೃಷ್ಣ ಪುಣ್ಯಸ್ನಾನ, ಕುಂಭಮೇಳ ಶೋಭಾಯಾತ್ರೆ, ಲೋಕಕಲ್ಯಾಣಕ್ಕೆ ವಿಶೇಷ ಪೂಜೆ ಹೋಮ ಮತ್ತು ಮಾಜಿ ಸಚಿವ ಮುರಗೇಶ ನಿರಾಣಿ ಅವರ 60ನೇ ವರ್ಷದ ಹುಟ್ಟುಹಬ್ಬದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮುರಗೇಶ ನಿರಾಣಿ ಅವರ 60ನೇ ವರ್ಷದ ಹುಟ್ಟುಹಬ್ಬದಂದು 60 ನಾಗಾಸಾಧುಗಳ ಆಗಮನದಿಂದ ನಮ್ಮ ನೆಲ ಇನ್ನಷ್ಟು ಪುಣ್ಯಕ್ಷೇತ್ರವಾಗಿದೆ. ನಾಗಸಾಧುಗಳು, ಅಘೋರಿಗಳು, ಸಂತರು, ಸಾಧುಗಳು ಭಾಗವಹಿಸಿದ್ದಾರೆ. ಇಂತಹ ಮಹಾನ ಸಾಧುಸಂತರ ಆಶೀರ್ವಾದ ನಮ್ಮೆಲ್ಲರಿಗೂ ಸದಾಕಾಲ ಲಭಿಸಲಿ. ನಮ್ಮ ನಾಡು ರಕ್ಷಣೆಗೆಗಾಗಿ ದುಡಿದ ಮಹನೀಯರನ್ನು ನೆನಪಿಸಕೊಳ್ಳಬೇಕು. ನಿಮ್ಮೆಲ್ಲರ ಮುರಗೇಶ ನಿರಾಣಿ ಅವರು ಮುಂದಿನ 100ವರ್ಷ ಮುಂದಾಲೋಚನೆ ಹೊಂದಿರುವ ದೂರದೃಷ್ಟಿ ಯೋಜನೆಗಳನ್ನು ಹಮ್ಮಿಕೊಂಡಿದ್ದಾರೆ.



ದೂರದೃಷ್ಟಿ ಯೋಚನೆ ಮೂಲಕ ಮಕ್ಕಳನ್ನು ವಿದ್ಯಾವಂತರನ್ನಾಗಿಸಿ ಅವರಿಗೆ ಉದ್ಯೋಗ ನೀಡುವದು. ಅವರೆಲ್ಲರನ್ನು ಪ್ರತಿಷ್ಠಿತ ಉದ್ಯಮಿಗಳಾಗಿ ರೂಪಿಸಿ ದೇಶದ ಪ್ರಗತಿಗೆ ಅಳಿಲು ಸೇವೆ ಮಾಡುವ ಮಹತ್ತರ ಯೋಜನೆ ಕೂಡ ಇದೆ ಎಂದರು.

ಹರಿಹರ ಪೀಠದ ವಚನಾನಂದ ಶ್ರೀಗಳು ಮಾತನಾಡಿ, ನಾಯಕನಾದವನು ತನ್ನ ಹುಟ್ಟುಹಬ್ಬವನ್ನು ಸಾವಿರಾರು ಸಾಧುಸಂತರನ್ನು ಕರೆಸಿ ತಮಗೆ ಮಾತ್ರವಲ್ಲದೆ ಕೃಷ್ಣೆ ಭಾಗದ ರೈತರಿಗೂ ನಾಗಾಸಾಧುಗಳ ದರ್ಶನ ಕಲ್ಪಿಸಿದ್ದು ಮಹತ್ತರ ಕೆಲಸವಾಗಿದೆ. ಕೇವಲ ಒಬ್ಬ ಸಣ್ಣ ಕಬ್ಬು ಬೆಳೆಗಾರರಾಗಿದ್ದವರು ಇಂದು ಬೃಹತ ಉದ್ದಿಮೆಯಾಗಿ ಬೆಳೆದು ಹಲವಾರು ರಂಗದಲ್ಲಿ ಗುರುತಿಸಿಕೊಂಡಿದ್ದಾರೆ. 75 ಸಾವಿರ ಜನರಿಗೆ ಉದ್ಯೋಗ ನೀಡುವ ಮೂಲಕ ಸಾವಿರಾರು ಕುಟುಂಬಗಳ ಆರ್ಥಿಕ ಪ್ರಗತಿಗೆ ಆಧಾರವಾಗಿದ್ದಾರೆ. ಪ್ರತಿನಿತ್ಯ ಕಾಶಿಯಲ್ಲಿ ಜರಗುವ ಗಂಗಾರತಿ ರೀತಿಯಲ್ಲಿ ಕರ್ನಾಟಕದ ಎಲ್ಲ ನದಿಗಳಿಗೆ ಆರತಿಗಳು ಆಗಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ವೇದಿಕೆಯ ಮೂಲಕ ಸರಕಾರಕ್ಕೆ ಮನವಿ ಮಾಡಿದರು.

ಪ.ಪೂ.ಸಿದ್ಧರಾಮೇಶ್ವರ ಶ್ರೀಗಳು ಮಾತನಾಡಿ, ಕೈಗಾರಿಕಾ ಕ್ರಾಂತಿಯ ಹರಿಕಾರ ನಿರಾಣಿಯವರು ತಮ್ಮ ಲಾಭದ ಜೊತೆಗೆ ಸಮಾಜಕ್ಕೆ ಎಷ್ಟು ಲಾಭ ಆಗುತ್ತೆ ಎಂಬುದರ ಬಗ್ಗೆ ವಿಚಾರ ಹೊಂದಿರುವ ವ್ಯಕ್ತಿಯಾಗಿದ್ದಾರೆ. ದಕ್ಷಿಣ ಕರ್ನಾಟಕದಲ್ಲಿ ಕೈಗಾರಿಕ ಪುನಃ ಸ್ಥಾಪಿಸಿದರು. ಅಂದು ಸಮುದ್ರ ಪಾಲಾಗುತ್ತಿದ್ದ ಕಾಳಿನದಿ ನೀರನ್ನು ಯೋಜನೆ ರೂಪಿಸಿ ನಾಡಿಗೆ ಹರಿಸಿದ ಹರಿಕಾರ. ನೀರನ್ನು ಮತ್ತೆ ರೈತರಿಗೆ ಒದಗಿಸಿ ಆರ್ಥಿಕವಾಗಿ ಸದೃಢಗೊಳಿಸಿದವರು ಎಂದರು.

ಹುಕ್ಕೇರಿಯ ಚಂದ್ರಶೇಖರ ಶ್ರೀಗಳು ಮಾತನಾಡಿ, ನಮ್ಮ ನದಿ, ಸಂಪ್ರದಾಯ, ನೆಲ, ಜಲ, ಸಂಸ್ಕೃತಿಯನ್ನು ಬಿಟ್ಟರೆ ನಮಗೆ ಅನಾಹುತ ಕಟ್ಟಿಟ್ಟ ಬುತ್ತಿ. ನದಿಗಳ ಬಗ್ಗೆ ತಿಳಿಸಿಕೊಡಲು ಇಂದು ನಿರಾಣಿ ಕುಟುಂಬ ಕೃಷ್ಣಾ ಪುಣ್ಯಸ್ನಾನ ಮಾದರಿಯಾಗಲಿದೆ ಎಂದರು.

ನಾಗಾಸಾಧು ಅಖಾಡ ಮುಖ್ಯಸ್ಥ ನಂದದೇವಗಿರಿ ಬಾಬಾ ಮಾತನಾಡಿ, ವಾರಣಾಸಿಯ ರೀತಿ ಮಿನಿಕಾಶಿಯನ್ನು ಇಂದು ಹಿಪ್ಪರಗಿಯಲ್ಲಿ ನೋಡುತ್ತಿದ್ದೇವೆ. ಅಲ್ಲಿ ಗಂಗೆಯ ಇತಿಹಾಸವಿರುವ ಹಾಗೆ ಇಲ್ಲಿ ಕೃಷ್ಣೆಯ ಇತಿಹಾಸ ತಿಳಿಸಿದ್ದು ಪುಣ್ಯವಾಗಿದೆ. ಇಂದು ನಾನು ಸಂಕಲ್ಪ ಮಾಡುತ್ತೇನೆ ಮುಂದಿನ ವರ್ಷ ಸಾವಿರಾರು ಸಾಧುಗಳು ಸಮೂಹ ಹರಿದು ಬಂದು ಕ್ಷೇತ್ರವನ್ನು ಮತ್ತಷ್ಟು ಪವಿತ್ರಗೊಳ್ಳಲಿದೆ. ಈಭಾಗದ ಕೃಷ್ಣೆ ನಿಮ್ಮೆಲ್ಲರ ಜೀವನಾಡಿ ಇಂದು ಗಂಗೆ ರೀತಿಯಲ್ಲಿ ಕೃಷ್ಣಾರತಿ ಆಗಲಿ ಇದರಿಂದ ಇತಿಹಾಸ ಸೃಷ್ಟಿಯಾಗಲಿ. ಮುಂದೊಂದು ದಿನ ರೈತರೇ ನಮ್ಮ ದೇವರಾಗುತ್ತಾರೆ ಅಂತಹ ರೈತರನ್ನು ಬೆಳಸುವ ಉಳಿಸುವ ಕೆಲಸವಾಗಬೇಕು ಎಂದರು.

# ಎಸ್ಸಿಎಸ್ಪಿ/ಟಿಎಸ್ಪಿ ಕಲ್ಯಾಣ ಕಾರ್ಯಕ್ರಮಗಳಲ್ಲಿ ಶೇ.100ರಷ್ಟು ಪ್ರಗತಿ ಸಾಧಿಸಲೇಬೇಕು: ಮುಖ್ಯಮಂತ್ರಿ

ಬೆಂಗಳೂರು: ಕಳೆದ ವರ್ಷ ಎಸ್ಸಿ ಎಸ್ಪಿ/ಟಿಎಸ್ಪಿ ಕಲ್ಯಾಣ ಕಾರ್ಯಕ್ರಮಗಳಿಗಾಗಿ 38,793 ಕೋಟಿ ರೂ. ಬಿಡುಗಡೆಯಾಗಿದ್ದು, 38,717 ಕೋಟಿ ರೂ. ವೆಚ್ಚ ಮಾಡಿ ಶೇ.97ರಷ್ಟು ಪ್ರಗತಿ ಸಾಧಿಸಿದ್ದೇವೆ. ಆದರೆ, ಕೇಂದ್ರ ಸರ್ಕಾರದಿಂದ ಬರಬೇಕಾಗಿದ್ದ 880 ಕೋಟಿ ರೂ. ಅನುದಾನ ಬಿಡುಗಡೆಯಾಗಿಲ್ಲ. ಇದನ್ನು ಬಿಡುಗಡೆ ಮಾಡಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದ್ದಾರೆ.

ವಿಧಾನಸೌಧದಲ್ಲಿ ಇಂದು ನಡೆದ ರಾಜ್ಯ ಅನುಸೂಚಿತ ಜಾತಿಗಳು/ಅನುಸೂಚಿತ ಪಂಗಡಗಳ ಅಭಿವೃದ್ಧಿ ಪರಿಷತ್ತಿನ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಿಎಂ, ಎಸ್ಸಿ ಎಸ್ಪಿ/ಟಿಎಸ್ಪಿ ಕಾಯ್ದೆ ಜಾರಿಗೊಂಡು 10 ವರ್ಷವಾದ ಹಿನ್ನೆಲೆಯಲ್ಲಿ ಇದರ ಅನುಷ್ಠಾನದ ಪ್ರಗತಿ ಬಗ್ಗೆ ಐಸೆಕ್ ವತಿಯಿಂದ ಮೌಲ್ಯಮಾಪನ ನಡೆಸಿದ್ದೇವೆ. ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಸಂಖ್ಯೆ ಹೆಚ್ಚಿರುವ 39 ತಾಲೂಕುಗಳನ್ನು ಗುರುತಿಸಿ ಅಧ್ಯಯನ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಶಿಕ್ಷಣ, ಆರೋಗ್ಯ, ಜೀವನಮಟ್ಟ ಸುಧಾರಣೆ ಮತ್ತು ಬಡತನ ನಿರ್ಮೂಲನೆ ಮಾನದಂಡಗಳನ್ನು ಪರಿಗಣಿಸಿ ಸಮೀಕ್ಷೆ ನಡೆಸಲಾಗಿದೆ. ಅಭಿವೃದ್ಧಿ ಅನುದಾನ ಬಿಡುಗಡೆಯಲ್ಲಿ ಈ ಅವಧಿಯಲ್ಲಿ ಶೇ.9.6 ರಷ್ಟು ವಾರ್ಷಿಕ ಪ್ರಗತಿ ಸಾಧಿಸಲಾಗಿದೆ. ಇತರ ರಾಜ್ಯಗಳಿಗೆ ಹೋಲಿಸಿದರೆ ಕರ್ನಾಟಕ ರಾಜ್ಯ ಕಳೆದ 10 ವರ್ಷಗಳಲ್ಲಿ ವಿವಿಧ ಮಾನದಂಡಗಳಲ್ಲಿ ಮುಂಚೂಣಿಯಲ್ಲಿರುವುದು ಸ್ಪಷ್ಟವಾಗಿದೆ ಎಂದರು.

ಕಾಯ್ದೆ ಪ್ರಕಾರ ಪ್ರತಿವರ್ಷ ಕನಿಷ್ಠ ಶೇ.24.1ರಷ್ಟು ಅನುದಾನ ನೀಡಬೇಕಾಗಿದೆ. ಆದರೆ, 2019-20ರ ಅವಧಿಯಲ್ಲಿ ನಿಗದಿತ ಶೇಕಡಾಕ್ಕಿಂತ ಕಡಿಮೆ ಅನುದಾನ ಬಿಡುಗಡೆ ಮಾಡಲಾಗಿದೆ. ಕಾಯ್ದೆ ಜಾರಿ ಬಳಿಕ ಒಟ್ಟು ರೂ.2.97 ಲಕ್ಷ ಕೋಟಿ ವೆಚ್ಚ ಮಾಡಲಾಗಿದೆ. ಯೋಜನೆ ಸಮರ್ಪಕವಾಗಿ ಅನುಷ್ಠಾನವಾಗುತ್ತಿದೆಯೇ ಎಂಬುವುದರ ಬಗ್ಗೆ ಪರಿಶೀಲನೆ ನಡೆಸಬೇಕು ಎಂದು ಸೂಚನೆ ನೀಡಿದರು.

ಜನಸಂಖ್ಯೆಗೆ ಅನುಗುಣವಾಗಿ ಬಜೆಟ್ ವಿನಿಯೋಗ, ಸಾಮಾಜಿಕ, ಆರ್ಥಿಕ ಪರಿಸ್ಥಿತಿ ಸುಧಾರಣೆ, ಜೀವನ ಮಟ್ಟ ಮತ್ತು ವಾಸಸ್ಥಳಗಳ ಅಭಿವೃದ್ಧಿಪಡಿಸುವುದು ಕಾಯ್ದೆಯ ಉದ್ದೇಶ. ಯಾವುದೇ ಕಾರಣಕ್ಕೂ ಕಾಯ್ದೆಯ ಆಶಯಕ್ಕೆ ಭಂಗ ಬರಬಾರದು. ಆಯಾ ಇಲಾಖೆಯವರು ಸಮರ್ಪಕ ಕ್ರಿಯಾ ಯೋಜನೆ ರೂಪಿಸಿ ಪರಿಶಿಷ್ಟ ಜಾತಿ/ಪಂಗಡದ ಜನರ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ



ಪರಿಸ್ಥಿತಿ ಸುಧಾರಣೆಗೆ ಯೋಜನಾಬದ್ಧವಾಗಿ ಕಾರ್ಯನಿರ್ವಹಿಸಬೇಕು. ಅನುಷ್ಠಾನ ಇಲಾಖೆಗೆ ಬದ್ಧತೆ ಬೇಕು. ಕಳೆದ 10 ವರ್ಷಗಳಲ್ಲಿ ನಿರೀಕ್ಷಿತ ಬದಲಾವಣೆ ಸಾಧ್ಯವಾಗಿಲ್ಲ ಎಂದರು.

ವಿವಿಧ ಕಲ್ಯಾಣ ಯೋಜನೆಗಳಡಿ ಬ್ಯಾಂಕ್‌ಗಳು ಸಕಾಲದಲ್ಲಿ ಹಣಕಾಸು ನೆರವು ಒದಗಿಸುವುದನ್ನು ಖಾತ್ರಿಪಡಿಸಬೇಕು. ಸಾಲ ಸೌಲಭ್ಯ ಒದಗಿಸಲು ವಿಳಂಬ ಧೋರಣೆ ತೋರಿಸುವ ಬ್ಯಾಂಕ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಸರ್ಕಾರದ ಯೋಜನೆಗಳು ಶೇ.100ರಷ್ಟು ಎಸ್‌ಸಿ/ಎಸ್‌ಟಿ ಜನಸಂಖ್ಯೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಈ ವರ್ಷ 42017.51 ಕೋಟಿ ರೂ. ಹಂಚಿಕೆ ಮಾಡಿದ್ದೇವೆ. ಈ ಅನುದಾನವನ್ನು ಸಮರ್ಪಕವಾಗಿ ವೆಚ್ಚ ಮಾಡಲು ಅದಷ್ಟು ಬೇಗನೆ ಕ್ರಿಯಾ ಯೋಜನೆ ರೂಪಿಸಿ ಪರಿಣಾಮಕಾರಿಯಾಗಿ ಅನುಷ್ಠಾನ ಕಾರ್ಯ ಕೈಗೊಳ್ಳಬೇಕು. ಯಾವುದೇ ಕಾರಣಕ್ಕೂ ಅನುದಾನ ಬಾಕಿಯುಳಿಯಬಾರದು. ಶೇ.100ರಷ್ಟು ಪ್ರಗತಿ ಸಾಧಿಸಲೇ ಬೇಕು. ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಾಯ್ದೆ ಪ್ರಕಾರ ಶಿಕ್ಷೆ ವಿಧಿಸುವ ಕಾರ್ಯ ಆಗಬೇಕು ಎಂದು ಎಚ್ಚರಿಕೆ ಕೊಟ್ಟರು.

ದೇವದಾಸಿ ಪುನರ್‌ವಸತಿ ಕಾರ್ಯವನ್ನು ಪರಿಣಾಮಕಾರಿಯಾಗಿ ಕೈಗೊಳ್ಳುವ ಉದ್ದೇಶದಿಂದ ಸೆಪ್ಟಂಬರ್ ಮೊದಲ ವಾರದಿಂದ ಪುನರ್ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ. ದೇವದಾಸಿ ಪದ್ಧತಿಯನ್ನು ಈಗಾಗಲೇ ನಿರ್ಬಂಧಿಸಲಾಗಿದ್ದು, ಯಾವುದೇ ಕಾರಣಕ್ಕೂ ದೇವದಾಸಿ ಪದ್ಧತಿ ಮುಂದುವರೆಯದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ದೇವದಾಸಿ ಪದ್ಧತಿಯನ್ನು ತೊಡೆದು ಹಾಕಲು ಕಾನೂನಿಗೆ ಸೂಕ್ತ ತಿದ್ದುಪಡಿ ತರಲಾಗುವುದು. ಹೆಣ್ಣು ಮಕ್ಕಳನ್ನು ದೇವದಾಸಿ ಪದ್ಧತಿಗೆ ದೂಡುವ ಪಾಲಕರು ಸೇರಿದಂತೆ ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗುವಂತೆ ಕ್ರಮ ಕೈಗೊಳ್ಳಲಾಗುವುದು. ಸಮಾಜ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮಕ್ಕಳ ಕಲ್ಯಾಣ ಇಲಾಖೆ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ದೇವದಾಸಿ ಪದ್ಧತಿ ಇನ್ನೂ ಜೀವಂತವಾಗಿದೆ ಎಂದರೆ ನಾವೆಲ್ಲರೂ ತಲೆತಗ್ಗಿಸಬೇಕಾಗಿದೆ ಎಂದು ಹೇಳಿದರು.

ದೇವದಾಸಿಯರೂ ಸೇರಿದಂತೆ, ಸಫಾಯಿ ಕರ್ಮಚಾರಿಗಳು ಮುಂತಾದ ಸಮಾಜದಿಂದ ನಿರ್ಲಕ್ಷಿತ ವರ್ಗಗಳ ಜೀವನಮಟ್ಟ ಸುಧಾರಣೆಗೆ ಸರಿಯಾದ ಕಾರ್ಯಕ್ರಮಗಳನ್ನು ರೂಪಿಸಬೇಕು. ಕಾರ್ಯಕ್ರಮಗಳು ಯಶಸ್ವಿಯಾಗಿ ಕಾರ್ಯರೂಪಕ್ಕೆ ಬರದೇ ಹೋದರೆ ಸಂವಿಧಾನದ ಉದ್ದೇಶಗಳನ್ನು ಈಡೇರಿಸಲು ಸಾಧ್ಯವಿಲ್ಲ. ಕರ್ನಾಟಕ ಇತಿಹಾಸದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಯೋಜನೆಗಳಿಗೆ 2.97 ಲಕ್ಷ ಕೋಟಿ ರೂ.ನಷ್ಟು ಹಣ ಈವರೆಗೆ ಖರ್ಚು ಮಾಡಲಾಗಿದೆ. ಇಷ್ಟೆಲ್ಲಾ ಖರ್ಚು ಮಾಡಿಯೂ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಜೀವನಮಟ್ಟ ಸುಧಾರಣೆ ಆಗದಿದ್ದರೆ ನಾಚಿಕೆಗೇಡು ಎಂದರು.

ಕಳೆದ ಸಾಲಿನಲ್ಲಿ ಎಸ್ಸಿಎಸ್ಪಿ/ಟಿಎಸ್ಪಿ ವಸತಿ ಯೋಜನೆಗಳಿಗೆ 1086 ಕೋಟಿ ರೂ. ಬಿಡುಗಡೆ ಮಾಡಲಾಗಿದೆ. ಪ್ರತಿಯೊಬ್ಬ ಅರ್ಹ ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸಿಎಂ ಸೂಚನೆ ನೀಡಿದರು.

ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಡಾ.ಹೆಚ್.ಸಿ ಮಹಾದೇವಪ್ಪ, ಪ್ರಿಯಾಂಕ ಖರ್ಗೆ, ಡಾ.ಎಂ.ಸಿ.ಸುಧಾಕರ್, ಸತೀಶ್ ಜಾರಕಿಹೊಳಿ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ತಾಲೂಕಾ ಆಡಳಿತದಿಂದ 79ನೇ ಭಾರತ ಸ್ವಾತಂತ್ರ್ಯ ದಿನಾಚರಣೆ ದ್ದೂರಿಯಾಗಿ ಆಚರಣೆ



ಯರಗಟ್ಟಿ: 79ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಡಗರ ಸಂತೋಷದಿಂದ ಆಚರಿಸುತ್ತಿದ್ದೇವೆ 1947ರ ಆಗಸ್ಟ್ 15ರಂದು ನಮ್ಮ ದೇಶ ಬ್ರಿಟಿಷ ಆಡಳಿತದಿಂದ ಮುಕ್ತವಾಯಿತು ಎಂದು ತಾಲೂಕು ದಂಡಾಧಿಕಾರಿಗಳಾದ ಎಂ ವ್ಹಿ ಗುಂಡಪ್ಪಗೋಳ ಅವರು ತಿಳಿಸಿದರು.

ಪಟ್ಟಣದ ಸರ್ಕಾರಿ ಪ್ರಾಥಮಿಕ ಶಾಲಾ ಆವರಣದಲ್ಲಿ 79ನೇ ಭಾರತ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು. ಭಗತ್ ಸಿಂಗ್ ಸುಭಾಷ ಚಂದ್ರ ಬೋಸ್ ಚಂದ್ರಶೇಖರ್ ಆಜಾದ್ ಸರ್ದಾರ್ ವಲ್ಲಭಾಯಿ ಪಟೇಲ್ ಜಾನ್ಸಿ ರಾಣಿ ಲಕ್ಷ್ಮೀಬಾಯಿ ಕಿತ್ತೂರು ರಾಣಿ ಚೆನ್ನಮ್ಮ ಸಂಗೊಳ್ಳಿ ರಾಯಣ್ಣ ಬೆಳವಡಿ ಮಲ್ಲಮ್ಮ ನೆಹರು ಗಾಂಧೀಜಿ ಇಂತಹ ಅನೇಕ ಲಕ್ಷಾಂತರ ಮಹನೀಯರು ಹೋರಾಟಗಾರರ ತ್ಯಾಗ ಬಲಿದಾನದಿಂದ ಈ ದೇಶ ಸ್ವತಂತ್ರವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಾಜಿ ಜಿ. ಪಂ ಸದಸ್ಯ ಅಜೀತಕುಮಾರ ದೇಸಾಯಿ ಮಾತನಾಡಿ ಈ ದಿನವೂ ಕೇವಲ ಆಚ- 'ರಣೆಯ ದಿನವಲ್ಲ ಇದು ನಮ್ಮ ಕರ್ತವ್ಯಗಳನ್ನು ನೆನಪಿಸಿಕೊಳ್ಳುವ ದಿನ ಪ್ರಜಾಪ್ರಭುತ್ವ ಧರ್ಮ ಸಮಾನತೆ ಹಾಗೂ ಏಕತೆಯ ಮೌಲ್ಯಗಳನ್ನು ಕಾಪಾಡುವುದು ಪ್ರತಿಯೊಬ್ಬರ ನಾಗರಿಕರ ಜವಾಬ್ದಾ-ರಿಯಾಗಿದೆ ಅದೇ ರೀತಿ ನಮ್ಮ ತಾಲೂಕಿನಲ್ಲಿ ಅಭಿವೃದ್ಧಿ ಕಾರ್ಯ ನಿರಂತರ ನಡೆಯುತ್ತಿದ್ದು ಶಿಕ್ಷಣ ಆರೋಗ್ಯ ಮೂಲಭೂತ ಸೌಕರ್ಯ ಪರಿಸರ ಸಂರಕ್ಷಣೆ ಈ ಎಲ್ಲಾ ಕ್ಷೇತ್ರಗಳಲ್ಲಿ ಸರ್ಕಾರ ಕೈಗೊಂಡಿರುವ ಯೋಜನೆಗಳನ್ನು ಜನತೆಗೆ ತಲುಪಿಸುವ ಜವಾಬ್ದಾರಿ ನಮ್ಮದಾಗಿದೆ ಇದಕ್ಕಾಗಿ ತಮ್ಮೆಲ್ಲರ ಸಹಕಾರ ಅಗತ್ಯವಿದೆ ಎಂದರು

ನಮ್ಮ ದೇಶ ಪ್ರಗತಿ ಜೊತೆಗೆ ನಮ್ಮ ಗ್ರಾಮ ತಾಲೂಕು ಜಿಲ್ಲೆ ರಾಜ್ಯದ ಅಭಿವೃದ್ಧಿಗೆ ಶ್ರಮಿಸುವಂತೆ ಪ್ರತಿಜ್ಞೆ ಮಾಡೋಣ ದೇಶದ ಹಿತಕ್ಕಾಗಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಸಂವಿಧಾನದ ಮೌಲ್ಯಗಳನ್ನು ಅಳವಡಿಸಿಕೊಳ್ಳೋಣ ಯುವ ಪೀಳಿಗೆಗೆ ನನ್ನ ಸಂದೇಶ ಶಿಸ್ತು ಪ್ರಾಮಾಣಿಕತೆ ಮತ್ತು ದೇಶಭಕ್ತಿಯಿಂದ ತಮ್ಮ ವಿದ್ಯಾಭ್ಯಾಸ ಮತ್ತು ವೃತ್ತಿ ಜೀವನವನ್ನು ಮುಂದುವರಿಸಲಿ ಅಂತಿಮವಾಗಿ ನಮ್ಮ ಧ್ವಜದ ತ್ರಿವರ್ಣಗಳ ಪ್ರತಿಬಿಂಬಿಸುವ ಸೌರ್ಯ ಶಾಂತಿ ಮತ್ತು ಸಮೃದ್ಧಿ ಸದಾ ನಮ್ಮ ಬದುಕಿನಲ್ಲಿ ಅರಳಲಿ ಮತ್ತೊಮ್ಮೆ ನಿಮಗೆ ಸ್ವಾತಂತ್ರ್ಯೋತ್ಸವದ ಶುಭಾಶಯಗಳು ಎಂದು ತಿಳಿಸಿದರು.

ವಿಶೇಷವಾಗಿ ಎಸೆಸೆಲ್ಸಿ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದವರಿಗೆ ಸನ್ಮಾನ ಮಾಡಲಾಯಿತು. ಅದೇ ರೀತಿ ತಾಲೂಕಿನ ಉತ್ತಮ ಪತ್ರಕರ್ತರಿಗೆ, ಸಮಾಜ ಸೇವಕ-ರಿಗೆ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಪೌರಕಾರ್ಮಿಕರಿಗೆ, ಸೇರಿದಂತೆ ವಿವಿಧ ಇಲಾಖೆಗಳ ಸಿಬ್ಬಂದಿ ಅವರಿಗೆ ಸನ್ಮಾನ ಮಾಡಲಾಯಿತು.

ಅದೇ ರೀತಿ ವಿಧ ಶಾಲೆಯ ಮಕ್ಕಳ ಮನೋರಂಜನ ನೃತ್ಯವು ಎಲ್ಲರ ಗಮನ ಸೆಳೆಯಿತು

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ಮಹೇಶ ಭಜಂತ್ರಿ, ಪಿಎಸ್ಐ ಎಲ್ ಬಿ ಮಾಳಿ, ಕೆಎಂಎಫ್ ನಿರ್ದೇಶಕ ಶಂಕರ ಇಟ್ನಾಳ, ಪ. ಪಂ. ಸದಸ್ಯರಾದ ನಿಖಿಲ ಪಾಟೀಲ, ಸಲೀಂಬೇಗ ಜಮಾದಾರ, ಹನಮಂತ ಹಾರುಗೊಪ್ಪ, ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದ್ದಬಸವರ, ಗ್ಯಾರಂಟಿ ಯೋಜನೆ ಅಧ್ಯಕ್ಷ ಗೋಪಾಲ ದಳವಾಯಿ, ಎಪಿಎಂಸಿ ನಿರ್ದೇಶಕ ರಫೀಕ ಡಿ ಕೆ, ಕಸಾಪ ಅಧ್ಯಕ್ಷ ತಮ್ಮಣ್ಣ ಕಾಮಣ್ಣವರ, ಪಶು ವೈದ್ಯಾಧಿಕಾರಿ ಎಂ ವ್ಹಿ ಪಾಟೀಲ, ವೈದ್ಯಾಧಿಕಾರಿ ಡಾ. ಅನಸುಯಾ, ಭಾಸ್ಕರ ಹಿರೇಮೆತ್ರಿ, ಮೋಹನ ಹಾದಿಮನಿ, ಸೇ-ರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಮುಖಂಡರು ಉಪಸ್ಥಿತರಿದ್ದರು.

# ಭಾರತದ ಸ್ವಾತಂತ್ರ್ಯ ಹೋರಾಟವು ಅವಿಶ್ರಾಂತ ಹೋರಾಟ- ಅನೇಕರ ತ್ಯಾಗದ ಸಂಕೇತವಾಗಿದೆ



**ಮೂಡಲಗಿ :** "ಭಾರತದ ಸ್ವಾತಂತ್ರ್ಯ ಹೋರಾಟವು ಅವಿಶ್ರಾಂತ ಹೋರಾಟ, ಅನೇಕರ ತ್ಯಾಗದ ಸಂಕೇತವಾಗಿದೆ. ಅಹಿಂಸೆಯ ತತ್ವವನ್ನು ಮುನ್ನಡೆಸಿದ ಗಾಂಧಿಯವರು ಕೋಟ್ಯಂತರ ಭಾರತೀಯರಿಗೆ ಸ್ಫೂರ್ತಿ ನೀಡಿದರು. ಸುಭಾಷ್ ಚಂದ್ರ ಬೋಸ್, ಭಗತ್ ಸಿಂಗ್, ಸುಖದೇವ್, ರಾಜ್ ಗುರು ಮುಂತಾದ ಅನೇಕ ಯೋಧರು ಸ್ವಾತಂತ್ರ್ಯವನ್ನು ಸಾಧಿಸಲು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟರು. ಅವರಂತೆಯೇ, ನಾವು ಸಹ ದೇಶದ ಪ್ರಗತಿಗೆ ಕೊಡುಗೆ ನೀಡೋಣ ತಹಶಿಲ್ದಾರರ ಶ್ರೀಶೈಲ ಗುಡಮೆ ವಹಿಸಿ ಮಾತನಾಡಿದರು.

ಶುಕ್ರವಾರ ತಹಶಿಲ್ದಾರ ಕಛೇರಿ ಹಾಗೂ ಸಾರ್ವಜನಿಕವಾಗಿ ಗಾಂಧಿ ಚೌಕನಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಧ್ವಜಾರೋಹನ ನೇರವೆರಿಸಿ ಬಸವರಂಗ ಮಂಟಪದಲ್ಲಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು,

ನಾವು ರಾಷ್ಟ್ರಧ್ವಜವನ್ನು ಹಾರಿಸಿ ಸ್ವಾತಂತ್ರ್ಯಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ವೀರರಿಗೆ ಗೌರವ ಸಲ್ಲಿಸುತ್ತೇವೆ, ನಮ್ಮ ದೇಶವು ಮತ್ತಷ್ಟು ಎತ್ತರವನ್ನು ತಲುಪಲಿ ಎಂದು ಹಾರೈಸೋಣ. ಜವಾಬ್ದಾರಿಯುತ ನಾಗರಿಕರಾಗಿರಲು ಮತ್ತು ಭಾರತದ ಅಭಿವೃದ್ಧಿಗಾಗಿ ಕೆಲಸ ಮಾಡಲು ಪ್ರಾಮಾಣಿಕತೆಯಿಂದ ದುಡಿಯೋಣ ಎಂದರು

ವಿದ್ಯಾರ್ಥಿನಿಯರಾದ ಸೌಮ್ಯ ಈರಪ್ಪ ಅಂಬಿ. ಗೌತಮಿ ಬೋಳನ್ನವರ ಸ್ವಾತಂತ್ರ್ರೋತ್ಸವದ ಕುರಿತು ಮಾತನಾಡಿದರು.

ವೇದಿಕೆಯ ಮೇಲೆ ಪುರಸಭೆ ಅದ್ಯಕ್ಷೆ ಖುರ್ಷಾದ ನಧಾಪ.ಉಪಾದ್ಯಕ್ಷೆ ಭೀಮವ್ವ ಪೂಜೇರಿ.ಸಿ ಪಿ ಐ ಶ್ರೀಶೈಲ ಬ್ಯಾಕೂಡ. ಪಿಎಸೈ ರಾಜು ಪೂಜೇರಿ. ಮುಖ್ಯಾಧಿಕಾರಿ ತುಕಾರಾಮ ಮಾದರ.ಸಿಡಿಪಿಓ ಯಲ್ಲಪ್ಪ ಗದಾಡಿ.ಹೆಸ್ಕಾಂ ಎಇಇ ಎಮ್ ಎಸ್ ನಾಗನ್ನವರ.ಪ್ರಭಾರಿ ಶಿಕ್ಷಣಾಧಿಕಾರಿ ರೇಣುಕಾ ಆಣಿ. ಮರೇಪ್ಪ ಮರೇಪಗೋಳ ಮತ್ತು ಪುರಸಭೆ ಸದಸ್ಯರು ಇದ್ದರು.

ವಿವಿಧ ಶಾಲಾ ಮಕ್ಕಳಿಂದ ಪರಭಾತಪೇರಿ ಹಾಗೂ ಬಸವರಂಗ ಮಂಟಪದಲ್ಲಿ ಮನೋರಂಜನೆ ಹಾಗೂ ಕ್ರೀಡೆಗಳು ಜರುಗಿದವು, ಕಾರ್ಯಕ್ರಮವನ್ನು ಶಿರಸ್ಥೆದಾರ ಪರಶುರಾಮ ನಾಯ್ಕ ಸ್ವಾಗತಿಸಿದರು, ಸಂಯೋಜಕ ಟಿ ಬಸವರಾಜ ನಿರೂಪಿಸಿ. ವಂದಿಸಿದರು,

*****



**ಮೂಡಲಗಿ: ಕಲ್ಲೋಳಿ ಪಟಣದಲ್ಲಿ ಸ್ವಾತಂತ್ರ್ಯ ಹೋರಾಟಗಾರ, ಕಿತ್ತೂರು ರಾಣಿ ಚೆನ್ನಮ್ಮಳ ಬಲಗೈ ಬಂಟ, ಕನ್ನಡ ನಾಡಿನ ಹೆಮ್ಮೆಯ ಪುತ್ರ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಜಯಂತಿಯ ಅಂಗವಾಗಿ ಅವರ ಪ್ರತಿಮೆ ರಾಜ್ಯಸಭೆ ಸಂಸದ ಈರಣ್ಣ ಕಡಾಡಿ ಅವರು ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು.ಈ ಸಂದರ್ಭದಲ್ಲಿ ಮಾರುತಿ ಮರಡಿ, ತುಕಾರಾಮ ಪಾಲ್ಕಿ, ರೇವಪ್ಪ ಮಸಗುಪ್ಪಿ, ಬಸವರಾಜ ವ್ಯಾಪಾರಿ ಸೇರಿದಂತೆ ಹಾಲುಮತ ಸಮಾಜದ ಪ್ರಮುಖರು ಉಪಸ್ಥಿತರಿದ್ದರು.**

# ವಿದ್ಯುತ ವ್ಯತ್ಯಯ

ಬೆಳಗಾವಿ, : ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಮಚ್ಛೆ ಉಪಕೇಂದ್ರದಲ್ಲಿ ಎರಡನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ದತ್ತ ನಗರ, ನಾವಗೇಕರ ನಗರ, ಹವಳ ನಗರ, ಗೋಡಸೆ ಕಾಲನಿ, ಓಂಕಾರ ನಗರ, ಮಚ್ಛೆ, ಝಾಡಶಾಪೂರ, ದೇಸೂರ, ಸುಸ್ಗ್ಯಾನಟ್ಟಿ, ಬಳಗಾಮಟ್ಟಿ, ಕುಟ್ಟಲವಾಡಿ, ಬಾಮನವಾಡಿ, ನಾವಗೆ, ಜಾನೇವಾಡಿ, ಬಾದರವಾಡಿ, ರಣಕುಂಡೆ, ಕರ್ಲೇ, ಕಿನಯೇ, ಸಂತಿ ಬಸ್ತವಾಡ, ಕಾಳೇನಟ್ಟಿ, ವಾಘವಾಡೆ, ರಂಗಧೋಳಿ, ಪೀರಣವಾಡಿ, ಖಾದರವಾಡಿ, ಮಾರ್ಕಂಡೇಯ ನಗರ, ವಾಲ್ಮೀಕಿ ನಗರ, ತೀರ್ಥಕುಂಡೆ, ಹುಂಚ್ಯಾನಟ್ಟಿ, ಅಶೋಕ ಐರನ್ ಕಾಲನಿ, ನಾವಗೆ, ವಾಘವಾಡೆ ಹಾಗೂ ಮಚ್ಛೆ ಔದ್ಯೋಗಿಕ ಕ್ಷೇತ್ರಗಳಿಗೆ ಹಾಗೂ ಖಾನಾಪೂರ ತಾಲೂಕಿನ ಉಚವಡಾ, ಕುಸಮಳಿ, ಬೈಲೂರ, ಮೊರಬ, ಜಾಂಬೋಟಿ, ಓಲಮನಿ, ವಡಗಾಂವ, ದಾರೋಳಿ, ಚಾಪೋಲಿ, ಕಾಪೋಲಿ, ಮುಡವಿ, ಹಬ್ಬಾನಟ್ಟಿ, ದೇವಾಚಿಹಟ್ಟಿ, ತೋರಾಳಿ, ಗೋಲ್ಯಾಳಿ, ಬೆಟಗೇರಿ, ತಳೇವಾಡಿ, ಅಮಟೆ, ಕಾಲಮನಿ, ಚಿಕಲೆ, ಕಣಕುಂಬಿ, ಗವಸೆ, ಅಮಗಾಂವ, ಬೇಟ್ನೆ, ಪಾರವಾಡ, ಚಿಗುಳೆ, ಮಾನ, ಸಡಾ, ಚೋರ್ಲಾ, ಹಳೆ ಹಾಗೂ ಹೊಸ ಹುಳಂದ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ಆಗಸ್ಟ, 17, 2025 ರಂದು ಬೆಳಿಗ್ಗೆ 10 ಘಂಟೆಯಿಂದ ಸಂಜೆ 4 ಘಂಟೆಯ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯಾ ಮತ್ತು ಪಾಲನೆ, ನಗರ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು(ವಿ), ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ ವ್ಯತ್ಯಯ

ಬೆಳಗಾವಿ, : ಕ.ವಿ.ಪ್ರ.ನಿ.ನಿ. ವತಿಯಿಂದ 110 ಕೆ.ವ್ಹಿ. ಉಚಗಾಂವ ಉಪಕೇಂದ್ರದಲ್ಲಿ ಮೊದಲನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಬಿಜಗರ್ಣಿ, ಬೋಕಮೂರ, ಕವಳೇವಾಡಿ, ಬೆಳವಟ್ಟಿ, ಬಾಕನೂರ, ಬೆಳಗುಂದಿ, ಸೋನೋಲಿ, ಎಳೆಬೈಲ, ರಾಕಸಕೊಪ್ಪ, ಕುದ್ರೇಮನಿ, ಕಲ್ಲೇಹೋಳ, ಬೆಳಗುಂದಿ ಇಂಡಸ್ಟ್ರೀಯಲ್ ಏರಿಯಾ, ಉಚಗಾಂವ, ಬಸುರ್ತೆ, ಬೆಕ್ಕಿನಕೇರಿ, ಸುಳಗಾ, ತುರಮುರಿ, ಕೋಣೇವಾಡಿ, ಬಾಚಿ, ಬೆನಕನಹಳ್ಳಿ, ಸಾವಗಾಂವ, ಮಂಡೋಳಿ, ಹಂಗರಗಾ, ಅಂಗಡಿ ಕಾಲೇಜ್, ಗಣೇಶಪೂರ, ಮಹಾಲಕ್ಷ್ಮೀ ನಗರ, ಆರ್ಮಿ ಕಾಲನಿ, ಕೆ.ಎಚ್.ಬಿ. ಲೇಔಟ್, ಬೆನಕನಹಳ್ಳಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ಆಗಸ್ಟ, 17, 2025 ರಂದು ಬೆಳಿಗ್ಗೆ 10 ಘಂಟೆಯಿಂದ ಸಂಜೆ 6 ಘಂಟೆಯ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಕ.ವಿ.ಪ್ರ.ನಿ.ನಿ. ವತಿಯಿಂದ 33 ಕೆ.ವ್ಹಿ. ಹಿಂಡಲಗಾ ಉಪಕೇಂದ್ರದಲ್ಲಿ ಮೊದಲನೇಯ ತ್ರೈಮಾಸಿಕ ಹಾಗೂ ಇತರೆ ತುರ್ತು ನಿರ್ವಹಣಾ ಕಾರ್ಯಗಳನ್ನು ಕೈಗೊಳ್ಳುತ್ತಿರುವುದರಿಂದ ಸದರಿ ಉಪಕೇಂದ್ರದಿಂದ ಸರಬರಾಜು ಆಗುವ ಹಿಂಡಲಗಾ ಪಂಪ್‌ಹೌಸ್, ಗಣೇಶಪೂರ, ಹಿಂಡಲಗಾ, ಮನ್ನೂರ, ಸರಸ್ವತಿ ನಗರ, ಲಕ್ಷ್ಮೀ ನಗರ, ವಿಜಯ ನಗರ, ಡಿಫೆನ್ಸ್, ಕಾಲನಿ, ಕ್ರಾಂತಿ ನಗರ, ಮಾಸ್ತಿ ನಗರ, ಶಿವಂ ನಗರ, ಗೋಜಗಾ ಹಾಗೂ ಅಂಬೇವಾಡಿ ಗ್ರಾಮಗಳಿಗೆ ಹಾಗೂ ಸದರಿ ಗ್ರಾಮಗಳ ನೀರಾವರಿ ಪಂಪ್‌ಸೆಟ್‌ಗಳ ಏರಿಯಾಗಳಿಗೆ ಆಗಸ್ಟ, 17, 2025 ರಂದು ಬೆಳಿಗ್ಗೆ 10 ಘಂಟೆಯಿಂದ ಸಂಜೆ 6 ಘಂಟೆಯ ವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಕಾರ್ಯಾ ಮತ್ತು ಪಾಲನೆ, ನಗರ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು(ವಿ), ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ : ಶಾಸಕ ಅಶೋಕ ಮನಗೂಳಿ




ಸಿಂದಗಿ:ಕಾಂಗ್ರೆಸ್ ಸರಕಾರ 5ಗ್ಯಾರಂಟಿಗಳನ್ನು ಪೂರೈಸುವುದರ ಜೊತೆಗೆ ಅಭಿವೃದ್ಧಿಯನ್ನು ಮಾಡುತ್ತಿದೆ. ಪ್ರತಿಯೊಂದು ಮತಕ್ಷೇತ್ರಕ್ಕೆ ಸಾವಿರಾರು ಕೋಟಿ ಅನುದಾನ ನೀಡಿ, ವಿಶೇಷವಾಗಿ ನೀರಾವರಿ, ಕೃಷಿ, ಶಿಕ್ಷಣ-ಕ್ಕೆ ಹೆಚ್ಚಿನ ಆಧ್ಯತೆ ನೀಡಿ, ಸಿಂದಗಿ ಮತಕ್ಷೇತ್ರದ ಜನತೆ ಕಾಂಗ್ರೆಸ್ ಪಕ್ಷದ ಮೇಲೆ ಮೇಲಿಟ್ಟಿರುವ ನಂಬಿಕೆಯನ್ನು ಹುಸಿಯಾಗಿಸದೇ ಸಾವಿರಾರು ಕೋಟಿ ಅನುದಾನ ಕೊಟ್ಟು ಅಭಿವೃದ್ಧಿಗೆ ಸಹಕ-ರಿಸುತ್ತಿದೆ. ರೈತರಿಗೆ ರಾತ್ರಿ ನೀಡುವ 7ಗಂಟೆ ವಿದ್ಯುತ್‌ನ್ನು ಕಾಂಗ್ರೆಸ್ ಸರಕಾರ ಹಗಲಲ್ಲಿ 7ಗಂಟೆ ವಿದ್ಯುತ್ ನೀಡುವ ಕಾರ್ಯಮಾಡಿದ್ದು ಕಾಂಗ್ರೆಸ್ ಸರಕಾರ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ಹಮ್ಮಿಕೊಂಡ 79ನೇ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. 79ವರ್ಷಗಳ ಹಿಂದೆ ನಮ್ಮ ಪೂರ್ವಜರು ಮಾಡಿದ ತ್ಯಾಗ ಬಲಿದಾನದ ಮೂಲಕ 1947ರಲ್ಲಿ ಆಗಷ್ಟ್ 14ರ ಮಧ್ಯರಾತ್ರಿ ಭಾರತವು ಸ್ವತಂತ್ರ ರಾಷ್ಟ್ರವಾಯಿತು. ಸ್ವತಂತ್ರ ಪೂರ್ವದಲ್ಲಿ 200ವರ್ಷಗಳ ಕಾಲ ಆಳಿದ ಬ್ರಿಟಿಷರ್ ವಿರುದ್ಧ ಶಾಂತಿ ಮತ್ತು ಕ್ರಾಂತಿಯಿಂದ ದೇಶಕ್ಕಾಗಿ ಹೋರಾಡಿದ ಹೋರಾಟಗಾರರನ್ನು, ವೀರ ಯೋಧರನ್ನು ಇಂದು ನಾವೆಲ್ಲರೂ ಸ್ಮ-ರಿಸಿಕೊಳ್ಳಬೇಕು. ಈ ಭಾರತವು ಇಂದು ಸಧೃಡವಾಗಿ, ಆರ್ಥಿಕವಾಗಿ ಸಬಲವಾಗಿದೆ ಎಂದರೆ ಅದಕ್ಕೆ ಕಾರಣ ಡಾ.ಬಿ.ಆರ್. ಅಂಬೇಡ್ಕರ್ ಅವರು ಬರೆದಿರುವ ಸಂವಿಧಾನ. ದೇಶಾಭಿಮಾನ, ರಾಷ್ಟ್ರಾಭಿಮಾನ ನಮ್ಮ ರಕ್ತದ ಕಣ ಕಣದಲ್ಲೂ ಅಳವಡಿಸಿಕೊಳ್ಳುವ ಮೂಲಕ ರಾಷ್ಟ್ರ ಪ್ರೇಮಿಯಾಗಿ ಮೆರೆಯಬೇಕು ಎಂದರು.

ಈ ವೇಳೆ ಪುರಸಭೆ ಅಧ್ಯಕ್ಷ ಡಾ.ಶಾಂತವೀರ ಮನಗೂಳಿ ಮಾತನಾಡಿ, ಸಿಂದಗಿ ನೆಲದಲ್ಲಿ ಆದರ್ಶ ವ್ಯಕ್ತಿಗಳಾಗಿ, ಮಹನೀಯರು ಹುಟ್ಟಿ ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಗುರುತಿಸಿಕೊಂಡು ಸಿಂದಗಿಯ ಹೆಸರನ್ನು ಬೆಳೆಸಿದ ಮಹನೀಯರನ್ನು ಅಜರಾಮರವಾಗಿಸುವ ನಿಟ್ಟಿನಲ್ಲಿ ಪುರಸಭೆ ವತಿಯಿಂದ ಪಟ್ಟಣದ ಪ್ರಮುಖ ರಸ್ತೆಗಳಿಗೆ ಸಾಧಕರ ಹೆಸರನ್ನಿಡಲು ನಾಮಕರಣದ ಫಲಕಗಳನ್ನು ಮಾಡಲಾಗಿದೆ. ಬರಗಾಲದ ಬವಣೆಗೆ ಸಿಕ್ಕ ಸಿಂದಗಿ ಕ್ಷೇತ್ರವನ್ನು ನೀರಾವರಿ ಕ್ಷೇತ್ರ ಮಾಡಿ ಸಿಂದಗಿ ಕೆರೆಗೆ ನೀರು ಹರಿಸಿ ಆಧುನೀಕ ಭಗೀರಥರಾದ ಮಾಜಿ ಸಚಿವ ದಿ.ಎಂ.ಸಿ.ಮನಗೂಳಿ ಅವರ ಹೆಸರನ್ನು ಸಿಂದಗಿ ಕೆರೆಗೆ ಇಡಲಾಗಿದೆ ಎಂದರು.

ಈ ವೇಳೆ ಸರಕಾರಿ ಶಾಲೆಯಲ್ಲಿ ಎಸ್-ಎಸ್‌ಎಲ್‌ಸಿ ಮತ್ತು ಪಿಯುಸಿ ಓದಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ನಗದು ಬಹುಮಾನ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿ ಕರೆಪ್ಪ ಬೆಳ್ಳಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಈ ವೇಳೆ 80 ವರ್ಷಕ್ಕೂ ಮೇಲ್ಪಟ್ಟು ಸರಕಾರಿ ಪಿಂಚಣಿ ಪಡೆಯುತ್ತಿರುವ ಹಿರಿಯ ನಾಗ-ರಿಕ ಫಲಾನುಭವಿಗಳಿಗೆ ಕಾರ್ಯಕ್ರಮದಲ್ಲಿ ಗೌರವ ಸನ್ಮಾನ ಮಾಡಲಾಯಿತು. ಪಟ್ಟಣದ ಪ್ರಮುಖ ರಸ್ತೆಗಳಿಗೆ ಸಾಧಕರ ಹೆಸರನ್ನಿಡಲು ನಾಮಕರಣದ ಫಲಕ ಹಾಗೂ ಮೂರು ಜನ ವಿಶೇಷ ಚೇತನರಿಗೆ ತ್ರಿಚಕ್ರ ವಾಹನವನ್ನು ಶಾಸಕ ಅಶೋಕ ಮನಗೂಳಿ ಹಾಗೂ ಪುರಸಭೆ ಅಧ್ಯಕ್ಷ ಡಾ.ಶಾಂತವೀರ ಮನಗೂಳಿ ವಿತರಣೆ ಮಾಡಿದರು.

ಪೊಲೀಸ್ ಇಲಾಖೆ, ಅಗ್ನಿಶಾಮಕ ದಳ, ಗೃಹರಕ್ಷಕ ದಳ ಸೇರಿದಂತೆ ವಿವಿಧ ಶಾಲಾ ಮಕ್ಕಳಿಂದ ನಡೆದ ಕವಾಯತ್‌ನ್ನು ತೆರೆದ ವಾಹನದಲ್ಲಿ ಶಾಸಕರು ವೀಕ್ಷಿಸಿದರು. ಇದೇ ಸಂದರ್ಭದಲ್ಲಿ ಸರಕಾರಿ ಆದರ್ಶ ವಿದ್ಯಾಲಯದ 80 ವಿದ್ಯಾರ್ಥಿಗಳಿಂದ ವಿವಿಧ ರಾಜ್ಯಗಳ ಬಿಂಬಿಸುವ ವೇಷ ಭೂಷಣದಲ್ಲಿ ನೃತ್ಯ ಅತ್ಯದ್ಭುತವಾಗಿ ಜನಮನ ಸೆಳೆಯಿತು.

ಈ ವೇಳೆ ತಾಪಂ ಇಓ ರಾಮು ಅಗ್ನಿ, ಸಿಪಿಐ ನಾನಾಗೌಡ ಪೊಲೀಸ್‌ಪಾಟೀಲ, ಪುರಸಭೆ ಮುಖ್ಯಾಧಿಕಾರಿ ಎಸ್.ರಾಜಶೇಖರ, ಕ್ಷೇತ್ರ ಶಿಕ್ಷಣಾಧಿಕಾರಿ ಮಹಾಂತೇಶ ಯಡ್ರಾಮಿ,ನೌಕರರ ಸಂಘದ ತಾಲೂಕಾಧ್ಯಕ್ಷ ಅಶೋಕ ತೆಲ್ಲೂರ, ಯೋಜನಾ ಪ್ರಾಧಿಕಾರ ಅಧ್ಯಕ್ಷ ಬಸವರಾಜ ಕಾಂಬಳೆ ವೇದಿಕೆಯ ಮೇಲಿದ್ದರು. ಕಾರ್ಯಕ್ರಮದಲ್ಲಿ ವಿವಿಧ ಸಂಘಟನೆಯ ಮುಖಂಡರು ಹಾಗೂ ವಿವಿಧ ಶಾಲೆಯ ಮಕ್ಕಳು ದೇಶಾಭಿಮಾನಿಗಳು ಭಾಗವಹಿಸದ್ದರು. ದೈ.ನಿರ್ದೇಶಕ ಡಾ.ರವಿ ಗೋಲಾ, ಶಿಕ್ಷಕ ಎಂ.ಆರ್.ಡೋಣಿ ನಿರೂಪಿಸಿದರು.

# 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ

**ಮೂಡಲಗಿ :** ಭಾರತವು ವಿಶ್ವದ ನಾಲ್ಕನೆ ಅತೀ ದೊಡ್ಡ ಆರ್ಥಿಕ ದೇಶವಾಗಿ ಹೊರಹೊಮ್ಮಿದೆ ಇದಲ್ಲದೇ ಸರಕಾರದ ಪ್ರಮುಖ ಯೋಜನೆಗಳ ಬಗ್ಗೆ ವಿವರಿಸುತ್ತ ಭಾರತ ಎಲ್ಲ ರಂಗಗಳಲ್ಲಿ ಸಾಕಷ್ಟು ಪ್ರಗತಿ ಸಾಧಿಸಿದೆ. ಹೀಗಾಗಿ ಜಗತ್ತು ಭಾತರದತ್ತ ನೋಡುತ್ತಿದೆ.ಇಂದು ನಾವು ನಯಾ ಭಾರತ ಎಂಬ ಶಿರ್ಷಿಕೆಯಡಿಯಲ್ಲಿ 79 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸುತ್ತಿದ್ದೇವೆ ಎಂದು ಡೀನ್ ಡಾ. ಎಮ್. ಜಿ. ಕೆರುಟಗಿ ಹೇಳಿದರು.

ಅರಭಾವಿಯ ಕಿತ್ತೂರ ರಾಣಿ ಚನ್ನಮ್ಮಾ ತೋಟಗಾರಿಕೆ ಮಹಾವಿದ್ಯಾಲಯಲ್ಲಿ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆಯನ್ನು ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ ಮತ್ತು ಸಂವಿದಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಭಾವ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ರಾಷ್ಟ್ರ ಧ್ವಜಾರೋಹಣವನ್ನು ನೆರವೇ-ರಿಸಿಕೊಟ್ಟರು.

ಈ ಸಂಧರ್ಬದಲ್ಲಿ ಸಹಾಯಕ ಪ್ರಾಧ್ಯಾಪಕರು, (ದೈಹಿಕ ಶಿಕ್ಷಣ) ಡಾ॥ ಎಸ್. ಜಿ. ಪ್ರವೀಣ-ಕುಮಾರ ರವರು ನೇತೃತ್ವದಲ್ಲಿ ಪ್ರಥಮ ಬಿ.ಎಸ್‌ಸಿ ವಿದ್ಯಾರ್ಥಿಗಳಿಂದ ಪಥಸಂಚಲನ ನಡೆಯಿತು. ಸ್ನಾತಕ ವಿದ್ಯಾರ್ಥಿಗಳಾದ ತುಕಾರಾಮ ಮತ್ತು ರಕ್ಷಿತಾ ಇವ-ರಿಂದ ಪಥಸಂಚಲನ, ವಿದ್ಯಾರ್ಥಿನಿ ಕಾಂಚನಾ. ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು. ಮಹಾವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮದ ಅಧಿಕಾರಿಗಳಾದ ಡಾ॥ ಎಸ್. ಜಿ. ಪ್ರವೀಣಕುಮಾರ, ಡಾ. ರಾಘವೇಂದ್ರ ಕೆ.ಎಸ್., ಡಾ. ಪ್ರತೀಕ್ಷಾ ಹಾಗೂ ಇತರೆ ಶಿಕ್ಷಕ ಮತ್ತು ಶಿಕ್ಷೇತರ ಸಿಬ್ಬಂದಿಗಳು ಮತ್ತು ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿದರು.

# ಆತ್ಮೋನ್ನತಿ ಬದುಕಿಗೆ ಬಣ್ಣ ತುಂಬಿದ ವೃತ್ತಿ ಜೀವನ: ಎಂ ಎಸ್. ಕಲ್ಮಠ



**ಎಂ ಕೆ ಹುಬ್ಬಳ್ಳಿ :** ಕರ್ನಾಟಕ ರಾಜ್ಯ ಸರಕಾರಿ. ನೌಕರರ ಸಂಘದ ಮಾಜಿ ಅಧ್ಯಕ್ಷರು ಕಿತ್ತೂರು ತಾಲೂಕಾ ಸಹಕಾರಿ ಸಂಘದ ಹಾಲಿ ಅಧ್ಯಕ್ಷರು, ದಾಸ್ತಿಕೊಪ್ಪ ಸರಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರಾದ ಎಂ ಎಸ್ ಕಲ್ಮಠ ರವರು ವೃತ್ತಿಯಿಂದ ನಿವೃತ್ತಿ ಯಾಗಿರುವುದು ಅನಿವಾರ್ಯ ಆದರೆ ನನ್ನ ಜೀವನದ ಬದುಕಿಗೆ ಬಣ್ಣ ತುಂಬಿದ ವೃತ್ತಿಯನ್ನು ನೆನೆದು ಮುಂದಿನ ದಿನಗಳಲ್ಲಿ ಸಾಮಾಜಿಕ, ಶೈಕ್ಷಣಿಕ, ಮತ್ತು ಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿ ಕೊಳ್ಳುವೆ ಎಂಬುದಾಗಿ ತಮ್ಮ ಮನದಾಳದ ಮಾತುಗಳನ್ನು ಹಂಚಿ ಕೊಂಡರು.

30 ವರ್ಷಗಳ ಕಾಲ ಶಿಕ್ಷಕರ ವೃತ್ತಿ ತೃಪ್ತಿ ತಂದಿದೆ ಮಕ್ಕಳ ಜೊತೆಯಲ್ಲಿನ ಆಟ ಪಾಠಗಳು ಎಂದು ಬೇಸರ ತರಿಸಲಿಲ್ಲ ಅವರೊಟ್ಟಿಗೆ ಶಾಲಾ ಸಮಯದಲ್ಲಿ ನಮ್ಮನ್ನು ತೊಡಗಿಸಿ ಕೊಂಡಾಗ ಉತ್ತಮ ಅರೋಗ್ಯ ಸ್ವಾಸ್ತ್ಯ ಮನಸ್ಸು ಖುಷಿಯಿಂದ ದಿನ ಸಾಗುತಿತ್ತು, ಈ ಸೇವೆ ತೃಪ್ತಿ ತಂದಿದೆ ಎಂದು ತಮ್ಮ ಅಂತಾರಾಳದ ನುಡಿಗಳನ್ನು ಹೇಳಿದರು, ಈ ಸಂದರ್ಭದಲ್ಲಿ ಸೇವೆ ಸಾಥ-'ಕಕತೆ ಕುರಿತು ಕನ್ನಡ ಸಾಹಿತ್ಯ ಪರಿಷತ್ ನಿಪೂ ಅಧ್ಯಕ್ಷರು ಡಾ ಸೋಮಶೇಖರ್ ಹಲಸಗಿ ಮಾತನಾಡಿ ದರು, ಮುಖ್ಯ ಶಿಕ್ಷಕರಾದ ಸತೀಶ ಕಾರಿಮನಿ ರಾಜು ಮೇಳೇದ, ಸಂಭ್ರಮ್, ಮುಂತಾದವರು ಫಲ ಪುಷ್ಪ ನೀಡಿ ಶಾಲು ಹೊದಿಸಿ ಸನ್ಮಾನಿದರು.

# ಗಡಿಯಲ್ಲಿ ನಮ್ಮ ಯೋಧರು ಹಗಲು ರಾತ್ರಿಯನ್ನದೇ ನಮ್ಮ ದೇಶವನ್ನು ಕಾಯುತ್ತಿದ್ದಾರೆ



ಸಿಂದಗಿ: 1947ರಲ್ಲಿ ಬ್ರೀಟೀಷರ ದಾಸ್ಯದಿಂದ ಸ್ವತಂತ್ರ ಪಡೆದ ದಿನವಿದು. ಇದನ್ನು ರಾಷ್ಟ್ರೀಯ ಹಬ್ಬವನ್ನಾಗಿ ನಾವೆಲ್ಲರೂ ಆಚರಣೆ ಮಾಡಬೇಕು ಎಂದು ಇನ್ನರ್‌ವ್ಹಿಲ್ ರೊಟರಿ ಕ್ಲಬ್ ಮಾಜಿ ಅಧ್ಯಕ್ಷೆ ನಾಗರತ್ನ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ ಸೋಂಪುರ ರಸ್ತೆಯಲ್ಲಿರುವ ಶ್ರೀ ಸಂಗಮೇಶ್ವರ ಫಾರ್ಮಸಿ ಕಾಲೇಜಿನಲ್ಲಿ ಏರ್ಪಡಿಸಿದ 79ನೇ ಸ್ವಾತಂತ್ರೋತ್ಸವ ದಿನಾಚರಣೆಯ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿದ ಅವರು, ನಾವೆಲ್ಲರೂ ನೆಮ್ಮದಿಯಿಂದ ಜೀವನ ನಡೆಸುತ್ತೇವೆಂದರೆ ಗಡಿಯಲ್ಲಿ ನಮ್ಮ ಯೋಧರು ಹಗಲು ರಾತ್ರಿಯನ್ನದೇ ನಮ್ಮ ದೇಶವನ್ನು ಕಾಯುತ್ತಿದ್ದಾರೆ. ಅವರನ್ನು ನೆನೆಯುವ ದಿನವಿದು.

ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅದ್ಯಕ್ಷ ಅಶೋಕ ಅಲ್ಲಾಪುರ ಮಾತನಾಡಿದರು. ಪ್ರಾಥಮಿಕ ಶಾಲಾ ಮಕ್ಕಳು ಸಾಂಸ್ಕೃತಿಕ ಕಾರ್ಯಕ್ರಮಗಳು ಜನಮನ ಸೆಳೆದವು.

ಕಾವ್ಯ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಚಂದ್ರಶೇಖರ ನಾಗರಬೆಟ್ಟ, ಶಕುಂತಲಾ ಹಿರೇಮಠ, ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಆನಂದ ಶಾಬಾದಿ, ಪಂಡಿತ ಯಂಪೂರೆ, ಕಸಾಪ ನಿಕಟಪೂರ್ವ ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ ವೇದಿಕೆಯ ಮೇಲಿದ್ದರು. ನಿಶಾ ಕಲಾವಂತ ನಿರೂಪಿಸಿದರು. ಪ್ರಾಚಾರ್ಯ ಸಂದೀಪ ಚಾಂದಕವಠೆ ಸ್ವಾಗತಿಸಿದರು. ಶಿಕ್ಷಕ ರಾಜಕುಮಾರ ಕಾಂಬಳೆ ವಂದಿಸಿದರು.

# ಹಳ್ಳೂರಲ್ಲಿ ವಿವಿಧ ಕಡೆ ಧ್ವಜಾರೋಹಣ



**ಹಳ್ಳೂರ :** 15 ಗ್ರಾಮದಲ್ಲಿ ವಿವಿಧ ಕಡೆ 79 ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ನಿಮಿತ್ಯ ಧ್ವಜಾರೋಹಣವನ್ನು ಗ್ರಾಮದ ಪ್ರಮುಖರ ಸಮ್ಮುಖದಲ್ಲಿ ನೆರವೇ-ರಿತು. ಗ್ರಾಮ ಪಂಚಾಯತಿ ಕಚೇರಿಯಲ್ಲಿ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ, ಹಾಲು ಉತ್ಪಾದಕರ ಸಹಕಾರ ಸಂಘ, ವಿವಿಧ ಸಹಕಾರಿ ಬ್ಯಾಂಕ, ಗ್ರಾಮ ಆಡಳಿತ ಅಧಿಕಾರಿ ಕಛೇರಿ, ಪಶು ಆಸ್ಪತ್ರೆ, ಗ್ರಾಮದ ಶಾಲಾ ಕಾಲೇಜುಗಳಲ್ಲಿ ಧ್ವಜಾರೋಹಣ ನೆರವೇರಿಸಿದರು. ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ,ಹಾಗೂ ಮಾಜಿ ಸೈನಿಕ-ರಿಗೆ ಸನ್ಮಾನ ಮಾಡಿ ಗೌರವಿಸಿದರು. ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ಜನ್ಮ ದಿನಾಚರಣೆ ನಿಮಿತ್ಯ ಕೇಕ್ ಕಟ್ ಮಾಡಿ ಹುಟ್ಟು ಹಬ್ಬವನ್ನು ಆಚರಿಸಿದರು. ಶಾಲೆಯ ವಿದ್ಯಾರ್ಥಿಗಳು ಮಹಾನ ಮೇಧಾವಿಗಳ ರೂಪದಲ್ಲಿ ವೇಷ ಭೂಷಣ ದರಿಸಿದ್ದು ವಿಶೇಷವಾಗಿ ಕಂಡು ಬಂದಿತು.

# ಕರ್ನಾಟಕ ಚೌಕದಲ್ಲಿ ಸಂಭ್ರಮದ ಸ್ವಾತಂತ್ರೋತ್ಸವ

**ನೇಸರಗಿ.** ಗ್ರಾಮದ ಗ್ರಾಮ ಪಂಚಾಯತ, ಕುವೆಂಪು ಮಾದರಿ ಪ್ರಾಥಮಿಕ ಶಾಲೆ, ಸರ್ಕಾರಿ ಪ್ರೌಢ ಶಾಲೆ, ವಿದ್ಯಾ ಮಂದಿರ ಪ್ರೌಢ ಶಾಲೆ, ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದದಲ್ಲಿ 79 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತೀ ಸಡಗರ ಸಂಭ್ರಮದಿಂದ ಆಚರಿಸಲಾಯಿತು. ಎಲ್ಲ ಶಾಲೆಯ ಶಿಕ್ಷಕರು, ವಿದ್ಯಾರ್ಥಿಗಳು ಗ್ರಾಮದ ಎಲ್ಲ ರಸ್ತೆಗಳಲ್ಲಿ ಸಂಚರಿಸಿ ಬೋಲೋ ಭಾರತ ಮಾತಾ ಕಿ ಜೈ, ಒಂದೇ ಮಾತರಂ ಎನ್ನುವ ಘೋಷನೆಯೊಂದಿಗೆ ಕರ್ನಾಟಕ ಚೌಕ ಗೆ ಆಗಮಿಸಿ ಅಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷರ, ಉಪಾಧ್ಯಕ್ಷರ, ಸದಸ್ಯರ, ಎಲ್ಲ ಇಲಾಖೆಗಳ ಅಧಿಕಾರಿಗಳ, ಗ್ರಾಮದ ಹಿರಿಯರ,ಪಂಚಾಯತ ಸಿಬ್ಬಂದಿಯ, ಮಕ್ಕಳ ಸಮ್ಮುಖದಲ್ಲಿ ಗ್ರಾಮ ಪಂಚಾಯತ ಅಧ್ಯಕ್ಷ ವೀರಭದ್ರ ಚೋಭಾರಿ ಧ್ವಜಾರೋಹಣ ನೆರವೇರಿಸಿದರು.



# ಯುವ ಪೀಳಿಗೆ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನಗಳ ಮಹತ್ವವನ್ನು ತಿಳಿದುಕೊಳ್ಳಬೇಕು- ಜಿಲ್ಲಾಧಿಕಾರಿ ಸುರೇಶ್ ಇಟ್ನಾಳ

ಕೊಪ್ಪಳ : ಯುವ ಪೀಳಿಗೆ ನಮ್ಮ ದೇಶದ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ ಮತ್ತು ಬಲಿದಾನಗಳ ಮಹತ್ವವನ್ನು ತಿಳಿದುಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ್ ಬಿ. ಇಟ್ನಾಳ ಹೇಳಿದರು

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಡಳಿತ ಭವನದ ಆವರಣದಲ್ಲಿ ನಡೆದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ರಾಷ್ಟ್ರ ಧ್ವಜಾರೋಹಣವನ್ನು ನೆರವೇರಿಸಿ ಮಾತನಾಡಿದರು.



ನಮ್ಮೆಲ್ಲರಿಗೂ ಗೊತ್ತಿರುವ ಹಾಗೆ ಅಸಂಖ್ಯಾತ ಸ್ವಾತಂತ್ರ್ಯ ಹೋರಾಟಗಾರ ಶ್ರಮದಿಂದ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ. ಮಹಾತ್ಮಾ ಗಾಂಧೀಜಿ, ಜವಾಹರಲಾಲ್ ನೆಹರು, ಸುಭಾಷ್ ಚಂದ್ರ ಬೋಸ್, ಸರ್ದಾರ್ ವಲ್ಲಭಭಾಯಿ ಪಟೇಲ್, ಕಿತ್ತೂರು ರಾಣಿ ಚೆನ್ನಮ್ಮ, ಝಾನ್ಸಿ ರಾಣಿ ಲಕ್ಷ್ಮೀಬಾಯಿ, ಬೇಗಂ ಹಜರತ್ ಮಹಲ್, ತಾತ್ಯಾ ಟೊಪಿ, ನಾನಾ ಸಾಹೇಬ್, ಮಂಗಲ್ ಪಾಂಡೆ, ಚಂದ್ರಶೇಖರ ಆಜಾದ್, ಭಗತ್ ಸಿಂಗ್, ರಾಜಗುರು, ಖುದಿರಾಮ ಬೋಸ್, ಸುಖ ದೇವ, ಹೀಗೆ ಸಹಸ್ರಾರು ಸ್ವಾತಂತ್ರ್ಯ ಹೋರಾಟಗಾರರ ಹೆಸರುಗಳು ಇತಿಹಾಸದಲ್ಲಿ ಅಜರಾಮರವಾಗಿವೆ ಎಂದರು. ನಮ್ಮ ದೇಶದಲ್ಲಿ ಪ್ರಾಂತ್ಯವಾರು ಹಲವಾರು ಯುದ್ಧಗಳು ನಡೆದರು ಕೂಡ ಪ್ರಪ್ರಥಮ ಬಾರಿಗೆ 1857ರಲ್ಲಿ ಸಿಪಾಯಿ ದಂಗೆಯ ಮೂಲಕ ಸ್ವಾತಂತ್ರ್ಯ ಹೋರಾಟದ ಕಿಚ್ಚು ಹೆಚ್ಚಿತು. 1885 ರಲ್ಲಿ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಸ್ಥಾಪಿಸಿದ ನಂತರ ಸ್ವಾತಂತ್ರ್ಯ ಚಳುವಳಿ ಮತ್ತಷ್ಟು ಚೇತರಿಕೆ ಕಂಡುಕೊಂಡಿತು. ಲಾಲ್ ಬಹಾದ್ದೂರ್ ಶಾಸ್ತ್ರಿ, ಬಾಲಗಂಗಾಧರ ತಿಲಕ ಮತ್ತು ಬಿಪಿನ್ ಚಂದ್ರ ಪಾಲ್ ರವರ ನೇತೃತ್ವದಲ್ಲಿ ಬಹಳಷ್ಟು ಹೋರಾಟಗಳು ನಡೆದವು. ಆಗಿನ ಕಾಲದಲ್ಲಿ ಪಿಪಿಪಿ ಮಾದರಿ, ಅಂದರೆ ಪ್ರೇಯರ್, ಪ್ರೊಟೆಸ್ಟ್ ಮತ್ತು ಮನವಿ ಕೊಡಲು ಮಾತ್ರ ಸೀಮಿತವಾಗಿತ್ತು. ನಂತರದಲ್ಲಿ ತೀವ್ರಗಾಮಿಗಳಾದ ಚಂದ್ರಶೇಖರ ಆಜಾದ್, ಭಗತ್ ಸಿಂಗ್, ರಾಜಗುರು, ಖುದಿರಾಮ ಬೋಸ್, ಸುಖ ದೇವ ಹಾಗೂ ಅನೇಕರು ಬಹಳಷ್ಟು ಹೋರಾಟಗಳನ್ನು ಮಾಡಿದರು. ಆ ಸಂದರ್ಭದಲ್ಲಿ ಗಾಂಧೀಜಿಯವರು ದಕ್ಷಿಣ ಆಫ್ರಿಕಾದಿಂದ ಭಾರತಕ್ಕೆ ಬಂದ ಮೇಲೆ ಸತ್ಯ ಮತ್ತು ಅಹಿಂಸೆಯ ತಳಹದಿಯ ಮೇಲೆ ಸ್ವಾತಂತ್ರ್ಯ ಹೋರಾಟವನ್ನು ರೂಪಿಸಿದರು. ಅವರ ನೇತೃತ್ವದಲ್ಲಿ ಅಸಹಕಾರ ಚಳವಳಿ, ಉಪ್ಪಿನ ಸತ್ಯಾಗ್ರಹ ತೆರಿಗೆ ರಹಿತ ಚಳುವಳಿ, ಕ್ವಿಟ್ ಇಂಡಿಯಾ ಚಳುವಳಿ ಹೀಗೆ ಹಲವಾರು ಹೋರಾಟಗಳು ನಡೆದಿದ್ದವು. ಇದಕ್ಕೆ ಪೂರಕವಾಗಿ ಸುಭಾಷ್ ಚಂದ್ರ ಬೋಸ್ ರವರು ಇಂಡಿಯನ್ ನ್ಯಾಷನಲ್ ಆರ್ಮಿಯನ್ನು ಕಟ್ಟಿಕೊಂಡು, ಬೇರೆ ದೇಶಗಳ ಸಹಕಾರವನ್ನು ಸಹ ಪಡೆದುಕೊಂಡು ಸ್ವಾತಂತ್ರ್ಯ ಹೋರಾಟವನ್ನು ಮಾಡಿದರು. ಇಂತಹ ಎಲ್ಲಾ ಮಹನೀಯರ ಹೋರಾಟಗಳ ಪ್ರತಿಯಾಗಿ ನಮ್ಮ ದೇಶಕ್ಕೆ 1947ರಲ್ಲಿ ಸ್ವಾತಂತ್ರ್ಯ ದೊರೆಯಿತು ಎಂದು ತಿಳಿಸಿದರು.

ಯಾರು ಇತಿಹಾಸವನ್ನು ಓದುವುದಿಲ್ಲ, ಅವರಿಂದ ಇತಿಹಾಸ ನಿರ್ಮಿಸುವುದಕ್ಕೆ ಸಾಧ್ಯವಾಗುವುದಿಲ್ಲ. ಆದ್ದರಿಂದ ನಮ್ಮ ದೇಶದ ಸ್ವಾತಂತ್ರ್ಯ ಹೋರಾಟದ ಇತಿಹಾಸವನ್ನು ಎಲ್ಲರೂ ತಿಳಿದುಕೊಂಡು, ಯುವ ಪೀಳಿಗೆಗೆ ಹೇಳಿಕೊಡುವ ಕೆಲಸವಾಗಬೇಕಿದೆ. ತಮಗೆಲ್ಲ- ರಿಗೂ ಸ್ವಾತಂತ್ರ್ಯೋತ್ಸವ ದಿನಾಚರಣೆ ಶುಭಾಶಯಗಳು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿ.ಪಂ ಉಪ ಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿ.ಪಂ ಮುಖ್ಯ ಲೆಕ್ಕಾಧಿಕಾರಿ ಅಮೀನ್ ಅತ್ತಾರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ಶೆಟ್ಟೆಪ್ಪನವರ್, ಆಹಾರ ಇಲಾಖೆ ಉಪನಿರ್ದೇಶಕ ಸೋಮಶೇಖರ ಬಿರಾದರ್, ಜಿಲ್ಲಾ ತರಬೇತಿ ಕೇಂದ್ರದ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಸಂಗೊಳ್ಳಿ ರಾಯಣ್ಣ ಭಾವಚಿತ್ರಕ್ಕೆ ಪುಷ್ಪನವನ ಸಲ್ಲಿಕೆ: ಜಿಲ್ಲಾಡಳಿತ ಭವನದ ಆವರಣದಲ್ಲಿ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸಿದ ಬಳಿಕ ಸ್ವಾತಂತ್ರ್ಯ ಹೋರಾಟಗಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ ಅಂಗವಾಗಿ ಜಿಲ್ಲಾಧಿಕಾ- ರಿಗಳ ಕಛೇರಿ ಸಭಾಂಗಣದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಓ, ಅಪರ ಜಿಲ್ಲಾಧಿಕಾರಿಗಳು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕರ್ಣಕುಮಾರ ಸೇರಿದಂತೆ ಇತರೆ ಅಧಿಕಾರಿಗಳು ಸಂಗೊಳ್ಳಿ ರಾಯಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

# ಬೆಳಗಾವಿ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡುತ್ತಿದ್ದೇವೆ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ: ಕುಡಿಯುವ ನೀರಿನ ಸಮಸ್ಯೆ ಹೋಗಲಾಡಸಲು ಸರ್ಕಾರ ಪ್ರಯತ್ನ ಮಾಡುತ್ತಿದೆ. ಸಾರ್ವಜನಿಕರು 24/7 ನಿರಂತರ ನೀರು ಸರಬರಾಜು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಬೆಳಗಾವಿ ಉತ್ತರ ಮತಕ್ಷೇತ್ರದ ವಾರ್ಡ್ ಸಂಖ್ಯೆ 47, 55ರಲ್ಲಿರುವ ಮನೆಗಳಿಗೆ 24/7 ನಿರಂತರ ನೀರು ಸರಬರಾಜು ಯೋಜನೆಯ ಪ್ರಾಯೋಗಿಕವಾಗಿ ಚಾಲನೆ ನೀಡಿ ಮಾತನಾಡಿದ ಅವರು, ಫಿರೋಜ ಸೇಠ್ ಶಾಸಕರಾಗಿದ್ದಾಗ ಈ ಯೋಜನೆ ಜಾರಿಗೆ ಪ್ರಯತ್ನ ಪಟ್ಟಿದ್ದರು. ಬಿಜೆಪಿ ಸರ್ಕಾರದಲ್ಲಿ ಯೋಜನೆಗೆ ಮಂಜೂರಾತಿ ದೊರತಿದೆ. ಬೆಳಗಾವಿ ವೇಗವಾಗಿ ಬೆಳೆಯುತ್ತಿದೆ. ನಾವು ಅಧಿಕಾರಕ್ಕೆ ಬಂದಾಗನಿಂದಲೂ ಬೆಳಗಾವಿ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡುತ್ತಿದ್ದೇವೆ ಎಂದರು.

ಸಂಸದ ಜಗದೀಶ ಶೆಟ್ಟರ್ ಮಾತನಾಡಿ, ಈ ಹಿಂದೆ ಎರಡ್ಮೂರು ದಿನಕ್ಕೊಮ್ಮೆ ನೀರು ಬರುತ್ತಿತ್ತು. ನೀರು ಸಂಗ್ರಹಿಸಿಟ್ಟು ಮತ್ತೆ ಹೊಸ ನೀರು ಬಂದಾಗ ಅದನ್ನು ಚೆಲ್ಲಿ ಮತ್ತೆ ನೀರು ಸಂಗ್ರಹಿಸಲಾಗುತ್ತಿತ್ತು. 24/7 ನೀರು ಸರಬರಾಜು ಆಗುತ್ತಿರುವುದ್ದರಿಂದ ನೀರು ಪೋಲಾಗುವುದಿಲ್ಲ ಎಂದರು.

ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಮಾತನಾಡಿ, ಬೆಳಗಾವಿ ಜಿಲ್ಲೆ ಬೆಂಗಳೂರು ಹೊರೆತು ಪಡಿಸಿ ಅತೀ ಹೆಚ್ಚು ಶಾಸಕರನ್ನು ಹೊಂದಿರುವ ಜಿಲ್ಲೆಯಾಗಿದೆ. ಬೆಳಗಾವಿ ಮಹಾನಗರ ಅತೀ ವೇಗವಾಗಿ ಬೆಳೆಯುತ್ತಿದೆ. ಬೆಳೆಯುತ್ತಿರುವ ನಗರದಲ್ಲಿನ ಜನರಿಗೆ ಮೂಲಭೂತ ಸೌಕರ್ಯಗಳನ್ನು ನೀಡುವುದು ನಮ್ಮ ಕರ್ತವ್ಯವಾಗಿದೆ. ಇತಿ ಮೀತಿಯೋಳಗೆ ನೀರಿನ ಸದ್ಬಳಕೆ ಮಾಡಿಕೊಳ್ಳುವಂತೆ ಸಾರ್ವಜನಿಕರಿಗೆ ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಸಕ ಆಸೀಫ್ ಸೇಠ್, ರಕ್ಕಸಕೊಪ್ಪದಿಂದ ಮಾತ್ರ ಬೆಳಗಾವಿಗೆ ನೀರು ಪೂರೈಕೆಯಾಗುತ್ತಿತ್ತು. 2015ರಲ್ಲಿ ಸತೀಶ ಜಾರಕಿಹೊಳಿ ಸಚಿವರಾಗಿದ್ದರು, ಫಿರೋಜ್ ಸೇಠ್ ಶಾಸಕರಾಗಿದ್ದ ಸಮಯದಲ್ಲಿ ಹಿಡಕಲ್ ಜಲಾಶಯದಿಂದ ಕುಡಿಯುವ ನೀರು ಪೂರೈಕೆಯ ಯೋಜನೆಯ ನೀಲನಕ್ಷೆ ತಯಾರಿಸಿದ್ದರು. ಹಿಡಕಲ್ ಜಲಾಶಯದಿಂದ ಪ್ರತಿದಿನ 60 ಕೋಟಿ ಲೀಟರ್ ಶುದ್ಧೀಕರಿಸಿದ ನೀರು ಬೆಳಗಾವಿಗೆ ಬರುತ್ತಿದೆ. ಚಿಕ್ಕದಾದ ಕಣಬರಗಿ ರಸ್ತೆ ಅಗಲೀಕರಣ, ಕಣಬರಗಿ ಕರೆಯನ್ನು ಸ್ವಚ್ಛಗೊಳಿಸಿ ಅಭಿವೃದ್ಧಿಗೊಳಿಸಲಾಗಿದೆ ಎಂದರು.

ಸಚಿವ ಸತೀಶ ಜಾರಕಿಹೊಳಿ, ಸಂಸದ ಜಗದೀಶ ಶೆಟ್ಟರ್ ಸೇರಿದಂತೆ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಭಾಗವಹಿಸಿದ್ದ ಗಣ್ಯರನ್ನು ಕಣಬರಗಿ ನಾಗರೀಕರ ಪರವಾಗಿ ಸನ್ಮಾನಿಸಲಾಯಿತು. ಮ

ಈ ಸಂದರ್ಭದಲ್ಲಿ ಪಾಲಿಕೆ ಮೇಯರ ಮಂಗೇಶ ಪವಾರ, ಉಪಮೇಯರ ವಾಣಿ ಜೋಶಿ, ನಗರ ಸೇವಕಿಂ- ಯರಾದ ಅಸ್ಮಿಥಾ ಪಾಟೀಲ, ಸವಿತಾ ಪಾಟೀಲ, ಸೇವಕರಾದ ಭೈರಗೌಡಾ ಪಾಟೀಲ, ಮುರಘೇಂದ್ರ ಪಾಟೀಲ ಸೇ- ರಿದಂತೆ ಎಲ್ ಆಯಂಡ್ ಟಿ ಕಂಪನಿಯ ಸಿಬ್ಬಂದಿ ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ದೇಶದಲ್ಲೇ ಪ್ರಥಮ ಬಾರಿಗೆ 'ಪ್ರಭುವಿನೆಡೆಗೆ ಪ್ರಜಾಪ್ರಭುತ್ವ' ಆರಂಭ : ಎಚ್. ಕೆ ಪಾಟೀಲ



ಗದಗ: 'ಪ್ರಭುವಿನೆಡೆಗೆ ಪ್ರಭುತ್ವ' ಜಾ- ರಿಗೆ ತರಲಾಗಿದ್ದು, ಪ್ರಜಾಪ್ರಭುತ್ವದ ಆಡಳಿತದಲ್ಲಿ ಪ್ರಜೆಗಳಿಗೆ ತೀವ್ರವಾಗಿ ಸ್ಪಂಧಿಸಿ, ಪಾರದರ್ಶಕತೆ ಮೇರೆಯಲು ಗದಗ ನಗರದಲ್ಲಿ ದೊಡ್ಡ ಹೆಜ್ಜೆ ಇಟ್ಟಿದ್ದೇವೆ. ಸಮಸ್ಯೆಗೆ ಪರಿಹಾರ ತ್ವರಿತಗತಿಯಲ್ಲಿ ಆಗಬೇಕು ಎನ್ನುವ ಉದ್ದೇಶದಿಂದ ದೇಶದಲ್ಲೇ ಪ್ರಥಮ ಬಾರಿಗೆ ಪ್ರಭುವಿನೆಡೆಗೆ ಪ್ರಜಾಪ್ರಭುತ್ವ ಕಾರ್ಯಕ್ರಮ ಮಾಡಲಾಗುತ್ತಿದೆ. ದೇಶದ ಪ್ರಜೆಗೆ ಪ್ರಭುವಿನ ಪಟ್ಟ ಇದೆ. ಪ್ರಜೆಗಳನ್ನು ಅಧಿಕಾರಸ್ಥರನ್ನಾಗಿ ಮಾಡಲಾಗುತ್ತಿದ್ದು, ತ್ವರಿತಗತಿಯಲ್ಲಿ ಸಮಸ್ಯೆಗೆ ಪರಿಹಾರ ನೀಡುವ ಕಾರ್ಯಕ್ರಮ ಇದಾಗಿದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್ ಕೆ ಪಾಟೀಲ ತಿಳಿಸಿದರು. ಗದಗ ನಗರದ ಕೆ. ಎಚ್ ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ 79ನೇ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಧ್ವಜಾರೋಹಣ ನೆರವೇರಿಸಿ, ನಂತರ ಜರುಗಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಈ ಕಲ್ಪನೆ ದೇಶದಲ್ಲಿ ಮೊದಲ ಬಾರಿಗೆ ನಡೆಯುತ್ತಿದೆ. ಹಿಂದಿನ ಅರಸರ ಕಾಲದಲ್ಲಿ ನಾಗರಿಕರಿಗೆ ತೊಂದರೆ ಆದಾಗ ನ್ಯಾಯದ ಗಂಟೆಯನ್ನು ಭಾರಿಸಬೇಕಾಗಿತ್ತು. ಆದರೆ, ಈಗ ಕಾಲ ಬದಲಾಗಿದ್ದು, ಬಟನ್ ಒತ್ತುವ ಮೂಲಕ ಸಮಸ್ಯೆ ಬಗೆಹರಿಸಿಕೋಳ್ಳಬಹುದು. ಬಟನ್ ಒತ್ತಿದಾಕ್ಷಣ ಕಮಾಂಡ್ ಸೆಂಟರ್ ನವರು ಮಾಹಿತಿ ಪಡೆಯುತ್ತಾರೆ. ಜನರ ದೂರು ಆಲಿಸಿ ತಕ್ಷಣ ಸಂಬಂಧಿಸಿದವರಿಗೆ ಕಳುಹಿಸಿಕೊಡುತ್ತಾರೆ. ಇದರಿಂದ ಕೆಲವೇ ಗಂಟೆಗಳಲ್ಲಿ ಪರಿಹಾರ ಕಂಡುಕೊಳ್ಳಲು ಸಾಧ್ಯವಾಗುತ್ತದೆ. ಆಗಸ್ಟ್ 15 ರಂದು ಜಿಲ್ಲಾ ಕ್ರೀಡಾಂಗಣದಲ್ಲಿ ಹಾಗೂ ಜವಳಗಲ್ಲಿಯಲ್ಲಿ ಉದ್ಘಾಟನೆ ಮಾಡಿದ್ದೇವೆ ಎಂದು ಹೇಳಿದರು.

ಅಂಜಿಕೆ, ಭಯ ಇಲ್ಲದೆ ದೂರು ನೀಡುವ ವಿನೂತನ ವ್ಯವಸ್ಥೆ ಇದಾಗಿದ್ದು, ಇದರಿಂದ ಆಡಳಿತ ವ್ಯವಸ್ಥೆ ಚುರುಕುಗೋಳ್ಳುತ್ತದೆ. ದೂರು ನೀಡಿದಾಗ ವೆಬ್ ಸೈಟ್ ನಲ್ಲಿ ಕ್ರಿಯೇಟ್ ಆಗುತ್ತದೆ. ಇದರಿಂದ ದೂರು ನೀಡಿದ ಬಗ್ಗೆ ಸಂಪೂರ್ಣ ಮಾಹಿತಿ ಲಭ್ಯವಾಗುತ್ತದೆ. ಯಾವುದೇ ನಿರ್ಭಿತಿಯಿಲ್ಲದೇ ಡಿಸಿ, ಎಸ್ಪಿ, ಸಿಇಓ ಸೇ- ರಿದಂತೆ ಎಲ್ಲ ಇಲಾಖೆಯ ಅಧಿಕಾರಿಗಳಿಗೆ ಸಾರ್ವಜನಿಕರು ದೂರು ಸಲ್ಲಿಸಬಹುದು ಎಂದರು.

ನಗರದಲ್ಲಿನ ಥರ್ಡ್ ಐ ವ್ಯವಸ್ಥೆಯಿಂದ ಮನೆಗಳ್ಳತನ, ಸುಲಿಗೆ, ಅಪಘಾತಗಳು ಇಳಿಮುಖವಾಗಿವೆ. ಪತ್ತೆಹಚ್ಚುವಿಕೆ ಹೆಚ್ಚಾಗಿದೆ. ಕೊಲೆ ಪ್ರಕರಣಗಳನ್ನು ತಕ್ಷಣ ಪತ್ತೆ ಹಚ್ಚಲಾಗುತ್ತಿದ್ದು, ಅಪರಾದ ಪ್ರಕರಣಗಳು ಕಡಿಮೆ ಆಗಿವೆ. ಸಾರಿಗೆ ನಿಯಮ ಉಲ್ಲಂಘನೆ ಪ್ರಕರಣಗಳು ತೀರಾ ಕಡಿಮೆ ಆಗಿವೆ. ಸಮಾಜದ ಹಿತಕ್ಕಾಗಿ ಹೊಸ ಹೊಸ ವ್ಯವಸ್ಥೆಯನ್ನು ಜಿಲ್ಲೆಯಲ್ಲಿ ಜಾರಿಗೆ ತಂದು ಯಶಸ್ವಿಯಾಗುತ್ತಿದ್ದೇವೆ. ಮುಂದಿನ ದಿನಮಾನಗಳಲ್ಲಿಯೂ ಸಾರ್ವಜನಿಕರ ಹಿತಕ್ಕಾಗಿ ಎಲ್ಲಾ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ. ಒಟ್ಟಾರೆಯಾಗಿ ಪ್ರಜೆಗಳು ನೆಮ್ಮದಿಯಿಂದ ಬದುಕಬೇಕು ಎನ್ನುವುದೇ ಕರ್ನಾಟಕ ಸರ್ಕಾರದ ಮೂಲ ಉದ್ದೇಶ ಆಗಿದೆ ಎಂದರು.

***

## ಶ್ರೀ ಕೃಷ್ಣ ಜಯಂತಿ ಉತ್ಸವ ಆಗಸ್ಟ. 19 ರಂದು

ಬೆಳಗಾವಿ, : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ಮಂಗಳವಾರ (ಆ.19) ಬೆಳಿಗ್ಗೆ 9.30 ಗಂಟೆಗೆ ನಗರದ ಕುಮಾರ ಗಂಧರ್ವ ಕಲಾ ಮಂದಿರದಲ್ಲಿ ಶ್ರೀ ಕೃಷ್ಣ ಜಯಂತಿ ಉತ್ಸವ ಕಾರ್ಯಕ್ರಮ ಜರುಗಲಿದೆ.

ಚಿತ್ರದುರ್ಗಮಠ ಶ್ರೀ ಶ್ರೀ ಕೃಷ್ಣ ಯಾದವಾನಂದ ಮಹಾ ಸಂಸ್ಥಾನ ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗ- ರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆ ವಹಿಸಲಿದ್ದು, ಗೋಕಾಕ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ಡಾ. ಸಂಜಯ ಶಿಂದಿಹಟ್ಟಿ ಅವರು ವಿಶೇಷ ಉಪನ್ಯಾಸ ಮಾಡಲಿದ್ದಾರೆ.

ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ಮಾನ್ಯ ವಿಶೇಷ ಪ್ರತಿನಿಧಿ-2 ನವದೆಹಲಿ ಪ್ರಕಾಶ ಹುಕ್ಕೇರಿ, ವಾಯುವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರಾದ ಭರಮಗೌಡ ಕಾಗೆ ಮತ್ತು ಕರ್ನಾಟಕ ರಾಜ್ಯ ಹಣ- ಕಾಸು ಸಂಸ್ಥೆ ಅಧ್ಯಕ್ಷರಾದ ಮಹಾಂತೇಶ ಕೌಜಲಗಿ ಅವರುಗಳು ವಿಶೇಷ ಆಮಂತ್ರಿತರಾಗಿ ಆಗಮಿಸಲಿದ್ದಾರೆ.

ರಾಜ್ಯ ಸಭೆ ಸಂಸದರಾದ ಈರಣ್ಣ ಕಡಾಡಿ, ಚಿಕ್ಕೋಡಿ ಲೋಕ ಸಭಾ ಸಂಸದರಾದ ಪ್ರಿಯಾಂಕಾ ಜಾರಕಿಹೊಳಿ, ಜಿಲ್ಲಾ ಲೋಕ ಸಭಾ ಸಂಸದರಾದ ಜಗದೀಶ್ ಶೆಟ್ಟರ, ಉತ್ತರ ಕನ್ನಡ ಲೋಕ ಸಭಾ ಸಂಸದರಾದ ವಿಶ್ವೇಶ್ವರ ಹೆಗಡೆ ಕಾಗೇರಿ ಅವರುಗಳು ಗೌರವಾನ್ವಿತ ಅತಿಥಿಗಳಾಗಿ ಆಗಮಿಸಲಿದ್ದಾರೆ.

ಜಿಲ್ಲೆಯ ಎಲ್ಲ ಸಂಸದರು, ಶಾಸಕರು, ಪರಿಷತ್ ಸದಸ್ಯರು, ಜನಪ್ರತಿಧಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

**ವಾರ್ತಾ ಇಲಾಖೆ: 79 ನೇ ಸ್ವಾತಂತ್ರ್ಯ ದಿನಾಚರಣೆ ಆಚರಣೆ**

ಕಾರವಾರ. : ಕಾರವಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ 79 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಶುಕ್ರವಾರ ಆಚ- ರಿಸಲಾಯಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಬಿ.ಶಿವಕುಮಾರ್ ಧ್ವಜಾರೋಹಣವನ್ನು ನೆರವೇರಿಸಿದರು. ಈ ಸಂದರ್ಭದಲ್ಲಿ ವಾರ್ತಾ ಇಲಾಖೆಯ ಸಿಬ್ಬಂದಿಗಳು ಹಾಗೂ ಪತ್ರಕರ್ತರು ಉಪಸ್ಥಿತರಿದ್ದರು.

# ಕೃಷ್ಣಜನ್ಮಾಷ್ಟಮಿ ಮೊಸರನ ಗಡಿಗಳ ಒಡೆಯುವ ಕಾರ್ಯಕ್ರಮಕ್ಕೆ ಚಾಲನೆ



ಜಮಖಂಡಿ: ಶ್ರಾವಣ ಮಾಸದಲ್ಲಿ ಬರುವ ಕೃಷ್ಣ ಪಕ್ಷದ ಅಷ್ಟಮೀಯ ಕೃಷ್ಣ ಜನಿಸಿದ ಈ ಶುಭದಿನವನ್ನು ಗೋಕುಲಾಷ್ಟಮಿ ಎಂದು ಕರೆಯಲಾಗುತ್ತದೆ ಎಂದು ಮರಾಠ ಸಮಾಜ ಮುಖಂಡ ಸುಭಾಸ ಚವ್ಹಾಣ ತಿಳಿಸಿದರು.

ನಗರದ ರಾಮಟೇಕಡಿ ವಿಠ್ಠಲ ಮಂದಿರನಲ್ಲಿ ನಡೆದ ಕೃಷ್ಣಜನ್ಮಾಷ್ಟಮಿ ಮೊಸರನ ಗಡಿಗಳ ಒಡೆಯುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ ಅವರು ಹೀಗೆ ಜೀವನದ ಕಲುಷಿತ ಕಾಲರಾತ್ರಿಯಲ್ಲಿ ಎಲ್ಲರನ್ನು ಪವಿತ್ರಾತ್ಮರನ್ನಾಗಿ ಮಾಡುವ ಶ್ರೀ ಕೃಷ್ಣ ಜನ್ಮಾಷ್ಟಮಿ ಭಾರತ ಎಲ್ಲ ಭಾಗಗಳಲ್ಲು ಆಚರಿಸಲ್ಪಡವು ಜನಪ್ರಿಯವಾಗಿದೆ ಎಂದರು.

ನಗರದ ಪ್ರಮುಖ ಬೀದಿಗಳಲ್ಲಿ ಮೊಸರು ಗಡಿಗೆಗಳ ಮೆರವಣಿಗೆ ನಡೆಸಿದರು ಈ ಸಂದರ್ಭದಲ್ಲಿ ರಾಧೆಯರ ವೇಷ ತೊಟ್ಟ ಹೆಚ್ಚು ಮಕ್ಕಳು ಭಾಗವಹಿಸಿ ಜನರ ಗಮನ ಸಳೆದರು.

ರಾಜು ಪಾಟೀಲ, ವಿಶ್ವನಾಥ ಹರಿಜನ, ವಿನಾಯಕ ಕುದಳೆ, ಅಮರ ಬೋತಾಟೆ, ವಿನಾಯಕ ಪವಾರ, ರಾಹುಲ ನವಣಿ, ಅರುಣ ಬೋಳೆ ಸಾಗರ ಜಾಧವ,ಸ್ವರೂಪ ಜಾಧವ,ಸೋಹೆಲ ಮುಧೋಳೆ, ಆಕಾಶ ಶಿವಗಣ,ಅಕ್ಷಯ ಜಾಧವ, ರೋಹಿತ ಪವಾರ, ಮುಂತಾದವರು ಇದ್ದರು.

# ಸಚಿವ ಡಾ. ಎಚ್ ಕೆ ಪಾಟೀಲರಿಂದ ಇಂದಿರಾ ಕ್ಯಾಂಟಿನ ಲೋಕಾರ್ಪಣೆ



ಗದಗ : ನಗರದ ಗಾನಯೋಗಿ ಪಂಡಿತ್ ಪುಟ್ಟರಾಜ ಗವಾಯಿ ಬಸ್ ನಿಲ್ದಾಣದಲ್ಲಿ ಆಗಸ್ಟ್ 15 ಶುಕ್ರವಾರದಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ.ಪಾಟೀಲ ಅವರು ನೂತನವಾಗಿ ನಿರ್ಮಿಸಲಾದ ಇಂದಿರಾ ಕ್ಯಾಂಟೀನ್ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಅಕ್ಬರ್‌ಸಾಬ್ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಡಾ. ದುರುಗೇಶ್ ಕೆ.ಆರ್ ಸೇರಿದಂತೆ ಗದಗ ಬೆಟಗೇರಿ ನಗರ ಸಭೆ ಸದಸ್ಯರು ಉಪಸ್ಥಿತರಿದ್ದರು.

***

# ತಾಲೂಕಾಡಳಿತದಿಂದ ಧ್ವಜಾರೋಹಣ : ಎಲ್ಲಡೆ ಸಂಭ್ರಮದ ಹೊನಲು ಪ್ರತಿಯೊಬ್ಬರೂ ದೇಶಾಭಿಮಾನ ಹೆಚ್ಚಿಸಿಕೊಳ್ಳಬೇಕಿದೆ-ಶ್ರೀಮತಿ ಹೂಗಾರ

ತಾಳಿಕೋಟೆ, ನಮ್ಮ ಭಾರತ ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನಿಯರು ತ್ಯಾಗ ಬಲಿದಾನವಾಗಿದ್ದಾರೆ ಅವರು ತಂದುಕೊಟ್ಟಿರುವ ಸ್ವಾತಂತ್ರ್ಯವನ್ನು ಗಟ್ಟಿಯಾಗಿ ಉಳಿಸಿಕೊಳ್ಳುವದರೊಂದಿಗೆ ನಾವೆಲ್ಲರೂ ಮುಂದೆ ಸಾಗಬೇಕಾಗಿದೆ ಎಂದು ತಾಲೂಕಾ ತಹಶಿಲ್ದಾರ ಶ್ರೀಮತಿ ಡಾ.ವಿನಯಾ ಹೂಗಾರ ಅವರು ಹೇಳಿದರು.



ಶುಕ್ರವಾರರಂದು ತಾಳಿಕೋಟೆಯ ತಾಲೂಕಾ ಆಡಳಿತದ ವತಿಯಿಂದ ಸರ್ಕಾರಿ ಕನ್ನಡ ಶಾಲಾ ಮೈಧಾನದಲ್ಲಿ ಏರ್ಪಡಿಸಲಾದ 79ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ನೆರವೇರಿಸಿ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡತ್ತಿದ್ದ ಅವರು ಅನೇಕ ಮಹನಿಯರು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ್ದಾರೆ ಬಲಿದಾನವಾಗಿದ್ದಾರೆ ಈ ದೇಶವನ್ನು ಮುನ್ನಡೆಸುವಂತಹ ಜವಾಬ್ದಾರಿ ಇಂದಿನ ಯುವಕರ ಮೇಲಿದೆ ಎಲ್ಲ ಯುವಕರು ಸಿಸ್ತು ಬದ್ದವಾದಂತಹ ಜೀವನ ಪದ್ದತಿ ಅಳವಡಿಸಿಕೊಂಡು ಸಾಗಬೇಕಿದೆ ಎಂದ ಅವರು ವಿಶ್ವದಲ್ಲಿಯೇ ಭಾರತ ದೇಶ ಆರ್ಥಿಕವಾಗಿ 4ನೇ ಸ್ಥಾನದಲ್ಲಿ ಕಂಗೊಳಿಸುತ್ತಿದೆ ಚಂದ್ರನ ಮೇಲೆ ಸಂಶೋದನೆ ನಡೆಸಿದ ಮೊದಲನೇಯ ದೇಶ ನಮ್ಮದಾಗಿದೆ ಡಿಜಿಟಲ್ ಇಂಡಿಯಾ ಕನಸ್ಸಿನೊಂದಿಗೆ ಯುಪಿಐ ಮುಖಾಂತರ ಹಣ ವರ್ಗಾವಣೆಯಲ್ಲಿ ಮೊದಲನೇಯ ಸ್ಥಾನದಲ್ಲಿ ನಾವೆಲ್ಲರೂ ಸಾಗುತ್ತಿದ್ದೇವೆ ಆದರೂ ಕೂಡಾ ಇನ್ನೂ ಕೆಲವಡೆ ಶಿಕ್ಷಣ, ಮೂಲಬೂತ ಸೌಕರ್ಯಗಳಿಂದ ಜನರು ವಂಚನೆಗೊಳಗಾಗಿದ್ದಾರೆ ನಾವೆಲ್ಲರೂ ಕೈಜೋಡಿಸುವದರೊಂದಿಗೆ ದೇಶದ ಜನರ ಬಗ್ಗೆ ಕಳಕಳಿಯನ್ನು ಹೊಂದಬೇಕಾಗಿದೆ ಕೇವಲ ಶಿಕ್ಷಣದಿಂದ ಮಾತ್ರ ಪ್ರಗತಿ ಅಸಾದ್ಯವಾಗಿದೆ ಸಾಮಾಜಿಕ ಕಳಕಳಿ ಎಂಬುದು ಹೊಂದಬೇಕಾಗಿದೆ ಸಂವಿದಾನದ ಮೌಲ್ಯಗಳನ್ನು ಅಳವಡಿಸಿಕೊಂಡು ನಮ್ಮ ಜೊತೆಗೆ ದುರ್ಬಲರನ್ನು ಮೇಲೇತ್ತುವ ಕೆಲಸ ಮಾಡಬೇಕಾಗಿದೆ ಎಂದರು.

ಕಾರ್ಯಕ್ರಮದ ಮೊದಲಿಗೆ ಮಹಾತ್ಮಾಗಾಂಧಿಜಿ, ಹಾಗೂ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಹಾಪೂಜೆ ಸಲ್ಲಿಸಲಾಯಿತು.

ಪೊಲೀಸ್ ಇಲಾಖೆಯ ಅಪರಾಧ ವಿಭಾಗದ ಪಿಎಸ್‌ಆಯ್ ಆರ್.ಎಸ್.ಭಂಗಿ ಅವರ ನೇತೃತ್ವದಲ್ಲಿ ಸಿಬ್ಬಂದಿಗಳು, ಎನ್.ಸಿ.ಸಿ., ಹೋಮಗಾರ್ಡ, ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿಗಳು ತಾಲೂಕಾಡಳಿತದ ಅಧಿಕಾರಿಗಳು ಗೌರವ ವಂದನೆ ಸ್ವಿಕರಿಸಿದರು. ಈ ಧ್ವಜಾರೋಹಣ ಸಮಯದಲ್ಲಿ ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ, ಪುರಸಭಾ ಅಧ್ಯಕ್ಷೆ ಶ್ರೀಮತಿ ಜುಬೇದಾ ಜಮಾದಾರ, ಪಿಎಸ್‌ಐ ಶ್ರೀಮತಿ ಜ್ಯೋತಿ ಖೋತ್, ಒಳಗೊಂಡಂತೆ ವಿವಿಧ ಸಂಘ ಸಂಸ್ಥೆ ಮುಖಂಡರು, ರಾಜಕೀಯ ಮುಖಂಡರು, ವಿವಿಧ ಶಾಲಾ ಕಾಲೇಜುಗಳ ಮುಖ್ಯಸ್ಥರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡು ಧ್ವಜವಂದನೆ ಸಲ್ಲಿಸಿದರು. ನಂತರ ಮಕ್ಕಳಿಂದ ಮನರಂಜನೆ ಕಾರ್ಯಕ್ರಮಗಳು ಜರುಗಿದವು.

# ಸರ್ವಜ್ಞ ವಿದ್ಯಾಪೀಠದಲ್ಲಿ ಧ್ವಜಾರೋಹಣ ಕಾರ್ಯಕ್ರಮ

ತಾಳಿಕೋಟೆ, ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥ- 'ಮಿಕ ಹಾಗೂ ಪ್ರೌಢಶಾಲೆ ತಾಳಿಕೋಟೆಯಲ್ಲಿ ಇಂದು 79ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ ರವರು ಧ್ವಜಾರೋಹಣ ನೆರವೇ- ರಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳಿಂದ ಭಾಷಣ ಸಾಂಸ್ಕೃತಿಕ ಕಾರ್ಯಕ್ರಮಗಳು ಮತ್ತು ಸ್ವತಂತ್ರೋತ್ಸವ ದಿನದ ಅಂಗವಾಗಿ ಹಲವಾರು ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿತ್ತು ಕಾರ್ಯಕ್ರಮದಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನವನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮುಖ್ಯ ಗುರುಗಳಾದ ಸಂತೋಷ ಪವಾರ, ದೈಹಿಕ ಶಿಕ್ಷಕರಾದ ಬಸವರಾಜ ಚಳಗಿ, ಶಾಂತಗೌಡ ಬಿರಾದಾರ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ, ಸಿದ್ದನಗೌಡ ಮೂದನೂರು, ಸಂಗಮೇಶ ಬಿರಾದಾರ, ಶರಣಗೌಡ ಕಾಚಾಪುರ, ಸಂಜೀವಕುಮಾರ ರಾಠೋಡ. ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ದೇವಿಂದ್ರ ಗುಳೆದ, ಅನಿತಾ ಚೌದ್ರಿ, ಸಂಗೀತ ಬಿರಾದಾರ, ಶಿವಕುಮಾರ ಕುಂಬಾರ, ಮೇಘಾ ಪಾಟೀಲ, ರಾಜಬಿ ಬಿದರಿ, ಶೃತಿ ಚೌದ್ರಿ,ತನುಶ್ರೀ ಮಹೇಂದ್ರಕರ್, ಮಾರುತಿ ಕಾರ್ಬಾರಿ, ದೇವರಾಜ್ ದೇಸಾಯಿ, ನಾಗರತ್ನ ಮೈಲೇಶ್ವರ, ಬೋರಮ್ಮ ಜ್ಯೋತಿ ಪೊಲೀಸ ಪಾಟೀಲ, ಶೃತಿ ಚೌದ್ರಿ, ರವಿಕುಮಾರ ಅನದಿನ್ನಿ, ಹೀನಾಕೌಸರ ಸನದಿ, ಹಾಗೂ ಸರ್ವ ಗುರು ಬಳಗದವರು ಮತ್ತು ಮುದ್ದು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




ಕಾರ್ಯಕ್ರಮವನ್ನು ರಾಜು ಜವಳಗೇರಿ ನಿರೂಪಿಸಿದರು. ರವಿಕುಮಾರ ಮಲ್ಲಾಬಾದಿ ಸ್ವಾಗತಿಸಿದರು. ಸಿದ್ದನಗೌಡ ಮುದ್ನೂರ ವಂದಿಸಿದರು.

# ಬೆಳಗಾವಿಯಲ್ಲಿ ಯಶಸ್ವಿಯಾಗಿ ಆರಂಭವಾದ ಶ್ರಾವಣ ಸಂಭ್ರಮ ವಸ್ತು ಪ್ರದರ್ಶನ- ಮಾರಾಟ ಮೇಳ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಬ್ರಾಹ್ಮಣ ಸಮಾಜ ಟ್ರಸ್ಟ್ (ರಿ) ವತಿಯಿಂದ ಆಯೋಜಿಸಲಾಗಿರುವ 2 ದಿನಗಳ "ಶ್ರಾವಣ ಸಂಭ್ರಮ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳ" ಶನಿವಾರ ಯಶಸ್ವಿಯಾಗಿ ಆರಂಭವಾಯಿತು.

ಬೆಳಗಾವಿಯ ಭಾಗ್ಯನಗರದ ರಾಮನಾಥ ಮಂಗಲ ಕಾರ್ಯಾಲಯದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಪ್ರತಿಭೆ, ಪರಂಪರೆ ಮತ್ತು ಉದ್ಯಮಶೀಲತೆಗೆ ಚೈತನ್ಯ ನೀಡುವ ನಿಟ್ಟಿನಲ್ಲಿ ಇದೊಂದು ವೇದಿಕೆಯಾಗಿದೆ.

ಪಂಕ್ ಇಂಡಿಯಾ ಫೌಂಡೇಶನ್ ಸಂಸ್ಥಾಪಕಿ ಹಾಗೂ ಪಂಕ್ ಹ್ಯಾಂಡಿಕ್ರಾಫ್ಟ್ಸ್ ಚಿಕ್ಕೋಡಿ ಸಹ ಸಂಸ್ಥಾಪಕಿ ಗೌರಿ ಮಂಜ್ರೇಕರ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಬ್ರಾಹ್ಮಣ ಸಮಾಜ ಟ್ರಸ್ಟ್ ಅಧ್ಯಕ್ಷ ರಾಮ ಭಂಡಾರೆ, ಬ್ರಾಹ್ಮಣ ಸಮಾಜ ಟ್ರಸ್ಟ್ ಉಪಾಧ್ಯಕ್ಷ ಭರತ್ ದೇಶಪಾಂಡೆ, ಬ್ರಾಹ್ಮಣ ಸಮಾಜ ಟ್ರಸ್ಟ್ ಕಾರ್ಯದರ್ಶಿ ವಿಲಾಸ್ ಬದಾಮಿ, ಟ್ರಸ್ಟಿ ಅನುಶ್ರೀ ದೇಶಪಾಂಡೆ ಹಾಗೂ ಇತರ ಟ್ರಸ್ಟಿಗಳು ಉಪಸ್ಥಿತರಿದ್ದರು. ಗಿಡಕ್ಕೆ ನೀರೆರೆಯುವ ಮೂಲಕ ಕಾರ್ಯಕ್ರಮ ಆರಂಭವಾಯಿತು.



ಗೌರಿ ಮಂಜ್ರೇಕರ ಅವರು ಮಹಿಳಾ ಸಬಲೀಕರಣ ಕುರಿತು ಮಾತನಾಡಿ, ಮಹಿಳೆಯರು ಧೈರ್ಯದಿಂದ ಉದ್ಯಮಶೀಲತೆಯತ್ತ ಹೆಜ್ಜೆ ಇಡಬೇಕು ಎಂದು ಕರೆ ನೀಡಿದರು. ಟ್ರಸ್ಟ್ ಕಾರ್ಯದರ್ಶಿ ವಿಲಾಸ್ ಬದಾಮಿ ಅವರು ಧನ್ಯವಾದ ಅರ್ಪಿಸಿದರು.

ಪ್ರದರ್ಶನದಲ್ಲಿ 50ಕ್ಕೂ ಹೆಚ್ಚು ಉದ್ಯಮಿಗಳು ಭಾಗವಹಿಸಿದ್ದಾರೆ. ವೈವಿಧ್ಯಮಯ ಉತ್ಪನ್ನಗಳನ್ನು ? ಉಡುಪುಗಳು, ಆಭರಣಗಳು, ಆಹಾರ ಪದಾರ್ಥಗಳು, ಹಸ್ತಕಲಾ ವಸ್ತುಗಳು ಇತ್ಯಾದಿಗಳನ್ನು ಪ್ರದರ್ಶಿನಕ್ಕಿಟ್ಟಿದ್ದಾರೆ. ಇದು ಸಾಂಪ್ರದಾಯಿಕ ಹಬ್ಬದ ಛಾಯೆಯೊಂದಿಗೆ ವಿಶಿಷ್ಟ ಖರೀದಿ ಅನುಭವವನ್ನು ನೀಡುತ್ತಿದ್ದು, ಭಾನುವಾರವೂ ಮುಂದುವರಿಯಲಿದೆ.

ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ತಿಲಕವಾಡಿ ಬೆಳಗಾವಿಯ ಫ್ರೆಂಡ್ಸ್ ಸರ್ಕಲ್ ಗ್ರೂಪ್ ವತಿಯಿಂದ ಮಂಗಳಗೌರಿ ನೃತ್ಯ ಕಾರ್ಯಕ್ರಮ ಹಾಗೂ ನಿವೇದಾರ್ಪಣ ಮ್ಯೂಸಿಕ್ ಅಕಾಡೆಮಿ ವಿದ್ಯಾರ್ಥಿಗಳಿಂದ ಮನಮೋಹಕ ಕರೋಕೆ ಸಂಗೀತ ಕಾರ್ಯಕ್ರಮ ನಡೆಯಿತು.

# ಮುಚಖಂಡಿ ಉದ್ಯಾನವನ ಲೋಕಾರ್ಪಣೆಗೊಳಿಸಿದ ಸಚಿವ ತಿಮ್ಮಾಪೂರ

ಬಾಗಲಕೋಟೆ: : ಐತಿಹಾಸಿಕ ಮುಚಖಂಡಿ ಕೆರೆಯ ಮುಂಬಾಗದಲ್ಲಿ ಅಂದಾಜು 5.80 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾದ ಉದ್ಯಾನವನವನ್ನು ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಶುಕ್ರವಾರ ಉದ್ಘಾಟಿಸಿದರು.

ನಗರಾಭಿವೃದ್ದಿ ಪ್ರಾಧಿಕಾರದ ಕೆರೆ ಅಭಿವೃದ್ದಿ ಶುಲ್ಕದಲ್ಲಿ ನಿರ್ಮಿಸಲಾದ ಮುಚಖಂಡಿ ಉದ್ಯಾನವನವನ್ನು ಉದ್ಘಾಟಿಸಿ ಮಾತನಾಡಿದ ಅವರು ಅಭಿವೃದ್ದಿ ಕೆಲಸ ಬಂದಾಗ ಪಕ್ಷಬೇದ ಮಾಡದೇ ಜನರ ಪರವಾಗಿ ಕೆಲಸ ಮಾಡಲಾಗುತ್ತದೆ. ಈ ಉದ್ಯಾನವನವನ್ನು ಇನ್ನಷ್ಟು ಅಭಿವೃದ್ದಿ ಪಡಿಸಲು ಅನುದಾನ ಬಿಡುಗಡೆಗೆ ಕ್ರಮವಹಿಸಲಾಗುವುದು. ಈ ಭಾಗಕ್ಕೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಬರುವಂತಾಗಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಬಾಗಲಕೋಟೆ ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಎಚ್.ವಾಯ್.ಮೇಟಿ



ಮಾತನಾಡಿ ಆಲಮಟ್ಟಿಯಲ್ಲಿ ನಿರ್ಮಿಸಲಾದ ಸಂಗೀತ ಕಾರಂಜಿ ಮಾದರಿಯಲ್ಲಿ ಮುಖಚಂಡಿ ಉದ್ಯಾನವನದಲ್ಲಿ ವ್ಯವಸ್ಥೆ ಮಾಡಬೇಕು. ಈ ಕ್ಷೇತ್ರ ಪ್ರವಾಸಿ ತಾಣವಾಗಿ ಬೆಳೆಯಲು ಎಲ್ಲ ರೀತಿಯ ಕ್ರಮಕೈಗೊಳ್ಳಲು ತಿಳಿಸಿದರು. ವಾರದಲ್ಲಿ ಉಳಿದ ಕೆಲಸಗಳನ್ನು ಪೂರ್ಣಗೊಳಿಸಿ ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸುವ ಕೆಲಸವಾಗಬೇಕು ಎಂದರು.

ನಗರಸಭೆ ಪೌರಾಯುಕ್ತರು ಹಾಗೂ ಬುಡಾದ ಆಯುಕ್ತರಾದ ವಾಸಣ್ಣ ಆರ್. ಮಾತನಾಡಿ ಉದ್ಯಾನವನದಲ್ಲಿ ಕುಡಿಯುವ ನೀರು, ಶೌಚಾಲಯ ಸೇರಿದಂತೆ ಇತರೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ. ನೀರಿನ ಕಾರಂಜಿ, ವಿಶ್ರಾಂತಿ ತಂಗುದಾಣ, ಬಯಲು ರಂಗ ಮಂದಿರ, ಮಕ್ಕಳ ಆಟಿಕೆಗಳು ಹಾಗೂ ಪ್ರೇಕ್ಷಕರ ಗ್ಯಾಲರಿಗಳನ್ನು ಮಾಡಲಾಗಿದೆ. ಮುಂದಿನ ವಾರದಿಂದ ಸಾರ್ವಜನಿಕರಿಗೆ ಪ್ರವೇಶ ಕಲ್ಪಿಸಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಶಾಸಕ ಪಿ.ಎಚ್.ಪೂಜಾರ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕನ್ನವರ, ಮುಚಖಂಡಿ ಗ್ರಾಮ ಪಂಚಾಯತ ಅಧ್ಯಕ್ಷ ರಂಗಪ್ಪ ಪೂಜಾರಿ, ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್, ಜಿ.ಪಂ ಸಿಇಓ ಶಶಿಧರ ಕುರೇರ, ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಮೃತ ಸರೋವರ ದಂಡೆಯ ಮೇಲೆ ಸ್ವಾತಂತ್ರ್ಯ ದಿನಾಚರಣೆ ಸಂಭ್ರಮ



ಗಜೇಂದ್ರಗಡ: ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿ ತಾಲೂಕಿನಲ್ಲಿ ನಿರ್ಮಿಸಿರುವ ಅಮೃತ ಸರೋವರ ಕಾಮಗಾರಿಯ ದಂಡೆಯ ಮೇಲೆ 79 ನೇ ಸ್ವಾತಂತ್ರ್ಯ ದಿನಾಚರಣೆ ಆಚ-ರಿಸಲಾಯಿತು. ತಾಲೂಕಿನ ಮಾರನಬಸರಿ, ಗೋಗೇರಿ ಮತ್ತು ಮುಶಿಗೇರಿ ಗ್ರಾಪಂ ವ್ಯಾಪ್ತಿಯ ಅಮೃತ ಸರೋವರದ ದಂಡೆಯ ಮೇಲೆ ಸಂಭ್ರಮದಿಂದ ಸ್ವಾತಂತ್ರ್ಯ ದಿನಾಚರಣೆ ನೆರವೇರಿಸಲಾಯಿತು.

ಮಾರನಬಸರಿ ಅಮೃತ ಸರೋವರದ ದಂಡೆಯ ಮೇಲಿನ ಧ್ವಜಾರೋಹಣ ಕಾರ್ಯಕ್ರಮ ಗಮನಸೆಳೆಯಿತು. ದೂರದ ಪಶ್ಚಿಮ ಬಂಗಾಳದಲ್ಲಿ ಭಾರತ-ಬಾಂಗ್ಲಾ ಗಡಿಯಲ್ಲಿ ಬಿಎಸ್ ಎಫ್ ಯೋಧರಾಗಿ ಕರ್ತವ್ಯ ನಿರ್ವಹಿಸುತ್ತಿರುವ ತಾಲೂಕಿನ ಬೂದಿಹಾಳ ಗ್ರಾಮದ ಯೋಧೆ ಶ್ರೀಮತಿ ಸಾವಿತ್ರಿ ಮುತ್ತಪ್ಪ ಚಿಗರಿ ಅವರು ಅಮೃತ ಸರೋವರ ದಂಡೆಯ ಮೇಲಿನ 79 ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿದ್ದು ವಿಶೇಷವಾಗಿತ್ತು. ಬಿ.ಎ ಪದವಿ ಪಡೆದಿರುವ ಯೋಧೆ ಸಾವಿತ್ರಿ ಅವರು ಕಳೆದ 12 ವರ್ಷಗಳಿಂದ ಬಾಂಗ್ಲಾ ಗಡಿಯಲ್ಲಿ ಕೆಲಸ ಮಾಡುತ್ತಿದ್ದು, ಧ್ವಜಾರೋಹಣ-ಕ್ಕಾಗಿ ಸ್ವಗ್ರಾಮ ಬೂದಿಹಾಳಕ್ಕೆ ಬಂದು ಮಾರನಬಸರಿ ಗ್ರಾಪಂ ಆಯೋಜಿಸುವ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಕಳೆದ ಎರಡು ವರ್ಷಗಳಿಂದ ನಿರಂತರವಾಗಿ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಧ್ವಜಾರೋಹಣ ನೆರವೇರಿಸುತ್ತಿರುವುದು **ವಿಶೇಷ.** ಧ್ವಜಾರೋಹಣ ಬಳಿಕ ನೆರದವರ ಉದ್ದೇಶಿಸಿ ಮಾತನಾಡಿದ ಯೋಧೆ ಸಾವಿತ್ರಿ ಅವರು, ದೇಶದ ಭದ್ರತೆಗಾಗಿ ನಾವೆಲ್ಲ ಶ್ರಮಿಸಬೇಕು. ದೇಶ ಸುಭದ್ರವಾಗಿದ್ದರೆ ನಾವೆಲ್ಲ ನಮ್ಮ ಮನೆಗಳಲ್ಲಿ ಸ್ವಚ್ಛಂದವಾಗಿರಲು ಸಾಧ್ಯ. ಮಾರನಬಸರಿ ಗ್ರಾಪಂ ಸಿಬ್ಬಂದಿ ನನ್ನನ್ನು ಗುರ್ತಿಸಿ ಧ್ವಜಾರೋಹಣಕ್ಕೆ ಪ್ರತಿ ವರ್ಷ ಆಹ್ವಾನಿಸುತ್ತಿರೋದು ಸಂತಸ ತರಿಸಿದೆ ಎಂದರು. ಆಪರೇಷನ್ ಸಿಂಧೂರು ಕಾರ್ಯಾಚರಣೆಯಲ್ಲಿ ಮಹಿಳಾ ಸೈನಿಕರ ಪರಾಕ್ರಮ ನೆನಪು ಮಾಡಿಕೊಂಡ ಯೋಧೆ ಸಾವಿತ್ರಿ ಅವರು ಇನ್ನೂ ದೇಶಕ್ಕಾಗಿ 08 ವರ್ಷ ಸೈನಿಕರಾಗಿ ಸೇವೆ ಸಲ್ಲಿಸುವ ಅಭಿಲಾಷೆ ಹೊಂದಿದ್ದಾರೆ.

ಯೋಧೆ ಸಾವಿತ್ರಿ ಮುತ್ತಪ್ಪ ಚಿಗರಿ ಅವರಿಗೆ ಅಮೃತ ಸರೋವರದ ದಂಡೆಯ ಮೇಲಿನ ಧ್ವಜಾರೋಹಣಕ್ಕೆ ಗ್ರಾಪಂ ವ್ಯಾಪ್ತಿಯ ಮಾಜಿ ಸೈನಿಕರಾದ ವಿರುಪಾಕ್ಷಪ್ಪ ಭಜಂತ್ರಿ, ರುದ್ರಪ್ಪ ಹಲಗೇರಿ, ಕಳಕವ್ವ ಹೊಸಮನಿ, ಶಿವಶರಣಪ್ಪ ಅಬ್ಬಿಗೇರಿ ದಿವಂಗತ ಆನಂದ ಗುತ್ಯಪ್ಪನವರ ಪತ್ನಿ ಶೋಭಾ ಗುತ್ಯಪ್ಪನವರ ಅವರು ಸಾಥ್ ನೀಡಿದರು.

ಮಾರನಬಸರಿ, ಮುಶಿಗೇರಿ ಮತ್ತು ಗೋಗೇರಿ ಗ್ರಾಪಂ ವ್ಯಾಪ್ತಿಯ ಅಮೃತ ಸರೋವರದ ದಂಡೆಯ ಮೇಲಿನ ಧ್ವಜಾರೋಹಣ ಕಾರ್ಯಕ್ರಮದಲ್ಲಿ ಮೂರು ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳಾದ ಮಂಜುನಾಥ ಮೇಟಿ, ಶರಣಪ್ಪ ನರೇಗಲ್, ಎಸ್.ಆರ್.ಸಂಕನೂರ. ಗ್ರಾಮದ ಹಿರಿಯರು, ಶಾಲಾ ಮಕ್ಕಳು ಮತ್ತು ಮುಖ್ಯೋಪಾಧ್ಯಾಯರು, ಗ್ರಾಮದ ಯುವಕರು, ಗ್ರಾಪಂ ಮತ್ತು ನರೇಗಾ ಸಿಬ್ಬಂದಿ ವರ್ಗದವರೆಲ್ಲ ಜೊತೆಗೂಡಿ ಸಂಭ್ರಮದಿಂದ ಸ್ವಾತಂತ್ರ್ಯ ದಿನಾಚರಣೆ ಆಚರಿಸಿದರು.

# ಮಹಾನಗರ ಪಾಲಿಕೆಯ ಸಾಧನೆಯಲ್ಲಿ ಎಲ್ಲರಿಗೂ ಸಮಪಾಲಿದೆ; ನಗರದ ಸ್ವಚ್ಚತೆ ಮೂಲಭೂತ ಸೌಕರ್ಯಗಳನ್ನು ಕಾಪಾಡುವಲ್ಲಿ ಪ್ರತಿಯೊಬ್ಬರ ಜವಾಬ್ದಾರಿ ಇದೆ: ಉಪ ಮಹಾಪೌರಾದ ಸಂತೋಷ ಚವ್ಹಾಣ



ಧಾರವಾಡ : ಅಗಷ್ಟ 15, ಸಮಸ್ತ ಭಾರತೀಯರಿಗೆ ಪರಮ ಪವಿತ್ರವಾದ ದಿನವಾಗಿದೆ. 1947 ರಲ್ಲಿ ಭಾರತದಲ್ಲಿ ಬ್ರಿಟಿಷರ ಆಳ್ವಿಕೆ ಅಂತ್ಯವಾಗಿ, ಭಾರತ ಸ್ವತಂತ್ರ್ಯ ರಾಷ್ಟ್ರವಾಗಿ ಜನ್ಮ ತಾಳಿತು. ನಮ್ಮ ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಲಕ್ಷಾಂತರ ದೇಶಭಕ್ತರು ತಮ್ಮ ಜೀವನವನ್ನೆ ಮುಡಿಪಾಗಿಟ್ಟರು. ಅನೇಕ ದೇಶಭಕ್ತರ ಹೋರಾಟ, ತ್ಯಾಗದ ಫಲವಾಗಿ ಇಂದು ನಾವು ಸ್ವಾತಂತ್ರ್ಯವನ್ನು ಅನುಭವಿಸುತ್ತಿದ್ದೇವೆ ಎಂದು ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಉಪಮಹಾಪೌರಾದ ಸಂತೋಷ ಚವ್ಹಾಣ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಧಾರವಾಡ ಕಚೇ-ರಿಲ್ಲಿ 79ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೇರವೆರಿಸಿ, ಸಭಿಕರನ್ನು ಉದ್ದೇಶಿಸಿ ಮಾತನಾಡಿದರು.

ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರ ತ್ಯಾಗ ಬಲಿದಾನ ಇಂದಿನ ಯುವ ಪೀಳಿಗೆಗೆ ಆದರ್ಶಪ್ರಾಯವಾಗಿದೆ. ಅದೇ ರೀತಿ ಇಂದು "ವೀರ ಸಂಗೋಳ್ಳಿ ರಾಯಣ್ಣನ" ಹುಟ್ಟಹಬ್ಬವಾಗಿದೆ. ಅವರ ಪರಾಕ್ರಮ ಮತ್ತು ದೇಶಭಕ್ತಿ ಅನನ್ಯವಾಗಿತ್ತು. ಅದೇ ರೀತಿ ಇಂದು ಬಂಗಾಳದ ಶ್ರೇಷ್ಠ ಕ್ರಾಂತಿಕಾರಿ ಮತ್ತು ದಾರ್ಶನಿಕರಾದ ಶ್ರೀ ಅರಬಿಂದೋ ಘೋಷ್ ಅವರ ಹುಟ್ಟುಹಬ್ಬವಾಗಿದೆ ಎಂದು ಹೇಳಿದರು. ನಮ್ಮ ಹುಬ್ಬಳ್ಳಿ-ಧಾರವಾಡವು ಸ್ವಾತಂತ್ರ್ಯ ಹೋರಾಟದಲ್ಲಿ ವಿಶಿಷ್ಠ ಸ್ಥಾನವನ್ನು ಪಡೆದಿದೆ. ಇಲ್ಲಿನ ರೈತರು, ವಿದ್ಯಾರ್ಥಿಗಳು, ಕಾರ್ಮಿಕರು ಬ್ರಿಟಿಷರ ವಿರುದ್ಧ ಧ್ವನಿ ಎತ್ತಿದ್ದರು, ವಿಶೇಷವಾಗಿ ಧಾರವಾಡ ನಗರದ ಸಾಹಿತಿಗಳು ಸ್ವಾತಂತ್ರ್ಯದ ಸಂದೇಶವನ್ನು ಕಾವ್ಯ ಗೀತೆಗಳಲ್ಲಿ ಹರಿಸಿದರು. 1942 ರ ಅಗಸ್ಟನಲ್ಲಿ ದೇಶಾದ್ಯಾಂತ ಪ್ರಾರಂಭಗೊಂಡ ಕ್ವಿಟ್ ಇಂಡಿಯಾ ಚಳವಳಿಯಲ್ಲಿ ಬ್ರಿಟಿಷರ ಗುಂಡಿಗೆ ಎದೆಯೊಡ್ಡಿ ಹುತ್ಮಾತರಾದವರಲ್ಲಿ ನಮ್ಮ ಹುಬ್ಬಳ್ಳಿಯ ನಾರಾಯಣ ಗೋವಿಂದಪ್ಪ ಡೋಣಿರವರನ್ನು ಸ್ಮರಿಸಲು ಹೆಮ್ಮೆಯಾಗುತ್ತದೆ. ಮಹಾತ್ಮಗಾಂಧಿಜೀ, ಸುಭಾಸಚಂದ್ರ ಬೋಸ್, ಭಗತ್ ಸಿಂಗ್, ಚಂದ್ರಶೇಖರ ಆಜಾದ್ ಮುಂತಾದ ಅಪ್ರತಿಮ ಹೋರಾಟಗಾರರ ಧೈರ್ಯ ಹಾಗೂ ಬಲಿದಾನಗಳೇ ನಮ್ಮ ಸ್ವಾತಂತ್ರ್ಯದ ಆದ-ಾರವಾಗಿದೆ ಎಂದರು.

ಸ್ವಾತಂತ್ರ್ಯ ಎಂದರೆ ಕೇವಲ ರಾಜ-ಕೀಯ ಮುಕ್ತಿಯಲ್ಲ. ಇದು ಭಾವನೆಯ ಮುಕ್ತಿ, ಸಮಾನತೆ, ನ್ಯಾಯ, ಬಾಂಧವ್ಯ-ಎಲ್ಲರಿಗೂ ಸಮಾನ ಅವಕಾಶ ಎಂಬ ಅರ್ಥಹೊಂದಿದೆ. ನಮ್ಮ ಸಂವಿಧಾನವು ನಮಗೆ ಮಾತಿನ ಸ್ವಾತಂತ್ರ್ಯ, ಧರ್ಮ ನಿರಪೇಕ್ಷತೆ, ಹಕ್ಕುಗಳು ಮತ್ತು ಕರ್ತವ್ಯಗಳನ್ನು ನೀಡಿದೆ ಆದರೆ ಸ್ವಾತಂತ್ರ್ಯದ ನಿಜವಾದ ಅರ್ಥವನ್ನು ಅರಿತು ಪ್ರತಿದಿನ ಅದರ ಮೌಲ್ಯವನ್ನು ಕಾಪಾಡುವುದು ನಮ್ಮ ಹೊಣೆಗಾ-ರಿಕೆ ಎಂದರು.

ನಮಗೆ ಭಾರತದ ಸ್ವಾತಂತ್ರ ಹೋರಾಟದಲ್ಲಿ ಭಾಗವಹಿಸಲು ಅವಕಾಶ ಸಿಗಲಿಲ್ಲ. ಆದ-ರೆ, ಸುಂದರ ಭಾರತವನ್ನು ಕಟ್ಟಲು ಅದ್ಭುತ ಅವಕಾಶ ಸಿಕ್ಕಿದೆ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ಸರ್ವ ಸದಸ್ಯರು, ಅಧಿಕಾರಿಗಳು, ಸಿಬ್ಬಂದಿಗಳು "ಮಹಾನಗರ ಪಾಲಿಕೆಯ ನನಗೇನು ಕೊಟ್ಟಿತು ಎಂಬುದನ್ನು ಯೋಚಿಸದೇ, ಮಹಾನಗರ ಪಾಲಿಕೆಗೆ ನಾನೇನು ಕೊಟ್ಟೆ ಎಂಬುದನ್ನು ಚಿಂತಸಬೇಕಿದೆ." ಹುಬ್ಬಳ್ಳಿ-ಧಾರವಾಡ ನಗರವನ್ನು ಸ್ವಚ್ಛ ಸುಂದರ ನಗರವಾಗಿಸಬೇಕಿದೆ. 2025 ರ ಸ್ವಚ್ಛ ಸರ್ವೇಕ್ಷಣದಲ್ಲಿ ರಾಜ್ಯಕ್ಕೆ ನಮ್ಮ ಪಾಲಿಕೆ 2ನೇ ಸ್ಥಾನ ಬಂದಿದೆ. ಹಾಗಾಗಿ ಆಯುಕ್ತರು ಆದಿಯಾಗಿ, ಪೌರಕಾರ್ಮಿಕರವರೆಗೆ ಈ ಕಾರ್ಯಕ್ಕೆ ಶ್ರಮಿಸಿದ ಪ್ರತಿಯೊಬ್ಬರನ್ನು ಅಭಿನಂದಿಸುತ್ತೇನೆ.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ 2025-26ನೇ ಸಾಲಿನಲ್ಲಿ ಮೊದಲ 50 ದಿನದಲ್ಲಿ ರೂ. 100.00 ಕೋಟಿ ಆಸ್ತಿ ತೆರಿಗೆ ಸಂಗ್ರಹಿಸಿದೆ. ಇದಕ್ಕೆ ಕಂದಾಯ ಶಾಖೆಯ ಎಲ್ಲ ಅಧಿಕಾರಿ, ಸಿಬ್ಬಂದಿಗಳನ್ನು ಅಭಿನಂದಿಸುತ್ತೇನೆ. ಇಂದು ದೇಶ ಮುನ್ನೆಡೆಯುತ್ತಿದೆ ಆದರೆ ಸವಾಲುಗಳು ಇವೆ - ಪರಿಸರ ಮಾಲಿನ್ಯ, ನಿರುದ್ಯೋಗ, ಮಹಿಳಾ ಸುರಕ್ಷತೆ, ಮೂಲಭೂತ ಸೌಕರ್ಯಗಳ ಕೊರತೆಗಳ ಸವಾಲು ಇದ್ದರೂ ಸಹ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಶುದ್ಧ ಕುಡಿಯುವ ನೀರಿನ ವಿತರಣೆಯಲ್ಲಿ ಸುಧಾರಣೆ, ಘನತ್ಯಾಜ್ಯ ನಿರ್ವಹಣಾ ವ್ಯವಸ್ಥೆ ಬಲಪಡಿಸುವ ಕಾರ್ಯ, ಲಕ್ಷ-ವೃಕ್ಷ ಯೋಜನೆ, ಉದ್ಯಾನವನಗಳ ಅಭಿವೃದ್ಧಿ, ಸಾರ್ವಜನಿಕ ಸ್ಮಾಶನಗಳ ಅಭಿವೃದ್ಧಿ, ರಸ್ತೆ, ಕಾಲುವೆ, ಒಳಚರಂಡಿ ವ್ಯವಸ್ಥೆಗಳ ಅಭಿವೃದ್ಧಿ, ಸಮಗ್ರ ನಗರದ ಅಭಿವೃದ್ಧಿಗಾಗಿ ಜಿ.ಐ.ಎಸ್ ಸಮೀಕ್ಷೆ, ಬೀದಿ ದೀಪಗಳ ಎಲ್.ಇ.ಡಿ ಯೋಜನೆ, ಜಲಮೂಲಗಳ ಪುನಶ್ಚೇತನಗಳ ಕಾಮಗಾರಿಗಳು ಹಾಗೂ ಸಾರ್ವಜನಿಕರ ಇತರೆ ದೈನಂದಿನ ಸೇವೆಗಳ ಮೂಲಕ ನಮ್ಮ ನಗರವನ್ನು ಅಭಿವೃದ್ಧಿ ಮಾಡಲು ನಾವು ಬದ್ದರಾಗಿದ್ದೇವೆ ಎಂದು ಉಪ ಮಹಾಪೌರರು ಹೇಳಿದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಆಯುಕ್ತ (ಆಡಳಿತ) ಶಂಕರಾನಂದ ಬನಶಂಕರಿ, ಪಾಲಿಕೆ ಸದಸ್ಯರು ಮತ್ತು ಎಲ್ಲ ವಲಯ ಆಯುಕ್ತರು ಮತ್ತು ಅಧಿಕಾರಿ ಸಿಬ್ಬಂದಿಗಳು ಹಾಜರಿದ್ದರು.

****

# ಬ್ರಿಟಿಷರ ದಾಸ್ಯದ ಸಂಕೋಲೆಯಿಂದ ಭಾರತ ಮುಕ್ತಗೊಳಿಸಲು ಅಸಂಖ್ಯಾತ ವೀರರು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟ ದಿನವಿದು: ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ : 79 ನೇ ಸ್ವಾತಂತ್ರ್ಯೋತ್ಸವ ಇಂದು ನಮ್ಮೆಲ್ಲರ ಪಾಲಿಗೆ ಅತ್ಯಂತ ಹೆಮ್ಮೆಯ ಹಾಗೂ ಸಂಭ್ರಮದ ದಿನ. ಬ್ರಿಟಿಷರ ದಾಸ್ಯದ ಸಂಕೋಲೆಯಿಂದ ನಮ್ಮ ಭಾರತ ಮಾತೆಯನ್ನು ಮುಕ್ತಗೊಳಿಸಲು ಅಸಂಖ್ಯಾತ ವೀರರು ತಮ್ಮ ಪ್ರಾಣವನ್ನೇ ಪಣಕ್ಕಿಟ್ಟ ದಿನವಿದು. ಭಾರತದ ಸ್ವಾತಂತ್ರ್ಯದ ಸಂಕೇತವಾದ ನಮ್ಮ ತ್ರಿವರ್ಣ ಧ್ವಜವು ಆಗಸದಲ್ಲಿ ಮುಗಿಲೆತ್ತರಕ್ಕೆ ಹಾರಾಡುತ್ತಿರುವುದನ್ನು ನೋಡುವಾಗ, ನಮ್ಮೆಲ್ಲರ ಮನಸ್ಸು ದೇಶಪ್ರೇಮದಿಂದ ಪುಳಕಿತಗೊಳ್ಳುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಇಂದು (ಆ 15) ಬೆಳಿಗ್ಗೆ ಧಾರವಾಡ ಹೊಸ ಬಸ್ ನಿಲ್ದಾಣದ ಹತ್ತಿರ ನಿರ್ಮಿಸಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಗಾಂಧಿಭವನದಲ್ಲಿ ಪ್ರಥಮ ಬಾರಿಗೆ 79ನೇ ಸ್ವಾತಂತ್ರ್ಯೋತ್ಸವದ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಮಾತನಾಡಿದರು.

ಸ್ವಾತಂತ್ರ್ಯವನ್ನು ಗಳಿಸಿದ ಮಾತ್ರಕ್ಕೆ ನಮ್ಮ ಜವಾಬ್ದಾರಿ ಇಲ್ಲಿಗೆ ಮುಗಿಯುವುದಿಲ್ಲ. ಬಡತನ, ನಿರುದ್ಯೋಗ, ಭ್ರಷ್ಟಾಚಾರ ಮತ್ತು ಸಾಮಾಜಿಕ ಅಸಮಾನತೆಯಂತಹ ಸವಾಲುಗಳು ಇನ್ನೂ ನಮ್ಮ ಮುಂದಿವೆ. ಈ ಸವಾಲುಗಳನ್ನು ಎದುರಿಸಿ, ನಮ್ಮ ದೇಶವನ್ನು ಇನ್ನಷ್ಟು ಎತ್ತರಕ್ಕೆ ಕೊಂಡೊಯ್ಯುವುದು ನಮ್ಮ ನಿಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ವಿಶೇಷವಾಗಿ, ನಮ್ಮ ಯುವಜನತೆ ಈ ದೇಶದ ಭವಿಷ್ಯ, ಜ್ಞಾನ ಮತ್ತು ಉತ್ಸಾಹವನ್ನು ದೇಶ ಕಟ್ಟುವ ಕಾಯಕದಲ್ಲಿ ಬಳಸಿಕೊಳ್ಳಬೇಕು ಹೊರತು ದೇಶಕ್ಕೆ ಹಾನಿಯಾಗುವ ಕೆಲಸವನು ಮಾಡಬಾರದು. ಸಂವಿಧಾನ ನಮಗೆ ನೀಡಿರುವ ಹಕ್ಕುಗಳನ್ನೂ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು. ನಮ್ಮ ನೈಸರ್ಗಿಕ ಸಂಪನಮೂಲಗಳನ್ನು ಉಳಿಸುವುದರಿಂದ ದೇಶವನ್ನು ಇಂದು ರಕ್ಷಿಸಿ ಬೆಳೆಸಬಹುದಾಗಿದೆ. ಅನಗತ್ಯ ವಿದ್ಯುತ್ ಬಳಕೆ, ಮಿತವಾಗಿ ನೀರನ್ನು ಬಳಸುವುದು, ಅರಣ್ಯವನ್ನು ಸಂರಕ್ಷಿಸಿ, ಇವೆಲವು ದೇಶಕೆ ಕೊಡುವ ಆದ್ಯತೆ ಮತ್ತು ಗೌರವಿಸುವುದು ಆಗಿದೆ ಎಂದು ಅವರು ತಿಳಿಸಿದರು.

ಗಾಂಧೀಜಿಯವರ ಅಹಿಂಸಾ ತತ್ವದ ಶ್ರೇಷ್ಠವಾಗಿದೆ ಇದು ಪಾಪವನ್ನು ದ್ವೇಷಿಸು, ಪಾಪಿಯನ್ನಲ್ಲ ಮತ್ತು ಶತ್ರುಗಳನ್ನು ಪ್ರೀತಿಯಿಂದ ಗೆಲ್ಲು ಎನ್ನುವ ಅವರ ಸಂದೇಶವನ್ನು ಜಗತ್ತಿಗೆ ಸಾರುತ್ತದೆ. ತಮ್ಮನ್ನು ಹಿಂಸಿಸಿದ ವ್ಯಕ್ತಿಯ ಮೇಲೂ ದ್ವೇಷ ಸಾಧಿಸದೆ, ಪ್ರೀತಿಯನ್ನು ತೋರಿದ ಅವರ ವ್ಯಕ್ತಿತ್ವಕ್ಕೆ ಇದು ಸಾಕ್ಷಿಯಾಗಿದೆ ಎಂದು ಗಾಂಧೀಜಿ ಅವರ ಬಗೆ ಒಂದು ಸನ್ನಿವೇಶ ಹೇಳುವ ಮೂಲಕ ವಿವ-ರಿಸಿದರು. ಇಂದಿನ ಮಕ್ಕಳೇ ನಾಳಿನ ಪ್ರಜೆಗಳು ಅದರಿಂದ ಛಲದಿಂದ ಬದುಕಿ, ಸಮಾಚದಲಿ ಒಳೇಯ ವ್ಯಕ್ತಿ ಆಗಿ ಜೀವಿಸಿ ಎಂದು ತಿಳಿಸಿದರು.

ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಸುರೇಶ ಹಿರೇಮಠ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಕಾರ್ಯಪಾಲಕ ಅಭಿಯಂತರೆ ಸುಜಾತಾ ಕಾಳೆ ಸ್ವಾಗತಿಸಿದರು. ಸರ್ಕಾರಿ ಪದವಿ ಮಾಹಾವಿದ್ಯಾಲಯದ ಪ್ರಾಚಾರ್ಯ ಡಾ.ಗುರುನಾಥ ಬಡಿಗೇರ ವಂದಿಸಿದರು. ಕೃಷಿ ಅಧಿಕಾರಿ ಮಹಾದೇವ ಸರಶೆಟ್ಟಿ ಅವರು ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ವಾಯುವ್ಯ ಕರ್ನಾಟಕ ಸಾರಿಗೆ ಸಂಸ್ಥೆಯ ಹೊಸ ಬಸ್ ನಿಲ್ದಾಣ ಹಾಗೂ ಬಿಆರ್‌ಟಿಎಸ್ ನಿಲ್ದಾಣದ ಸಿಬ್ಬಂದಿಗಳು, ಸರ್ಕಾರಿ ಪದವಿ ಮಹಾವಿದ್ಯಾಲಯದ ಪ್ರಾಧ್ಯಾಪಕರು, ಕ್ರೇಡಿಲ್ ಮತ್ತು ವಾರ್ತಾ ಇಲಾಖೆಯ ಸಿಬ್ಬಂದಿಗಳು ಭಾಗವಹಿಸಿದ್ದರು.

# ಅರ್ಜಿ ಆಹ್ವಾನ

ಬೆಳಗಾವಿ, : ಪಾಲಕರ ಪೋಷಣೆ ಸಂರಕ್ಷಣೆ ಹಾಗೂ ಹಿರಿಯ ನಾಗರಿಕರ ರಕ್ಷಣಾ ಕಾಯ್ದೆ-2007 ನೇದ್ದನ್ನು ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾದ ಜಿಲ್ಲಾ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನಾಮ ನಿರ್ದೇಶನ ಮಾಡಬೇಕಾಗಿರುತ್ತದೆ.
ಈ ಸಮಿತಿಗೆ ಸದಸ್ಯರನ್ನು ನೇಮಕ ಮಾಡಲು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದಂತಹ ಹಾಗೂ ಈ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ 2 ಸ್ವಯಂ ಸೇವಾ ಸಂಸ್ಥೆಗಳು ಮತ್ತು ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ 2 (ಇಬ್ಬರು ) ವ್ಯಕ್ತಿಗಳ ನಾಮನಿರ್ದೇಶನಕ್ಕಾಗಿ ಅರ್ಹ ಸಂಸ್ಥೆ ಹಾಗೂ ಹಿರಿಯ ನಾಗರಿಕರಿಂದ ಅರ್ಜಿ ಆಹ್ವಾನಿಸಲಾಗಿದೆ.
ಆಸಕ್ತಿಯುಳ್ಳ ಅರ್ಹ ಸಂಸ್ಥೆ ಹಾಗೂ ಹಿರಿಯ ನಾಗರಿಕ ವ್ಯಕ್ತಿಗಳು 15 ಸೆಪ್ಟೆಂಬರ 2025 ರ ಒಳಗಾಗಿ ನಿಗದಿತ ಅರ್ಜಿ ನಮೂನೆಯಲ್ಲಿ ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲಾತಿಗಳೊಂದಿಗೆ ಕಛೇರಿಗೆ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ಜಿಲ್ಲಾ ಕಛೇರಿ ಅಥ-ವಾ ಆಯಾ ತಾಲೂಕಿನ ಎಂ.ಆರ್.ಡಬ್ಲ್ಯೂ. ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದರು.

# ಸ್ವಾತಂತ್ರ್ಯ ಹೋರಾಟಗಾರರು ಸ್ವಾತಂತ್ರ್ಯಕ್ಕಾಗಿ ನಡೆಸಿದ ಹೋರಾಟ, ಬಲಿದಾನ ಬಗ್ಗೆ ಅರಿತುಕೊಂಡು ಮುನ್ನಡೆಯಬೇಕು

ರಾಯಬಾಗ: ಇಂದಿನ ಯುವ ಜನಾಂಗ ಸ್ವಾತಂತ್ರ್ಯ ಹೋರಾಟಗಾರರು ಸ್ವಾತಂತ್ರ್ಯಕ್ಕಾಗಿ ನಡೆಸಿದ ಹೋರಾಟ, ಬಲಿದಾನ ಬಗ್ಗೆ ಅರಿತುಕೊಂಡು ಮುನ್ನಡೆಯಬೇಕೆಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಶುಕ್ರವಾರ ಪಟ್ಟಣದ ಮಹಾವೀರ ಭವನದಲ್ಲಿ ತಾಲೂಕಾಡಳಿತದಿಂದ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ದೇಶದ ಪ್ರತಿಯೊಬ್ಬ ಭಾರತೀಯನು ದೇಶಾಭಿಮಾನ ಬೆಳೆಸಿಕೊಂಡು, ರಾಷ್ಟ್ರಸೇವೆಗೆ ಬದ್ಧರಾಗಬೇಕು. ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾಗವಹಿಸಿದ ಹೋರಾಟಗಾರರ ಚ-ರಿತ್ರೆಯನ್ನು ಎಲ್ಲರೂ ಓದಬೇಕೆಂದು ಕರೆ ನೀಡಿದರು.

ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಉಪನ್ಯಾಸಕ ಸಂತೋಷ ಮಾನೆ ಉಪನ್ಯಾಸ ನೀಡಿದರು. ತಹಶೀಲ್ದಾರ ಸುರೇಶ ಮುಂಜೆ ಧ್ವಜಾರೋಹಣ ನೆರವೇ-ರಿಸಿದರು. ಕ್ರೀಡೆಯಲ್ಲಿ ರಾಜ್ಯಮಟ್ಟದ ಪ್ರಶಸ್ತಿ



ಪಡೆದ ವಿದ್ಯಾರ್ಥಿಗಳನ್ನು ಸತ್ಕರಿಸಲಾಯಿತು. ವಿಕಲಚೇತನ ಮಕ್ಕಳಿಗೆ ಪರೀಕರಗಳನ್ನು ವಿತರಿಸಲಾಯಿತು.

ಸಮಾರಂಭದಲ್ಲಿ ಪ.ಪಂ. ಅಧ್ಯಕ್ಷ ಅಶೋಕ ಅಂಗಡಿ, ತಾ.ಪಂ. ಇಓ ಡಾ.ಸುರೇಶ ಕದ್ದು, ಸಿಪಿಐ ಬಿ.ಎಸ್. ಮಂಟೂರ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ವಿ.ಎಸ್.ಚಂದರಗಿ, ಕೃಷಿ ಅಧಿಕಾರಿ ವಿನೋದ ಮಾವರಕರ, ಜಿ.ಪಂ. ಎಇಇ ವಿ.ಆರ್.ಭಜಂತ್ರಿ, ಬಿಸಿಯೂಟ ಅಧಿಕಾರಿ ಕುಮಾರ ಮಾದರ, ಪರಮಾನಂದ ಮಂಗಸೂಳಿ, ಸುಭಾಷ ಭಜಂತ್ರಿ, ಆರ್.ಬಿ.ಮನವಡ್ಡರ, ಕಲ್ಪನಾ ಕಾಂಬಳೆ, ಡಾ.ಎಮ್.ಬಿ.ಪಾಟೀಲ, ಎಚ್.ಎಲ್.ಪ್ರಜಾರಿ, ಬಸವರಾಜ ಕಾಂಬಳೆ, ಸದಾಶಿವ ಘೋರ್ಪಡೆ, ಸುರೇಶ ಮಾಳಿ, ಸದಾನಚಿದ ಹಳಿಂಗಳಿ, ಅನೀಲ ಶೆಟ್ಟಿ, ಇರ್ಫಾನ ತಾಂಬೋಳಿ, ಅನೀಲ ಕೊರವಿ, ಭಾರತಿ ಲೋಹಾರ ಸೇರಿ ಅನೇಕರು ಇದ್ದರು.

# ಟುಪಲೋವ್ ಯುದ್ಧ ವಿಮಾನದ ಜಿಲ್ಲೆಯ ಪ್ರವಾಸಿ ಆಕರ್ಷಣೀಯ : ಸಚಿವ ಮಂಕಾಳ ವೈದ್ಯ

ಕಾರವಾರ. : ಕಾರವಾರ ರವೀಂದ್ರ ನಾಥ ಠಾಗೂರ್ ಕಡಲತೀರದಲ್ಲಿರುವ ಟುಪಲೋವ್ ಯುದ್ಧ ವಿಮಾನ ವಸ್ತು ಸಂಗ್ರಾಲಯವು ಜಿಲ್ಲೆಯ ಪ್ರವಾಸೀ ಆಕರ್ಷಣಿಯ ತಾಣವಾಗಲಿದ್ದು, ಹೆಚ್ಚಿನ ಸಂಖ್ಯೆಯ ಪ್ರವಾಸಿಗರನ್ನು ಸೆಳೆಯಲಿದೆ ಎಂದು ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ಎಸ್. ವೈದ್ಯ ಹೇಳಿದರು.
ಅವರು ಶುಕ್ರವಾರ ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಇಲಾಖೆ ವತಿಯಿಂದ ರವೀಂದ್ರನಾಥ ಟ್ಯಾಗೋರ್ ಕಡಲತೀರದಲ್ಲಿ ಸ್ಥಾಪಿಸಲಾದ ವಿಶ್ರಾಂತ ಯುದ್ಧ ವಿಮಾನ ಟುಪಲೋವ್ ನ್ನು ಸಾರ್ವಜನಿಕ ವೀಕ್ಷಣೆಗೆ ಅವಕಾಶ ನಿಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.
ಟುಪಲೋವ್ ಯುದ್ಧ ವಿಮಾನವು ದೇಶದ ರಕ್ಷಣಾ ಕ್ಷೇತ್ರದಲ್ಲಿ ತನ್ನದೆಯಾದ ಛಾಪನ್ನು ಮೂಡಿಸಿದ್ದು, ಈ ಯುದ್ಧ ವಿಮಾನದ ಕಾರ್ಯಕ್ಷಮತೆ, ಇದು ರಕ್ಷಣಾ ಕ್ಷೇತ್ರಕ್ಕೆ ನೀಡಿದ ಕೊಡುಗೆಯ ಬಗ್ಗೆ ವಿದ್ಯಾರ್ಥಿಗಳು ಸಾರ್ವಜನಿಕರು ತಿಳಿದುಕೊಳ್ಳಲು ಸುವರ್ಣ ಅವಕಾಶವಾಗಿದ್ದು, ಇಂದಿನಿಂದ ಈ ಯುದ್ಧ ವಿಮಾನ ವಸ್ತು ಸಂಗ್ರಾಲಯವನ್ನು ಸಾರ್ವಜನಿಕರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದ್ದು, ಈ ಯುದ್ಧ ವಿಮಾನವು ಕಾರವಾರ ನಗರಕ್ಕೆ ಹೊಸ ಕಳೆಯನ್ನು ತಂದಿದ್ದು, ಪ್ರವಾಸಿಗರನ್ನು ತನ್ನತ್ತ ಆಕರ್ಷಿಸುತ್ತಿದೆ. ಈ ಮೂಲಕ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿಗೆ ಸಹಾಯವಾಗಲಿದೆ ಎಂದರು.
ಭೂ ಸೇನೆ, ನೌಕಾಪಡೆ ಮತ್ತು ವಾಯುಪಡೆಗಳಿಗೆ ಸೇರ್ಪಡೆಯಾಗ ಬಯಸುವ ಜಿಲ್ಲೆಯ ಯುವಕ-ರಿಗೆ ಈ ಯುದ್ಧ ವಿಮಾನ ವೀಕ್ಷಣೆಯು, ದೇಶಭಕ್ತಿಯ ಭಾವನೆಯನ್ನು ಮತ್ತಷ್ಟು ಉತ್ತೇಜಸಲಿದೆ, ಈ ವಿಮಾನದ ಇತಿಹಾಸದ ಬಗ್ಗೆ ತಿಳಿಸಲು ಪ್ರವಾಸಿ ಮಾರ್ಗದಶಿಯನ್ನು ನೇಮಿಸಲಾಗಿದೆ, ಪ್ರತಿದಿನ ಬೆಳಗ್ಗೆ 10 ರಿಂದ ಸಂಜೆ 5 ರವರೆಗೆ ಸಾರ್ವಜನಿಕರು ಇದನ್ನು ವೀಕ್ಷಿಸಬಹುದಾಗಿದೆ ಎಂದರು.
ಈ ಸಂದರ್ಭದಲ್ಲಿ ವಿಧಾನ ಪರಿಷತ್ ಶಾಸಕ ಗಣಪತಿ ಉಳ್ವೇಕರ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಸತೀಶ್ ನಾಯ್ಕ, ನಗರ ಸಭೆ ಅಧ್ಯಕ್ಷ ರವಿರಾಜ್ ಚಂದ್ರಹಾಸ ಅಂಕೋಲೆಕರ, ಜಿಲ್ಲಾಧಿಕಾರಿ ಕೆ.ಲಕ್ಷ್ಮೀ ಪ್ರಿಯಾ, ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಡಾ.ದೀಲಿಷ್ ಶಶಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್, ಅಪರ ಜಿಲ್ಲಾಧಿಕಾರಿ ಸಾಜೀದ್ ಮುಲ್ಲಾ, ಪ್ರವಾಸೋದ್ಯಮ ಇಲಾಖೆಯ ಉಪ ನಿರ್ದೇಶಕಿ ಮಂಗಳ ಗೌರಿ ಭಟ್, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ರವಿಶಂಕರ್, ಮಂಜುನಾಥ ನಾವಿ, ತರಬೇತಿ ನಿರತ ಐ.ಎ.ಎಸ್ ಅಧಿಕಾರಿ ಝುಪಿಶಾನ್ ಹಕ್ , ಕದಂಬ ನೌಕಾನೆಲೆಯ ಅಧಿಕಾರಿಗಳು ಮತ್ತಿತರರು ಉಪಸ್ಥಿತರಿದ್ದರು.



ಬೈಲಹೊಂಗಲ -79 ನೇ ಸ್ವಾತಂತ್ರೋ ತ್ಸವದ ಅಂಗವಾಗಿ ಬೈಲಹೊಂಗಲದ ಶಾಸಕರ ಮತಕ್ಷೇತ್ರ ಮಾದರಿ ಹಿರಿಯ ಪ್ರಾಥಮಿಕ ಕನ್ನಡ ಶಾಲೆ ನಂ 4 ರಲ್ಲಿ ಪ್ರಭಾರಿ ಬಿಇಓ ಬಿ. ಎನ್. ಕಸಾಳೆ ಧ್ವಜಾರೋಹನ್ ನೆರವೇರಿಸಿ ಮಕ್ಕಳ ಸಂಸ್ಕೃತಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಮುಖ್ಯೋಪಾಧ್ಯಾಯ ಡಿ. ಎನ್. ಹಲಕಿ, ಎಸ್ ಡಿ ಎಂ ಸಿ ಉಪಾಧ್ಯಕ್ಷ ಗಂಗಮ್ಮ ಸಾಲಿ, ಸದಸ್ಯರಾದ ಮಹಾಂತೇಶ ರಾಜಗೋಳಿ, ಗದಿಗೆಪ್ಪ ಮಡಿವಾಳರ, ಪೂಜಾ ಕೋಟಬಾಗಿ ಹಾಗೂ ಶಿಕ್ಷಕರು, ಇನ್ನುಳಿದ ಸದಸ್ಯರು ಉಪಸ್ಥಿತರಿದ್ದರು.

# ಭಾರತ ದೇಶದ ಕೀರ್ತಿಯನ್ನು ಜಾಗತಿಕವಾಗಿ ಉತ್ತುಂಗಕ್ಕೇರಿಸಬೇಕು : ಡಾ. ಜಿ.ಕೆ.ಬಡಿಗೇರ

ಧಾರವಾಡ : ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಧಾರವಾಡ ಇಲ್ಲಿ 79ನೇ ಸ್ವಾತಂತ್ರ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.

ಪ್ರಾಂಶುಪಾಲರಾದ ಪ್ರೊ. ಜಿ.ಕೆ. ಬಡಿಗೇರ ಅವರು ಧ್ವಜಾರೋಹಣವನ್ನು ನೆರವೇರಿಸಿದರು. ನಂತರ ವಿದ್ಯಾರ್ಥಿಗಳು ಹಾಗೂ ಕಾಲೇಜಿನ ಸಿಬ್ಬಂದಿಯನ್ನು ಉದ್ದೇಶಿಸಿ ಮಾತನಾಡಿದ ಅವರು ಹಲವು ಮಹನೀಯರ ತ್ಯಾಗ, ಬಲಿದಾನ, ಹೋರಾಟದ ಫಲವಾಗಿ ಭಾರತ ದೇಶಕ್ಕೆ ಸ್ವಾತಂತ್ರ್ಯಲಭಿಸಿದೆ. ಈ ಸ್ವಾತಂತ್ರ್ಯದ ಎಚ್ಚರ ನಮ್ಮಲ್ಲಿ ಜಾಗೃತವಾಗಿರಬೇಕು. ದೇಶದ ಮುಂದಿರುವ ಸವಾಲುಗಳನ್ನು ನಾವೆಲ್ಲರೂ ಒಗ್ಗಟ್ಟಿನಿಂದ ಎದುರಿಸಿ ದೇಶದ ಕೀರ್ತಿಯನ್ನು ಜಾಗತಿಕ ಮಟ್ಟದಲ್ಲಿ ಉತ್ತುಂಗಕ್ಕೇರಿಸಬೇಕು. ಅದಕ್ಕಾಗಿ ಯುವಜನತೆ ದೇಶಪ್ರೇಮ, ಸ್ವತಂತ್ರ ವಿಚಾರಶೀಲತೆ, ಪ್ರಾಮಾಣಿಕತೆ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ಸಿಡಿಸಿ ಸದಸ್ಯರಾದ ಮಲ್ಲಿಕಾರ್ಜುನ ಹಡಪದ, ಸುರೇಶ ಯಲಿಗಾರ ಅವರು ಪಾಲ್ಗೊಂಡಿದ್ದರು. ಸಾಂಸ್ಕೃತಿಕ ಸಂಚಾಲಕರಾದ ಡಾ. ಗಿರೀಶ ದೇಸೂರ ಅವರು ನಿರೂಪಿಸಿದರು. ರೇಂಜರ್ಸ ಮತ್ತು ರೋವರ್ಸ ಅಧಿಕಾರಿಗಳಾದ ಶಿವಾನಂದ ನರಹಟ್ಟಿ ಹಾಗೂ ಸುಮಿತ್ರಾ ಅಣ್ಣಿಗೇರಿ, ಎನ್.ಎಸ್.ಎಸ್. ಅಧಿಕಾರಿಗಳಾದ ಡಾ. ಡಿ.ಜಿ.ತಾಪಸ್, ಡಾ. ವಿಜಯಲಕ್ಷ್ಮಿ ದಾನರೆಡ್ಡಿ, ಡಾ. ಜಯಾನಂದಹಟ್ಟಿ, ಎನ್.ಸಿ.ಸಿ. ಅಧಿಕಾರಿ ಡಾ. ರೂಪಾ ಹಾಗೂ ಕಾಲೇಜಿನ ಬೋಧಕ ಬೋಧಕೇತರ ಸಿಬ್ಬಂದಿ ಹಾಜ–ರಿದ್ದರು. ಎನ್.ಸಿ.ಸಿ. ವಿದ್ಯಾಥಿಗಳು ಶಿಸ್ತುಬದ್ಧವಾಗಿ ಪರೇಡ ಮಾಡಿ ಗೌರವ ಧ್ವಜವಂದನೆ ಸಲ್ಲಿಸಿದರು.



ಧಾರವಾಡ ಜಿಲ್ಲಾಧಿಕಾರಿಗಳ ಕಚೇರಿ ಸಂಭಾಂಗಣದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜನ್ಮದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅವರು ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ, ನಮಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ರಾಯಣ್ಣನ ಅಭಿಮಾನಿಗಳು, ಸಾರ್ವಜನಿಕರು ಭಾಗವಹಿಸಿದ್ದರು.

# ತಾಳಿಕೋಟೆ : ಅಲ್ಲಲ್ಲಿ ಸಂಭ್ರಮ ಸಡಗರದ ಸ್ವಾತಂತ್ರ್ಯೋತ್ಸವ

ತಾಳಿಕೋಟೆ, 79ನೇ ಸ್ವಾತಂಂತ್ರೋತ್ಸವವು ಅಗಸ್ಟ 15 ರಂದು ತಾಳಿಕೋಟೆಯ ಹಾಗೂ ಸುತ್ತಮುತ್ತಲಿನ ಗ್ರಾಮಗಳ ವಿವಿಧ ಇಲಾಖಾ ಕಚೇರಿ ಹಾಗೂ ಸಂಘ ಸಂಸ್ಥೆಗಳಲ್ಲಿ ಸಡಗರ ಸಂಭ್ರಮದಿಂದ ಆಚರಿಸಲಾಯಿತು.

ಪಟ್ಟಣದ ಪುರಸಭೆ ಆವರಣದಲ್ಲಿ ಜರುಗಿದ ಧ್ವಜಾರೋಹಣವನ್ನು ಪುರಸಭಾ ಅಧ್ಯಕ್ಷೆ ಶ್ರೀಮತಿ ಜುಬೇದಾ ಜಮಾದಾರ ಅವರು ನೇರವೇರಿಸಿದರು.

ಈ ಸಮಯದಲ್ಲಿ ಪುರಸಭಾ ಮುಖ್ಯಾಧಿಕಾರಿ ವಸಂತ ಪವಾರ, ಸರ್ವ ಸದಸ್ಯರುಗಳು, ಸಿಬ್ಬಂದಿಗಳು ಉಪಸ್ಥಿತರಿದ್ದು ಧ್ವಜವಂದನೆ ಸಲ್ಲಿಸಿದರು.

ಕೃಷ್ಣಾ ಭಾಗ್ಯ ಜಲನಿಗಮ :– ಸ್ಥಳೀಯ ಕೃಷ್ಣಾ ಭಾಗ್ಯ ಜಲನಿಗಮ ಎ.ಎಲ್.ಬಿ.ಸಿ. ಉಪವಿಭಾಗ ಕಚೇರಿಯಲ್ಲಿ ಜರುಗಿದ 79ನೇ ಸ್ವಾತಂತ್ರ್ಯೋತ್ಸವ ಧ್ವಜಾರೋಹಣವನ್ನು ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಸಂತೋಷ ಹಿರೇಮಠ ಅವರು ನೇರವೇರಿಸಿದರು.

ಈ ಸಮಯದಲ್ಲಿ ಶ್ರೀಮತಿ ವೇಮನ್ ಕೆ.ಎಚ್., ಆದರ್ಶ ಹಂಚಿನಾಳ, ಮಾಲಿಂಗರಾಜ ಹೊಕ್ರಾಣಿ, ಮಹಾದೇವ ನರಸಾಳೆ, ಶ್ರೀಮತಿ ಜಯಲಕ್ಷ್ಮೀ ಹಳೇಮನಿ, ಶ್ರೀಮತಿ ರುದ್ರಮ್ಮ ಬಿರಾದಾರ, ಅಮೀನಪಟೇಲ ಪಾಟೀಲ, ಶ್ರೀಮತಿ ನಜ್ಮಾಬೇಗಂ ಥಾಂಗೆ, ಎಂ. ಎಂ.ಚೌದ್ರಿ, ಮೊದಲಾದವರು ಭಾಗವಹಿಸಿದ್ದರು.

ಬೃಹ್ಮಲಿಂಗೇಶ್ವರ ಪ್ರಾಥಮಿಕ ಶಾಲೆ :– ಸ್ಥಳೀಯ ಎಸ್.ಎಸ್.ವಿದ್ಯಾ ಸಂಸ್ಥೆಯಡಿಯಲ್ಲಿ ನಡೆಯುತ್ತಿರುವ ಶ್ರೀ ಬೃಹ್ಮಲಿಂಗೇಶ್ವರ ಕನ್ನಡ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಜರುಗಿದ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಕಾರ್ಯದರ್ಶಿ ಸಚೀನ ಪಾಟೀಲ ಅವರು ನೆರವೇರಿಸಿದರು. ಇದೇ ಸಮಯದಲ್ಲಿ ವಿವಿಧ ಸ್ಪರ್ದೆಗಳಲ್ಲಿ ವಿಜೇತರಾದ ವಿಧ್ಯಾರ್ಥಿಗಳಿಗೆ ಭಹುಮಾನ ವಿತರಿಸಲಾಯಿತು.



ಈ ಸಮಯದಲ್ಲಿ ಸುಭಾಸ ಬಿಳೇಭಾವಿ, ದೇವೇಂದ್ರ ವಿಜಾಪೂರ, ಮುಖ್ಯಗುರುಗಳಾದ ಜೆ. ಎಂ.ಕೊಣ್ಣೂರ, ಶಿಕ್ಷಕ ವ್ಹಿ.ಎ.ವಿಜಾಪೂರ, ಮುತ್ತು ಬಿರಾದಾರ. ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿ ಧ್ವಜವಂದನೆ ಸಲ್ಲಿಸಿದರು.

ಹೇಮರಡ್ಡಿ ಮಲ್ಲಮ್ಮ ಕೋ–ಆಪ್ ಬ್ಯಾಂಕ್ : ಸ್ಥಳೀಯ ಶ್ರೀ ಹೇಮರಡ್ಡಿ ಮಲ್ಲಮ್ಮ ಕೋ–ಆಪ್ ಸೋಸಾಯಿಟಿಯ ಆವರಣದಲ್ಲಿ ಜರುಗಿದ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಉಪಾಧ್ಯಕ್ಷ ರವಿಗೌಡ ಪಾಟೀಲ, ಅವರು ನೆರವೇರಿಸಿದರು.

ಈ ಸಮಯದಲ್ಲಿ ನಿರ್ದೇಶಕರುಗಳಾದ ಡಾ.ಗಂಗಾಂಬಿಕಾ ಪಾಟೀಲ, ಪ್ರಭುಗೌಡ ಮದರಕಲ್ಲ, ಹಣಮಂತ್ರಾಯಗೌಡ ಗೂಗಲ್, ಶಂಕರಗೌಡ ಮಾಡಗಿ, ಚನ್ನಪ್ಪಗೌಡ ಮಾಳಿ, ರಮೇಶ ನಾಯಕ, ಶರಣಗೌಡ ಇಬ್ರಾಂಹಿಪೂರ, ಶಂಕರಗೌಡ ಕಂತಲಗಾವಿ, ಬಿ.ಎಸ್. ಇಸಾಂಪೂರ, ವ್ಯವಸ್ಥಾಪಕ ಸಿ.ಎನ್. ಮಾಲಿಪಾಟೀಲ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದು ಧ್ವಜವಂದನೆ ಸಲ್ಲಿಸಿದರು.

ಎಸ್.ಕೆ.ಪೂರ್ವ ಪ್ರಾಥಮಿಕ ಶಾಲೆ : ಸ್ಥಳೀಯ ಶ್ರೀ ಖಾಸ್ಗತೇಶ್ವರ ಪೂರ್ವ ಪ್ರಾಥಮಿಕ ಶಾಲಾ ಆವರಣದಲ್ಲಿ ಜರುಗಿದ ಧ್ವಜಾರೋಹಣವನ್ನು ಅಧ್ಯಕ್ಷರಾದ ವೇ॥ ಮುರುಘೇಶ ವಿರಕ್ತಮಠ ಅವರು ನೆರವೇರಿಸಿದರು. ಈ ಸಮಯದಲ್ಲಿ ಶಿಕ್ಷಕರು, ಶಿಕ್ಷಕಿಯರು, ವಿಧ್ಯಾರ್ಥಿಗಳು ಪಾಲ್ಗೊಂಡು ಧ್ವಜವಂದನೆ ಸಲ್ಲಿಸಿದರು.

ರೀಲಿಯಾನ್ಸ ಏಜ್ಯೂಕೇಶನ್ ಸೋಸಾಯಿಟಿ :– ಪಟ್ಟಣದ ರಿಲಿಯನ್ಸ್ ಏಜ್ಯೂಕೇಶನ್ ಸೋಸಾಯಿಟಿ ಆವರಣದಲ್ಲಿ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಅಧ್ಯಕ್ಷರಾದ ಅಬ್ದುಲ್‌ರಹೇಮಾನ ನಮಾಜಕಟ್ಟಿ ಅವರು ನೆರವೇರಿಸಿದರು.

ಈ ಸಮಯದಲ್ಲಿ ಕಾರ್ಯದರ್ಶಿ ಇಸಾಕ ನಮಾಜಕಟ್ಟಿ, ಅತಿಥಿ ಸೈಯದ ಡಾಲಾಯತ್, ಪಾರುಕ ಬಿಲವಾರ, ಆರೀಪ ಕಂಕರವಾಲೆ, ಹಾಗೂ ಶಾಲಾ ಶಿಕ್ಷಕರು, ಸಿಬ್ಬಂದಿವರ್ಗದವರು, ವಿದ್ಯಾರ್ಥಿಗಳು ಉಪಸ್ಥಿತ–ರಿದ್ದು ಧ್ವಜವಂದನೆ ಸಲ್ಲಿಸಿದರು.

ಎಸ್.ಎಸ್.ವಿದ್ಯಾ ಸಂಸ್ಥೆ : ಶ್ರೀ ಸಂಗಮಾರ್ಯ ವಿದ್ಯಾ ಸಂಸ್ಥೆಯ ಆವರಣದಲ್ಲಿ ನಡೆದ 79ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಅಧ್ಯಕ್ಷರಾದ ಎಚ್.ಎಸ್.ಪಾಟೀಲ ಅವರು ನೇರವೇರಿಸಿದರು.

ಈ ಸಮಯದಲ್ಲಿ ಸಂಸ್ಥೆಯ ಶಿಕ್ಷಕರು, ವಿದ್ಯಾರ್ಥಿಗಳು ಭಾಗವಹಿಸಿ ಧ್ವಜವಂದನೆ ಸಲ್ಲಿಸಿದರು.

ಬ್ರೀಲಿಯಂಟ್ ಶಿಕ್ಷಣ ಸಂಸ್ಥೆ :– ಪಟ್ಟಣದ ಮೈಲೇಶ್ವರ ಕ್ರಾಸ್‌ನಲ್ಲಿರುವ ಬ್ರೀಲಿಯಂಟ್ ಶಿಕ್ಷಣ ಸಂಸ್ಥೆಯಲ್ಲಿ ನಡೆದ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಅಧ್ಯಕ್ಷ ನಾನಾಗೌಡ ಪಾಟೀಲ ಅವರು ನೇರವೇರಿಸಿದರು.

ಈ ಸಮಯದಲ್ಲಿ ಸಂಸ್ಥೆಯ ಸದಸ್ಯಗಳು, ವಿದ್ಯಾರ್ಥಿಗಳು, ಶಿಕ್ಷಕರು, ಭಾಗವಹಿಸಿ ಧ್ವಜವಂದನೆ ಸಲ್ಲಿಸಿದರು.

ಬನ್ನಿ ಬಸವೇಶ್ವರ ಶಿಕ್ಷಣ ಸಂಸ್ಥೆ

ತಾಳಿಕೋಟೆ ತಾಲೂಕಿನ ನೀರಲಗಿ ಗ್ರಾಮದ(ಅಮಲ್ಯಾಳ ಕ್ರಾಸ್) ಬನ್ನಿ ಬಸವೇಶ್ವರ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ನಡೆದ 79ನೇ ಸ್ವಾತಂತ್ರ್ಯೋತ್ಸವದ ಧ್ವಜಾರೋಹಣವನ್ನು ಕಾರ್ಯದರ್ಶಿ ಈರಣ್ಣ ತಳವಾರ ಅವರು ನೇರವೇರಿಸಿದರು.

ಈ ಸಮಯದಲ್ಲಿ ಮುಖ್ಯಗುರುಗಳಾದ ಶಂಕರಗೌಡ ಬಿರಾದಾರ, ರಾಮನಗೌಡ ಬಿರಾದಾರ, ಶಿಕ್ಷಕ ವೃಂದದವರು, ವಿದ್ಯಾರ್ಥಿಗಳು ಉಪಸ್ಥಿತರಿದ್ದು ಧ್ವಜವಂದನೆ ಸಲ್ಲಿಸಿದರು.

# ಸೆ.16 ರಂದು ಪಟಾಕಿ ಜಾತ್ರೆ: ಕಾಡಸಿದ್ಧನ ಜಾತ್ರೆಗೆ ಹಿರಿಯರಿಂದ ಚಾಲನೆ

ರಬಕವಿ–ಬನಹಟ್ಟಿ,ಆ15: ಸೆ.16 ರಂದು ಜರುಗುವ ಬನಹಟ್ಟಿಯ ಆರಾಧ್ಯದೈವ ಶ್ರೀ ಕಾಡಸಿದ್ಧೇಶ್ವರ ದೇವರ ರಥೋತ್ಸವ ಜಾತ್ರಾ ಮಹೋತ್ಸವಕ್ಕೆ ಗುರುವಾರ ರಾತ್ರಿ ನಗರದ ಆರಾಧ್ಯ ದೈವ ಕಾಡಸಿದ್ಧೇಶ್ವರ ಸನ್ನಿಧಿಯಲ್ಲಿ ಜಾತ್ರೆಗೆ ಕಾಯಿ ಒಡೆಯುವುದರ ಮೂಲಕ ಚಾಲನೆ ನೀಡಲಾಯಿತು.

ದೇವಸ್ಥಾನ ಟ್ರಸ್ಟ್ ಕಮಿಟಿ, ಮಂಗಳವಾರ ಪೇಟೆ ಹಟಗಾರ ದೈವ ಮಂಡಳಿ, ಸೋಮವಾರ ಪೇಟೆ ಸಮಸ್ತ ದೈವ ಮಂಡಳ, ಗೌಡರು ಮತ್ತು ರೈತರ ಸಮಾಜ ಹಾಗೂ ಊರಿನ ಪ್ರಮುಖ ಗಣ್ಯರ ನೇತೃತ್ವದಲ್ಲಿ ದೇವಸ್ಥಾನಗಳಲ್ಲಿ ಕಾಯಿ ಒಡೆಸುವ ಮೂಲಕ ಸೆ.16 ರಂದು ಜಾತ್ರೆ ನಡೆಸುವದಾಗಿ ಸರ್ವಾನುಮತದಿಂದ ನಿರ್ಧ–ರಿಸಲಾಯಿತು.

ಈ ಸಂದರ್ಭ ಶ್ರೀಶೈಲ ದಭಾಡಿ ಮಾತನಾಡಿ, ಸೆ.16 ರಂದು ನಡೆಯುವ ಶ್ರೀ ಕಾಡಸಿದ್ಧೇಶ್ವರ ಜಾತ್ರೆಗೆ ನಗರದ ಹಿರಿಯರು ತನು, ಮನ, ಧನದಿಂದ ಸಹಕಾರ ನೀಡಿ ಜಾತ್ರೆ ಯಶಸ್ವಿಗೆ ಸಹಕರಿಸಬೇಕು ಎಂದರು.

ಸೆ.14 ಉಚ್ಚಾಯ, ಸೆ.16 ರಂದು ಸಂಜೆ 4 ಗಂಟೆಗೆ ಕುಸ್ತಿ, ಸೆ.17 ರಂದು ಸಂಜೆ 5 ಕ್ಕೆ ಕಳಸೋತ್ಸವ ಜರುಗಲಿದೆ.

ಇದೇ ಸಂದರ್ಭದಲ್ಲಿ ಶಾಂತವೀರಯ್ಯ ಹಿರೇಮಠ, ಶ್ರೀಶೈಲ ಮಠಪತಿ, ಶ್ರೀಪಾದ ಬಾಣಕಾರ, ದಾನಪ್ಪ ಹುಲಜತ್ತಿ, ಸಿದ್ಧನಗೌಡ ಪಾಟೀಲ, ಮಲ್ಲಿಕಾರ್ಜುನ ತುಂಗಳ, ಎಂ.ಜಿ. ಕೆರೂರ, ಪ್ರಶಾಂತ ಕೊಳಕಿ, ನಂದು ಕುಳ್ಳಿ, ವಿಶ್ವಜ ಕಾಡದೇವರ, ಕಿರಣ ಆಳಗಿ, ಮಹಾಶಾಂತ ಶೆಟ್ಟಿ, ಮಲ್ಲಪ್ಪ ಹೂಲಿ ಸೇರಿದಂತೆ ಅನೇಕರಿದ್ದರು.



## 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ: ಜಿಲ್ಲಾ ಉಸ್ತುವಾರಿ ಸಚಿವರಿಂದ ರಾಷ್ಟ್ರ ಧ್ವಜಾರೋಹಣ

# ಸ್ವಾತಂತ್ರ್ಯ ಹೋರಾಟಗಾರರು ಪ್ರತಿಯೊಬ್ಬರ ಮನದಲ್ಲೂ ಅಮರರಾಗಿ ಉಳಿದಿದ್ದಾರೆ - ಸಚಿವ ಶಿವರಾಜ ತಂಗಡಗಿ

ಕೊಪ್ಪಳ : ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಹೋರಾಟಗಾರರು ಪ್ರತಿಯೊಬ್ಬ ಭಾರತೀಯರ ಮನದಲ್ಲೂ ಅಮರರಾಗಿ ಉಳಿದಿದ್ದಾರೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್. ತಂಗಡಗಿ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ಹಮ್ಮಿಕೊಂಡಿದ್ದ 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ಕಾರ್ಯದಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ದೇಶದ ಸ್ವಾತಂತ್ರ್ಯಕ್ಕಾಗಿ ಮಹಾತ್ಮ ಗಾಂಧೀಜಿ, ಜವಾಹರಲಾಲ್ ನೆಹರೂ, ಸುಭಾಷ್‌ಚಂದ್ರ ಬೋಸ್, ಸರ್ದಾರ್ ವಲ್ಲಭಭಾಯಿ ಪಟೇಲ್, ಲಾಲ್ ಬಹದ್ದೂರ್ ಶಾಸ್ತ್ರಿ, ಡಾ.ಬಿ.ಆರ್.ಅಂಬೇಡ್ಕರ್, ಗೋಪಾಲಕೃಷ್ಣ ಗೋಖಲೆ, ಲಾಲಾ ಲಜಪತರಾಯ್, ಬಾಲಗಂಗಾಧರ ತಿಲಕ್, ಮೌಲಾನಾ ಅಬುಲ್ ಕಲಾಂ ಅಜಾದ್, ಭಗತ್ ಸಿಂಗ್, ರಾಜ್‌ಗುರು, ಕಿತ್ತೂರು ರಾಣಿ ಚೆನ್ನಮ್ಮ, ಹೀಗೆ ಅನೇಕ ಮಹನೀಯರು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದರು. ಭಾರತದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹನೀಯರು ಪ್ರತಿಯೊಬ್ಬ ಭಾರತೀಯರ ಮನದಲ್ಲೂ ಅಮರರಾಗಿ ಉಳಿದಿದ್ದಾರೆ. ನಾವೆಲ್ಲರೂ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯೋಣ. ಜಾತಿ, ಧರ್ಮ, ಭೇದ–ಭಾವ ಮಾಡದೇ ಎಲ್ಲರೂ ಸಮಾನರಾಗಿ ಶಾಂತಿಯಿಮದ ಬಾಳೋಣ. ದೇಶಪ್ರೇಮ ಬೆಳೆಸಿಕೊಳ್ಳಲು ಪ್ರೇರಣೆಯಾದ ಈ ದಿನದಂದು ಸಮ ಸಮಾಜ ಕಟ್ಟಲು ಸಂಕಲ್ಪ ಮಾಡೋಣ ಎಂದರು.

ಸ್ವಾತಂತ್ರ್ಯ ಹೋರಾಟದಲ್ಲಿ ಕೊಪ್ಪಳ ಜಿಲ್ಲೆಯ ಹೋರಾಟಗಾರರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಸ್ವಾತಂತ್ರ್ಯ ಚಳುವಳಿಯಲ್ಲಿ ಭಾಗಿಯಾದ ಕೊಪ್ಪಳ ಜಿಲ್ಲೆಯ ಮುಂಡರಗಿ ಭೀಮರಾಯರು, ಹಮ್ಮಿಗೆ ಕೆಂಚನಗೌಡರು, ಇಟಗಿಯ ವೀರಭದ್ರಯ್ಯನವರು, ಶಿರೂರು ವೀರಭದ್ರಪ್ಪನವರು, ಶಿವಮೂರ್ತಿಸ್ವಾಮಿ ಅಳವಂಡಿಯವರು, ಜನಾರ್ಧನರಾಯ ದೇಸಾಯಿಯವರು, ಎಲ್.ಕೆ.ಷ–ರೀಫ್‌ರವರು, ಬಿಂದು ಮಾಧವರಾವ್ ಅವರು, ಬಿ.ಕೆ. ಪ್ರಾಣೇಶಾಚಾರ್ಯರು, ಮುರಡಿ ಭೀಮಜ್ಜ ಮೊದಲಾದ ಧೀಮಂತರುಗಳ ದೇಶ ಪ್ರೇಮದ ಗುಣವು ನಮಗೆಲ್ಲ ಸ್ಫೂರ್ತಿಯಾಗಲಿ. ಅವರ ಸೇವಾಗುಣವನ್ನು ಇಂದು ಸ್ಮರಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಹೇಳಿದರು.

ಪಂಚ ಗ್ಯಾರಂಟಿ ಯೋಜನೆಗಳು: ರಾಜ್ಯ ಸರ್ಕಾರದಿಂದ ಕಳೆದ ಎರಡುವರೆ ವರ್ಷಗಳಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳಾಗಿವೆ. ಪಂಚ ಗ್ಯಾರಂಟಿ ಯೋಜನೆಯಡಿ ಆರ್ಥಿಕವಾಗಿ ದುರ್ಬಲರಾಗಿರುವ ವರ್ಗದವರಿಗೆ ಸೌಲಭ್ಯಗಳನ್ನು ಒದಗಿಸುತ್ತಿದ್ದು, ಮಹಿಳೆಯರು, ಪಡಿತರ ಚೀಟಿದಾರರು, ಯುವಕರು ಸೇರಿದಂತೆ ಹಲವಾರು ಜನರಿಗೆ ಇವುಗಳ ಸೌಲಭ್ಯ ದೊರೆಯುತ್ತಿದೆ. ಪಂಚ ಗ್ಯಾರಂಟಿ ಯೋಜನೆಗಳಿಂದ ಜನರ ಆರ್ಥಿಕ ಜೀವನ ಮಟ್ಟವು ಸುಧಾರಣೆಯಾಗಿದ್ದು, ಜನ ಸೇವೆಯೇ ನಮ್ಮ ಸರ್ಕಾರದ ಧ್ಯೇಯವಾಗಿದೆ. ಪಂಚ ಗ್ಯಾರಂಟಿ ಯೋಜನೆಗಳಿಗಾಗಿ ಪ್ರತಿ ವರ್ಷದ ಬಜೆಟ್‌ನಲ್ಲಿ ಅನುದಾನವನ್ನು ಮೀಸಲಿಡಲಾಗುತ್ತಿದೆ ಎಂದರು.

2023ರ ಜೂನ್ 11 ರಿಂದ ಆರಂಭಗೊಂಡ ಶಕ್ತಿ ಯೋಜನೆಯು ಜನಪ್ರಿಯ ಯೋಜನೆಯಾಗಿ ಮೆಚ್ಚುಗೆ ಗಳಿಸಿದ್ದು, 2025ರ ಜುಲೈ ಅಂತ್ಯದವರೆಗೆ ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 8.37 ಕೋಟಿಗೂ ಅಧಿಕ ಮಹಿಳಾ ಪ್ರಯಾಣಿಕರು ಪ್ರಯಾಣಿಸಿ ಶಕ್ತಿ ಯೋಜನೆಯ ಸದುಪಯೋಗ ಪಡೆದುಕೊಂಡಿದ್ದಾರೆ. ಇದಕ್ಕಾಗಿ 303.45 ಕೋಟಿ ರೂ.ಗಳು ವೆಚ್ಚ ಮಾಡಲಾಗಿದೆ. ಗೃಹಜ್ಯೋತಿ ಯೋಜನೆ 2025ರ ಜೂನ್ 30 ರವರೆಗೆ ಕೊಪ್ಪಳ ಜಿಲ್ಲಾ ವ್ಯಾಪ್ತಿಯಲ್ಲಿ ಗೃಹ ಜ್ಯೋತಿ ಯೋಜನೆಯಲ್ಲಿ ಒಟ್ಟು 2,83,988 ಗ್ರಾಹಕರ ಪೈಕಿ 2,76,653 ಫಲಾನುಭವಿಗಳು ನೋಂದಾಯಿಸಿದ್ದು, ಶೇ 97.42ರಷ್ಟು ಪ್ರಗತಿಯಾಗಿದೆ. ಅನ್ನಭಾಗ್ಯ ಯೋಜನೆಯಡಿ ಕೊಪ್ಪಳ ಜಿಲ್ಲೆಯಲ್ಲಿ 37,224 ಅಂತ್ಯೋದಯ, 2,91,265 ಪಿ.ಹೆಚ್.ಹೆಚ್ ಪಡಿತರ ಚೀಟಿಗಳಿದ್ದು, ಅವುಗಳಲ್ಲಿನ 12,33,998 ಸದಸ್ಯರಿಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಂತೆ ಪ್ರತಿ ಸದಸ್ಯರಿಗೆ 10 ಕೆಜಿ ಆಹಾರ ಧಾನ್ಯ ಉಚಿತವಾಗಿ ವಿತರಿಸಲಾಗುತ್ತಿದೆ.

ಅದೇ ರೀತಿ ಯುವನಿಧಿ ಯೋಜನೆ 2023ರ ಡಿಸೆಂಬರ್ 26 ರಂದು ಮಾನ್ಯ ಮುಖ್ಯಮಂತ್ರಿಗಳಿಂದ ಯುವನಿಧಿ ಯೋಜನೆಯ ನೋಂದಣಿಗೆ ಚಾಲನೆ ನೀಡಲಾಯಿತು. ನಂತರ 2024ರ ಜನವರಿ 12 ರಂದು ಸ್ವಾಮಿ ವಿವೇಕಾನಂದ ಜಯಂತಿ ಪ್ರಯುಕ್ತ ಅರ್ಹ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಇದು ನಿರುದ್ಯೋಗ ಪದವೀಧರರಿಗೆ ಪ್ರತಿ ತಿಂಗಳು ರೂ. 3000 ಹಾಗೂ ಡಿಪ್ಲೊಮಾದಾರ–ರಿಗೆ ಪ್ರತಿ ತಿಂಗಳು ರೂ. 1500 ಗಳ ನಿರುದ್ಯೋಗ ಭತ್ಯೆ ನೀಡುವ ಯೋಜನೆಯಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ 2025ರ ಜುಲೈ 31 ರವರೆಗೆ 9,221 ಫಲಾನುಭವಿಗಳು ನೋಂದಣಿ ಮಾಡಿಕೊಂಡಿದ್ದು, ಇಲ್ಲಿಯವರೆಗೆ ಒಟ್ಟು ಮೊತ್ತ ರೂ. 15,17,71,500 ನಿರುದ್ಯೋಗ ಭತ್ಯೆಯನ್ನು ನೀಡಲಾಗಿದೆ.

ಬಿಪಿಎಲ್, ಎಪಿಎಲ್, ಅಂತ್ಯೋದಯ ಕಾರ್ಡ್‌ನಲ್ಲಿ ನಮೂದಿಸಿರುವಂತೆ ಕುಟುಂಬದ ಅರ್ಹ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2,000 ರೂ. ಆರ್ಥಿಕ ಸೌಲಭ್ಯ ನೀಡುವ ಗೃಹಲಕ್ಷ್ಮೀ ಯೋಜನೆಯಿಂದ ಕೊಪ್ಪಳ ಜಿಲ್ಲೆಯ ಲಕ್ಷಾಂತರ ಮಹಿಳೆಯರಿಗೆ ಅನುಕೂಲವಾಗುತ್ತಿದೆ. ಕೊಪ್ಪಳ ಜಿಲ್ಲೆಯಲ್ಲಿ ಜೂನ್–2025ರ ಅಂತ್ಯಕ್ಕೆ ಒಟ್ಟು 3,26,823 ಫಲಾನುಭವಿಗಳು ಈ ಯೋಜನೆಯಡಿ ನೊಂದಣಿಯಾಗಿದ್ದು, ಇದುವರೆಗೂ 20 ಕಂತುಗಳಲ್ಲಿ ಒಟ್ಟು ಮೊತ್ತ ರೂ. 1,213.58 ಕೋಟಿ ರೂಪಾಯಿ ಸಹಾಯ ಧನ ಫಲಾನುಭವಿಗಳ ಖಾತೆಗೆ ಸಂದಾಯವಾಗಿರುತ್ತದೆ ಎಂದು ತಿಳಿಸಿದರು.

ಜಿಲ್ಲಾ ಪಂಚಾಯತ್: ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ 2024–25ನೇ ಸಾಲಿಗೆ 83 ಲಕ್ಷ ಮಾನವ ದಿನಗಳ ಸೃಜನೆಯ ಗುರಿಯಿದ್ದು 2025ರ ಆಗಸ್ಟ್ 6ಕ್ಕೆ 47.37 ಲಕ್ಷ ಮಾನವ ದಿನಗಳು ಸೃಜಿಸಿ ಶೇ. 57ರಷ್ಟು ಪ್ರಗತಿ ಸಾಧಿಸಲಾಗಿದೆ. ವಸತಿ ಯೋಜನೆಯಡಿ 2021–22ನೇ ಸಾಲಿನ ಬಸವ ವಸತಿ ಯೋಜನೆ ಮತ್ತು ಹೆಚ್ಚುವರಿ ಯೋಜನೆಯಡಿ 13,347 ಮನೆಗಳ ಗುರಿ ಇದ್ದು, ಈ ಪೈಕಿ ಇಲ್ಲಿಯವರೆಗೆ 13,156 ಮನೆಗಳನ್ನು ನಿಗಮದಿಂದ ಅನುಮೋದನೆ ಪಡೆಯಲಾಗಿದೆ. ಇದರಲ್ಲಿ 6,415 ಪ್ರಗತಿಯಲ್ಲಿದ್ದು 6,449 ಮನೆಗಳು ಮುಕ್ತಾಯಗೊಂಡಿರುತ್ತವೆ. ಡಾ.ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ ಮತ್ತು ಹೆಚ್ಚುವರಿ ಯೋಜನೆಯಡಿ 4,207 ಮನೆಗಳ ಗುರಿ ಇದ್ದು ಈ ಪೈಕಿ ಇಲ್ಲಿಯವರೆಗೆ 4,143 ಮನೆಗಳನ್ನು ನಿಗಮದಿಂದ ಅನುಮೋದನೆ ಪಡೆಯಲಾಗಿದೆ. ಇದರಲ್ಲಿ 1,779 ಮನೆಗಳು ಪ್ರಗತಿಯಲ್ಲಿದ್ದು 2,207 ಮನೆಗಳು ಮುಕ್ತಾಯಗೊಂಡಿರುತ್ತವೆ ಎಂದರು.

ಕೃಷಿ ಇಲಾಖೆ: ಈ ವರ್ಷ 2025ರ ಆಗಸ್ಟ್ 2ರವರೆಗೆ ಜಿಲ್ಲೆಯಲ್ಲಿ ಸರಾಸರಿ ವಾಡಿಕೆ ಮಳೆ 232 ಮಿ.ಮೀ. ಇದ್ದು, ವಾಸ್ತವಿಕವಾಗಿ 312 ಮಿ.ಮೀ. ಮಳೆಯಾಗಿದೆ. ಶೇ. 35 ರಷ್ಟು ಅಧಿಕ ಮಳೆಯಾಗಿರುತ್ತದೆ. ಈ ವರ್ಷ ಜಿಲ್ಲೆಯಲ್ಲಿ ವ್ಯಾಪಕ ಮಳೆಯಾಗಿರುವುದರಿಂದ ಮುಂಗಾರು ಹಂಗಾಮು ಆಶಾದಾಯಕವಾಗಿದೆ. ಜಿಲ್ಲೆಯ ಬಿತ್ತನೆ ಗುರಿ 3.19 ಲಕ್ಷ ಹೆಕ್ಟರ್ ಆಗಿದ್ದು, 3.56 ಲಕ್ಷ ಹೆಕ್ಟರ್ ಪ್ರದೇಶದಲ್ಲಿ



ಶೇ.110ರಷ್ಟು ಬಿತ್ತನೆಯಾಗಿದೆ. ರೈತರು ಮುಖ್ಯವಾಗಿ ಮೆಕ್ಕೆಜೋಳ ಬೆಳೆಯನ್ನು ಹೆಚ್ಚಾಗಿ ಬಿತ್ತನೆ ಮಾಡಿರುತ್ತಾರೆ. ಭತ್ತ, ಮೆಕ್ಕೆಜೋಳ, ಸಜ್ಜೆ, ನವಣೆ, ಹೆಸರು, ತೊಗರಿ, ಸೂರ್ಯಕಾಂತಿ ಇತ್ಯಾದಿ ವಿವಿಧ ಬಿತ್ತನೆ ಬೀಜಗಳ ಮೊತ್ತ 10,590 ಕ್ವಿಂಟಲ್ ದಾಸ್ತಾನು ಮಾಡಲಾಗಿದ್ದು, ಇದರಲ್ಲಿ 8,742 ಕ್ವಿಂಟಲ್ ಬೀಜ ರೈತರಿಗೆ ವಿತರಿಸಲಾಗಿದೆ. ಇನ್ನುಳಿದ 1,848 ಕ್ವಿಂಟಲ್ ಬೀಜ ದಾಸ್ತಾನಿನಲ್ಲಿ ಲಭ್ಯವಿದ್ದು, ಜಿಲ್ಲೆಯಲ್ಲಿ ಬಿತ್ತನೆ ಬೀಜದ ಕೊರತೆ ಇರುವುದಿಲ್ಲ ಎಂದು ಹೇಳಿದರು.

ತೋಟಗಾರಿಕೆ ಇಲಾಖೆ: ಕರ್ನಾಟಕ ಸರ್ಕಾರದಿಂದ 2025–26ನೇ ಸಾಲಿನ ಬಜೆಟ್‌ನಲ್ಲಿ ಅನುಮೋದನೆಗೊಂಡಿರುವ ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲ್ಲೂಕಿನ ಸಿರಿವಾರ ಗ್ರಾಮದಲ್ಲಿ 200 ಎಕರೆ ಪ್ರದೇಶದಲ್ಲಿ ಹೊಸದಾಗಿ ಅನುಷ್ಠಾನಗೊಳಿಸಲಾಗುತ್ತಿರುವ ತೋಟಗಾ–ರಿಕೆ ತಂತ್ರಜ್ಞಾನ ಪಾರ್ಕ್‌ನ ಪ್ರಸ್ತುತ ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಲಾಗಿದ್ದು, ದಿನಾಂಕ:17/07/2025ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆಯಾಗಿರುತ್ತದೆ. ಮುಂದಿನ ದಿನಗಳಲ್ಲಿ ಕೊಪ್ಪಳ ಸೇರಿದಂತೆ ಕಲ್ಯಾಣ ಕರ್ನಾಟಕದ ರೈತರಿಗೆ ಈ ತೋಟಗಾರಿಕೆ ತಂತ್ರಜ್ಞಾನ ಪಾರ್ಕ್ ಒಂದು ವರದಾನವಾಗಲಿದೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ: ಕುಟುಂಬ ಕಲ್ಯಾಣ ಕಾರ್ಯಕ್ರಮದಲ್ಲಿ 2024–25ನೇ ಸಾಲಿನಲ್ಲಿ ತಾತ್ಕಾಲಿಕ ವಿಧಾನವಾದ ಪಿ.ಪಿ.ಐ.ಯು.ಸಿ.ಡಿ ಯಲ್ಲಿ 10,759 ಫಲಾನುಭವಿಗಳಿಗೆ ಸೇವೆಯನ್ನು ನೀಡಲಾಗಿದ್ದು ಶೇ. 115.6 ರಷ್ಟು ಸಾಧನೆಯಾಗಿರುತ್ತದೆ ಎಂದರು.

ಸಮಾಜ ಕಲ್ಯಾಣ ಇಲಾಖೆ: ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪಿ.ಯು.ಸಿ.ಗೆ ರೂ. 20,000 ಗಳು, ಪದವಿಯಲ್ಲಿ ರೂ. 25,000 ರಿಂದ ಸ್ನಾತಕೋತ್ತರ ಪದವಿಗೆ ರೂ. 30,000 ಗಳು ಮತ್ತು ವೃತ್ತಿಪರ ಕೋರ್ಸ್‌ಗಳಾದ ಮೆಡಿಕಲ್ ಅಥವಾ ಇಂಜಿನಿಯ–ರಿಂಗ್‌ನಲ್ಲಿ ರೂ. 35,000 ಗಳವರೆಗೆ ಪ್ರೋತ್ಸಾಹಧನ ವಿತರಿಸಲಾಗಿರುತ್ತದೆ. ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳಾದ ಸಿ.ಸಿ. ರಸ್ತೆ, ಚರಂಡಿ, ಇತ್ಯಾದಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಒಟ್ಟಾರೆ ರೂ. 769.16 ಲಕ್ಷಗಳ ವೆಚ್ಚ ಭ–ರಿಸಲಾಗಿರುತ್ತದೆ ಎಂದು ತಿಳಿಸಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಸತಿ ನಿಲಯಗಳಲ್ಲಿ ಒಟ್ಟು 56 ಸ್ವಂತ ಕಟ್ಟಡಗಳಿದ್ದು, 1 ವಸತಿ ನಿಲಯದ ಸ್ವಂತ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದೆ. 4 ವಸತಿ ನಿಲಯಗಳಿಗೆ ಕೆ.ಕೆ.ಆರ್.ಡಿ.ಬಿ. ಅನುದಾನದಲ್ಲಿ ಸ್ವಂತ ಕಟ್ಟಡ ನಿರ್ಮಾಣಕ್ಕೆ ಮಂಜೂರಾತಿ ದೊರಕಿದೆ. ಜಿಲ್ಲೆಯಲ್ಲಿ ಒಟ್ಟು 7 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 4 ವಸತಿ ಶಾಲೆಗಳಿಗೆ ಸ್ವಂತ ಕಟ್ಟಡಗಳಿವೆ. 3 ವಸತಿ ಶಾಲೆಗಳಿಗೆ ನಿವೇಶನಗಳು ಲಭ್ಯವಿದ್ದು, ಕನಕಗಿರಿ ಹಾಗೂ ಹನುಮನಾಳ ವಸತಿ ಶಾಲೆಗಳ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದೆ ಎಂದು ಹೇಳಿದರು.

ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಶಿಕ್ಷಣದಿಂದ ವಂಚಿತರಾಗಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಿಂದ ದೂರ ಶಿಕ್ಷಣ ಮಾದ–ರಿಯಲ್ಲಿ ಉಚಿತ ಶಿಕ್ಷಣವನ್ನು ನೀಡಲಾಗುತ್ತಿದೆ ಎಂದರು.

ಶಿಕ್ಷಣ ಇಲಾಖೆ: 2025–26ನೇ ಸಾಲಿನಲ್ಲಿ ಅಕ್ಷರ ಆವಿಷ್ಕಾರ ಯೋಜನೆಯಡಿ ಜಿಲ್ಲೆಯ ಶಾಲೆಗಳಿಗೆ ಮೂಲಭೂತ ಸೌಲಭ್ಯ ಒದಗಿಸಲು ಮತ್ತು ಶೈಕ್ಷಣಿಕ ಅಭಿವೃದ್ಧಿಗಾಗಿ ರೂ.59.09 ಕೋಟಿಗಳ ಅನುದಾನವು ಮಂಜೂರಾಗಿರುತ್ತದೆ. ಕಾಮಗಾರಿಗಳ ಕ್ರಿಯಾ ಯೋಜನೆ ತಯಾ–ರಿಸುವುದು ಪ್ರಗತಿಯಲ್ಲಿವೆ. ಕೊಪ್ಪಳ ಜಿಲ್ಲೆಯ ಇಟಗಿ, ಟಣಕನಕಲ್, ತಳುವಗೇರಾ ಹಾಗೂ ಕನಕಗಿರಿ ಸೇರಿ ಜಿಲ್ಲೆಯಲ್ಲಿ ಒಟ್ಟು 4 ಸರಕಾರಿ ಆದರ್ಶ ಪದವಿ ಪೂರ್ವ ಕಾಲೇಜುಗಳನ್ನು 2025–26ನೇ ಸಾಲಿನಿಂದ ಪ್ರಾರಂಭ ಮಾಡಲಾಗಿದೆ. 2024–25ನೇ ಸಾಲಿಗೆ ಕೆ.ಕೆ.ಆರ್.ಡಿ.ಬಿ ಅನುದಾನದಿಂದ ಕುಕನೂರು ತಾಲೂಕಿನ ರಾಜೂರು–ಆಡೂರು ಹಾಗೂ ಯಲಬುರ್ಗಾ ತಾಲೂಕಿನ ಮುಧೋಳ–ಕರಮುಡಿ ಸೇರಿ ಜಿಲ್ಲೆಯಲ್ಲಿ 2 ಹೊಸ ಪದವಿ ಪೂರ್ವ ಕಾಲೇಜುಗಳು ಮಂಜೂರಾಗಿರುತ್ತವೆ ಎಂದು ತಿಳಿಸಿದರು. ಜಿಲ್ಲಾ ನಗರಾಭಿವೃದ್ಧಿ ಕೋಶ: ಕೊಪ್ಪಳ ಜಿಲ್ಲೆಯ 7 ನಗರ ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸಲು ಅಮೃತ 2.0 ಯೋಜನೆಯಡಿಯಲ್ಲಿ ಕೊಪ್ಪಳ–ಭಾಗ್ಯನಗರ ಸಂಯುಕ್ತ ಕುಡಿಯವ ನೀರಿನ ಯೋಜನೆಯ ಕಾಮಗಾರಿ ಮೊತ್ತ ರೂ.139.94 ಕೋಟಿ, ಯಲಬುರ್ಗಾ–ಕುಕನೂರು ಸಂಯುಕ್ತ ಕುಡಿಯವ ನೀರಿನ ಯೋಜನೆಯ ಕಾಮಗಾರಿ ಮೊತ್ತ ರೂ.242.23 ಕೋಟಿ. ಕನಕಗಿರಿ–ಕಾರಟಗಿ ಸಂಯುಕ್ತ ಕುಡಿಯವ ನೀರಿನ ಯೋಜನೆಯ ಕಾಮಗಾರಿ ಮೊತ್ತ 195.79 ಕೋಟಿ ರೂಪಾಯಿ ಮೊತ್ತಕ್ಕೆ ಗುತ್ತಿಗೆದಾರ–ರಿಗೆ ಕಾಮಗಾರಿ ಆದೇಶ ನೀಡಲಾಗಿದೆ. ಕುಷ್ಟಗಿ ಕುಡಿಯವ ನೀರಿನ ಯೋಜನೆಯ 28 ಕೋಟಿ ರೂ. ಮೊತ್ತದ ಕಾಮಗಾರಿ ಪ್ರಗತಿಯಲ್ಲಿರುತ್ತದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ: 2024–25ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನದಲ್ಲಿ 265 ಶಾಲೆಗಳಿಗೆ ಹೊಸ ಕೊಠಡಿಗಳ ನಿರ್ಮಾಣ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಸದರಿ ಅನುದಾನದಲ್ಲಿ 18 ಹೊಸ ಅಂಗನವಾಡಿಗಳು ಮತ್ತು 4 ಬಾಲ ಭವನಗಳನ್ನು ನಿರ್ಮಾಣ ಮಾಡಲು ಉದ್ದೇಶಿಸಲಾಗಿದ್ದು, 7 ಸಮುದಾಯ ಆರೋಗ್ಯ ಕೇಂದ್ರಗಳಿಗೆ ವೈದ್ಯಕೀಯ ಉಪಕರಣಗಳನ್ನು ಖರೀದಿಸಲಾಗಿದೆ ಹಾಗೂ 6 ಪ್ರಾಥಮಿಕ ಆರೋಗ್ಯ ಕೇಂದ್ರಗಳ ನಿರ್ಮಾಣ ಮತ್ತು ವೈದ್ಯಕೀಯ ಉಪಕರಣಗಳನ್ನು ಖರೀದಿಸಲಾಗಿದೆ. ಜಿಲ್ಲೆಯಲ್ಲಿ 29 ವಸತಿ ನಿಲಯಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಮುನಿರಾಬಾದ ತೋಟಗಾರಿಕೆ ಮಹಾವಿದ್ಯಾಲಯಕ್ಕೆ 2024–25ನೇ ಸಾಲಿನಲ್ಲಿ ಸದರಿ ಅನುದಾನದಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆ ಮತ್ತು ಪ್ರಯೋಗಾಲಯ ಉಪಕರಣಗಳನ್ನು ಖರೀದಿಸಲಾಗಿದೆ ಎಂದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ಸ್ಥಾಪನೆಯಿಂದ ನಮ್ಮ ಭಾಗದ ಸರ್ವತೋಮುಖ ಅಭಿವೃದ್ಧಿಗೆ ತುಂಬಾ ಅನುಕೂಲವಾಗಿದೆ. 2025–26ನೇ ಸಾಲಿನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಯೋಜನೆ ಅಡಿಯಲ್ಲಿ ಕೊಪ್ಪಳ ಜಿಲ್ಲೆಗೆ ಮೈಕ್ರೋ ವಲಯದಲ್ಲಿ ರೂ. 236.39 ಕೋಟಿ ಹಾಗೂ ಮ್ಯಾಕ್ರೋ ವಲಯದಲ್ಲಿ ರೂ. 99.68 ಕೋಟಿ ಹೀಗೆ ಒಟ್ಟು ರೂ. 336.08 ಕೋಟಿ ಅನುದಾನವನ್ನು ನಿಗದಿಪಡಿಸಲಾಗಿದೆ. ಜಿಲ್ಲೆಗೆ ನಿಗದಿಪಡಿಸಿದ ಅನುದಾನಕ್ಕೆ ಕ್ರಿಯಾ ಯೋಜನೆಯನ್ನು ರೂಪಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

ಕಾರ್ಮಿಕ ಇಲಾಖೆ: ಕಾರ್ಮಿಕ ಇಲಾಖೆಯಲ್ಲಿ ಜಿಲ್ಲೆಯಲ್ಲಿ ಒಟ್ಟು 1,65,649 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೊಂದಣಿಯಾಗಿದ್ದು, ನೊಂದಾಯಿತ ಕಟ್ಟಡ ಕಾರ್ಮಿಕರಿಗಾಗಿ ವಿವಿಧ ಸೌಲಭ್ಯಗಳಾದ ಮದುವೆ ಧನಸಹಾಯ, ಹೆರಿಗೆ ಸೌಲಭ್ಯ, ಅಂತ್ಯಕ್ರಿಯೆ ವೆಚ್ಚ, ಪಿಂಚಣಿ ಸೌಲಭ್ಯ, ದುರ್ಬಲತೆ ಪಿಂಚಣಿ, ಟ್ರೈನಿಂಗ್ ಕಮ್ ಟೂಲ್‌ಕಿಟ್ ಸೌಲಭ್ಯ, ವಸತಿ ಸೌಲಭ್ಯ, ತಾಯಿ ಮಗು ಸಹಾಯ ಹಸ್ತ, ವೈದ್ಯಕೀಯ ಸಹಾಯಧನ, ಅಪಘಾತ ಪರಿಹಾರ, ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ, ಶೈಕ್ಷಣಿಕ ಧನಸಹಾಯ ಸೌಲಭ್ಯಗಳನ್ನು ನೀಡುತ್ತಿದೆ ಎಂದರು. ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ: ಮರಣ ಹೊಂದಿದ ಕುರಿ, ಮೇಕೆ ಮಾಲೀಕರಿಗೆ ಅನುಗ್ರಹ ಕೊಡುಗೆ ಯೋಜನೆಯಡಿ ಪರಿಹಾರ ಧನ ವಿತರಿಸುವುದು ಆಕಸ್ಮಿಕ ಮರಣಹೊಂದಿದ 3 ರಿಂದ 6 ತಿಂಗಳ ಕುರಿ–ಮೇಕೆ ಮರಿಗಳಿಗೆ ರೂ. 3500 ಮತ್ತು 6 ತಿಂಗಳ ಮೇಲ್ಪಟ್ಟ ಕುರಿ–ಮೇಕೆ ಮಾಲೀಕರಿಗೆ ಗರಿಷ್ಟ ರೂ. 5000 ಗಳ ಪರಿಹಾರಧನವನ್ನು ವಿತರಿಸಲಾಗುತ್ತಿದೆ. 2024–25ನೇ ಸಾಲಿನಲ್ಲಿ ಒಟ್ಟು 8,410 ಕುರಿ–ಮೇಕೆಗಳ 7,802 ಮಾಲೀಕರಿಗೆ ರೂ. 414 ಲಕ್ಷ ಪರಿಹಾರ ಧನವನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಸಕಲ ಜಾತಿ, ಧರ್ಮ, ಭಾಷೆ, ಪ್ರದೇಶಗಳ ಜನರೆಲ್ಲಾ ಒಗ್ಗಟ್ಟಾಗಿ ಬೃಹತ್ ಪ್ರಜಾ ಪ್ರಭುತ್ವದ ಯಶಸ್ಸಿಗಾಗಿ ನಾವೆಲ್ಲರೂ ಸಹೋದರತ್ವದಿಂದ ಬಾಳುತ್ತಿದ್ದೇವೆ. ಬಹುಜನರ ಒಳಿತಿಗಾಗಿ ಬಹುಜನರ ಕಲ್ಯಾಣಕ್ಕಾಗಿ ಎಂಬ ಮಂತ್ರವನ್ನು ಸಾರುತ್ತಾ ಭವ್ಯಭಾರತ ಕಟ್ಟುವ ಸಂಕಲ್ಪ ಮಾಡೋಣ, ಭಾರತಕ್ಕೊಂದು ಹೊಸ ಭಾಷ್ಯ ಬರೆಯೋಣ ಎಂಬ ಸಂದೇಶವನ್ನು ಸಾರುತ್ತಾ ಮತ್ತೊಮ್ಮೆ ತಮಗೆಲ್ಲರಿಗೂ ಸ್ವಾತಂತ್ರ್ಯೋತ್ಸವ ದಿನಾಚರಣೆಯ ಶುಭಾಷಯಗಳನ್ನು ತಿಳಿಸುತ್ತೇನೆ ಎಂದು ಹೇಳಿದರು.

ಸಂಗೊಳ್ಳಿ ರಾಯಣ್ಣ ಭಾವಚಿತ್ರಕ್ಕೆ ಪುಷ್ಪಾರ್ಚನೆ: ಸ್ವಾತಂತ್ರ್ಯ ಹೋರಾಟಗಾರ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಜಯಂತಿ ಪ್ರಯುಕ್ತ ಧ್ವಜಾರೋಹಣ ಕಾರ್ಯಕ್ರಮಕ್ಕೂ ಪೂರ್ವದಲ್ಲಿ ಸಚಿವರು, ಶಾಸಕರು ಮತ್ತು ಸಂಸದರು ಸೇರಿದಂತೆ ಇತರೆ ಜನಪ್ರತಿನಿಧಿಗಳು ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು.

ಆಕರ್ಷಕ ಪಥಸಂಚಲನ: 79ನೇ ಸ್ವಾತಂತ್ರ್ಯೋತ್ಸವ ದಿನಾಚರಣೆ ನಿಮಿತ್ತ ಪೊಲೀಸ್ ಇಲಾಖೆ, ಸಶಸ್ತ್ರ ಮೀಸಲು ಪಡೆ, ಗೃಹ ರಕ್ಷಕದಳ, ಭಾರತ ಸೇವಾದಳ, ಎನ್.ಸಿ.ಸಿ, ಭಾರತ್ ಸ್ಕೌಟ್ಸ್ & ಗೈಡ್ಸ್ ತಂಡಗಳು ಜಿಲ್ಲಾ ಕ್ರೀಡಾಂಗಣದಲ್ಲಿ ಆಕರ್ಷಕ ಪಥಸಂಚಲನ ನಡೆಸಿ, ಸಚಿವರಿಗೆ ಗೌರವ ವಂದನೆ ಸಲ್ಲಿಸಿದವು.

ಸನ್ಮಾನ: ಕೊಪ್ಪಳ ಜಿಲ್ಲೆಯ ಕವಲೂರು ಗ್ರಾಮದ ಸ್ವಾತಂತ್ರ್ಯ ಹೋರಾಟಗಾರ ಹನುಮಂತಗೌಡ ಪಾಟೀಲ್ ಮತ್ತು ರಾಯಚೂ–ರಿನ ಕೃಷಿ ವಿಶ್ವವಿದ್ಯಾಲಯದಿಂದ ಇತ್ತೀಚೆಗೆ ಗೌರವ ಡಾಕ್ಟರೇಟ್ ಪಡೆದ ಜಿಲ್ಲೆಯ ಪ್ರಗತಿಪರ ರೈತರಾದ ದೇವೇಂದ್ರಪ್ಪ ಬಳೂಟಗಿ ಹಾಗೂ ಮುಖ್ಯಮಂತ್ರಿಗಳ ಪದಕಕ್ಕೆ ಪುರಸ್ಕೃತಗೊಂಡ ಪೊಲೀಸ್ ಇಲಾಖೆಯ ಭೀಮಸೇನರಾವ್ ಕುಲಕರ್ಣಿ, ಮೌನೇಶ್ವರ ಮಾಲಿಪಾಟೀಲ್ ಮತ್ತು ಪರುಶುರಾಮ ಗರೇಬಾಳ ಅವರಿಗೆ ಹಾಗೂ ಇತರೆ ಸಾಧಕರಿಗೂ ಈ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಲ್ಯಾಪ್‌ಟಾಪ್ ವಿತರಣೆ ಮತ್ತು ಪ್ರತಿಭಾ ಪುರಸ್ಕಾರ: ಈ ಕಾರ್ಯಕ್ರಮದಲ್ಲಿ ಎಸ್.ಎಸ್. ಎಲ್.ಸಿ ಹಾಗೂ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ಕೊಪ್ಪಳ ಜಿಲ್ಲೆಯ ಮತ್ತು ಕೊಪ್ಪಳ ತಾಲ್ಲೂಕಿನ ಮೂರು ಟಾಪರ್ ವಿದ್ಯಾರ್ಥಿಗಳಿಗೆ ಶಿಕ್ಷಣ ಇಲಾಖೆಯಿಂದ ಪ್ರೋತ್ಸಾಹದಾಯಕವಾಗಿ ಲ್ಯಾಪ್‌ಟಪ್‌ಗಳನ್ನು ವಿತರಣೆ ಮಾಡಲಾಯಿತು ಮತ್ತು ಎಸ್.ಎಸ್. ಎಲ್.ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರವನ್ನು ನೀಡಲಾಯಿತು. ಸಾಂಸ್ಕೃತಿಕ ಕಾರ್ಯಕ್ರಮ, ಬಹುಮಾನ ವಿತರಣೆ: ಸ್ವಾತಂತ್ರ್ಯೋತ್ಸವ ದಿನಾಚರಣೆ ಪ್ರಯುಕ್ತ ಕೊಪ್ಪಳದ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಮತ್ತು ಜ್ಞಾನಬಂಧು ಪಿಯು ಕಾಲೇಜು ವಿದ್ಯಾರ್ಥಿಗಳು ದೇಶಭಕ್ತಿ ಗೀತೆಗಳಿಗೆ ನೃತ್ಯ ಮಾಡಿ, ಎಲ್ಲ ಗಮನ ಸೆಳೆದ ವಿದ್ಯಾರ್ಥಿಗಳಿಗೆ ಮತ್ತು ಪಥ–ಸಂಚಲನದಲ್ಲಿ ಭಾಗವಹಿಸಿದ ತಂಡಗಳಿಗೆ ಪ್ರಶಸ್ತಿ ಪತ್ರಗಳನ್ನು ನೀಡಿ, ಸನ್ಮಾನಿಸಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಅವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ, ಕೊಪ್ಪಳ ನಗರಸಭೆ ಅಧ್ಯಕ್ಷರಾದ ಅಮ್ಜದ್ ಪಟೇಲ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕೆ.ಶ್ರೀನಿವಾಸ್ ಗುಪ್ತಾ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ್, ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಅಪರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಮಂತ್ ಕುಮಾರ್, ಕೊಪ್ಪಳ ತಹಶಿಲ್ದಾರ ವಿಠ್ಠಲ ಚೌಗಲಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ್ ಸೇರಿದಂತೆ ಇತರೆ ವಿವಿಧ ಇಲಾಖೆಗಳ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿ, ಸಿಬ್ಬಂದಿಗಳು ಮತ್ತು ವಿವಿಧ ಶಾಲಾ ಕಾಲೇಜುಗಳಿಂದ ಆಗಮಿಸಿದ ವಿದ್ಯಾರ್ಥಿಗಳು, ಶಿಕ್ಷಕರು ಸೇರಿದಂತೆ ಇತರೆ ಹಲವಾರು ಜನರು ಉಪಸ್ಥಿತರಿದ್ದರು.

****

